VOLUME: 16 | 13 JUNE 2026 | ಶನಿವಾರ | RS: 2 | PAGE: 06 | ISSUE: 123 | ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ಮದುವೆಯ ನಂತರ ಸಾಮಾಜಿಕ ಜಾಲತಾಣಗಳಲ್ಲಿ ಅಷ್ಟೇನೂ ಫೋಟೋಗಳನ್ನು ರಶ್ಮಿಕಾ ಅಪ್‌ಡೇಟ್ ಮಾಡುತ್ತಿರಲಿಲ್ಲ. ಆದರೆ ಕಳೆದ 10 ದಿನಗಳಿಂದ ಅಪ್‌ಲೋಡ್ ಮಾಡಿದ ಇವರ ಎಲ್ಲಾ ಚಿತ್ರಗಳಿಗೆ ಹೆಚ್ಚು ಲೈಕ್ ಮತ್ತು ಕಮೆಂಟ್ ಬಂದಿವೆ....



BHARATHA SARATHI
KANNADA DAILY NEWS PAPER
CALL 9740160669

# ಭಾರತ ಸಾರಥಿ

RNI KARKAN2011/44806
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ
prabhavaa.com



ಸಂಪಾದಕ
ಗಂಡಸಿ ಸದಾನಂದಸ್ವಾಮಿ



## ಯುದ್ಧ ಅಂತ್ಯ: ಟ್ರಂಪ್

ನವದೆಹಲಿ: ಇರಾನ್‌ನೊಂದಿಗೆ ನಡೆಯುತ್ತಿರುವ ಸಂಘರ್ಷವನ್ನು ಕೊನೆಗೊಳಿಸುವ ಒಪ್ಪಂದವು ಬಹುತೇಕ ಅಂತಿಮ ಹಂತ ತಲುಪಿದ್ದು, ಈ ವಾರಾಂತ್ಯದಲ್ಲೇ ಯುರೋಪಿನಲ್ಲಿ ಅದಕ್ಕೆ ಸಹಿ ಹಾಕುವ ಸಾಧ್ಯತೆ ಇದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಿಳಿಸಿದ್ದಾರೆ.

ಇದೇ ದಿನ ಇರಾನ್‌ನ ತೈಲ ಉದ್ಯಮವನ್ನು ಗುರಿಯಾಗಿಸಿ ಕ್ರಮ ಕೈಗೊಳ್ಳುವ ಬೆದರಿಕೆ ನೀಡಿದ್ದ ಟ್ರಂಪ್, ಬಳಿಕ ಯೋಜಿತ ಸೇನಾ ದಾಳಿಗಳನ್ನು ರದ್ದುಗೊಳಿಸಿದ್ದರು.

ಶ್ವೇತಭವನದ ಓವಲ್ ಕಚೇರಿಯಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಡೊನಾಲ್ಡ್ ಟ್ರಂಪ್, ಉಪಾಧ್ಯಕ್ಷ ಜೆ.ಡಿ. ವ್ಯಾನ್ಸ್ ಅವರು ಒಪ್ಪಂದದ ಸಹಿ ಸಮಾರಂಭದಲ್ಲಿ ಭಾಗವಹಿಸುವ ನಿರೀಕ್ಷೆಯಿದ್ದು, ಅದು ವಾರಾಂತ್ಯದಲ್ಲಿ ಯುರೋಪಿನಲ್ಲಿ ನಡೆಯಬಹುದು ಎಂದು ಹೇಳಿದರು.

ಇತ್ತೀಚಿನ ಮಾತುಕತೆಗಳ ಕುರಿತು ಕತಾರ್, ಯುಎಇ, ಸೌದಿ ಅರೇಬಿಯಾ, ಬಹರೈನ್, ಕುವೈತ್ ಹಾಗೂ ಪಾಕಿಸ್ತಾನ ಸೇರಿದಂತೆ ಹಲವು ಮಧ್ಯಪ್ರಾಚ್ಯ ರಾಷ್ಟ್ರಗಳ ನಾಯಕರೊಂದಿಗೆ ತಾವು ಮಾತುಕತೆ ನಡೆಸಿರುವುದಾಗಿ ಟ್ರಂಪ್ ತಿಳಿಸಿದರು.

ನಂತರ ಜಾರ್ಜಿಯಾದ ಲೆಫ್ಟಿನೆಂಟ್ ಗವರ್ನರ್ ಬರ್ಟ್ ಜೋನ್ಸ್ ಅವರ ಪರವಾಗಿ ನಡೆದ ದೂರವಾಣಿ ಪ್ರಚಾರ ಸಭೆಯಲ್ಲಿ ಮಾತನಾಡಿದ ಟ್ರಂಪ್, ಅಮೆರಿಕವು ಇರಾನ್‌ನೊಂದಿಗಿನ ಯುದ್ಧವನ್ನು ಪರಿಣಾಮಕಾರಿಯಾಗಿ ಕೊನೆಗೊಳಿಸಿದೆ ಎಂದು ಘೋಷಿಸಿದರು.

ನಾವು ಇರಾನ್‌ನೊಂದಿಗಿನ ಯುದ್ಧವನ್ನು ಕೊನೆಗೊಳಿಸಿದ್ದೇವೆ. ಅವರು ಎಂದಿಗೂ ಅಣ್ವಸ್ತ್ರವನ್ನು ಹೊಂದುವುದಿಲ್ಲ ಎಂದು ಒಪ್ಪಿಕೊಂಡಿದ್ದಾರೆ. ನಾವು ಇದೇ ವಿಷಯ ಒತ್ತಾಯಿಸಿದ್ದೆವು. ಅದೇ ಈ ಪ್ರಯತ್ನದ ಮುಖ್ಯ ಉದ್ದೇಶವಾಗಿತ್ತು ಎಂದು ಟ್ರಂಪ್ ಹೇಳಿದರು.


ಇದಕ್ಕೂ ಮೊದಲು ಓವಲ್ ಕಚೇರಿಯಲ್ಲಿ ಮಾತನಾಡಿದ ಅವರು, ಈ ಬೆಳವಣಿಗೆಗೆ ಹಣಕಾಸು ಮಾರುಕಟ್ಟೆಗಳು ಸಕಾರಾತ್ಮಕವಾಗಿ ಪ್ರತಿಕ್ರಿಯಿಸಿವೆ ಎಂದು ಹೇಳಿ, ಶೀಘ್ರದಲ್ಲೇ ಅಧಿಕೃತ ಒಪ್ಪಂದಕ್ಕೆ ಸಹಿ ಹಾಕಲಾಗುವುದು ಎಂದು ಸೂಚಿಸಿದರು. ಒಪ್ಪಂದ ಅಂತಿಮಗೊಂಡ ಬಳಿಕ ಹಾರ್ಮುಜ್ ಜಲಸಂಧಿಯನ್ನು ಪುನಃ ತೆರೆಯಲಾಗುವುದು ಎಂದೂ ಹೇಳಿದರು.

ಇದು ಅತ್ಯಂತ ಬಲಿಷ್ಠ ತಿಳುವಳಿಕೆ ಒಪ್ಪಂದ ಆಗಿದೆ. ಇದು ತಾತ್ವಿಕ ಸ್ವರೂಪದ್ದಾಗಿದ್ದರೂ, ಶೀಘ್ರದಲ್ಲೇ ಕಾರ್ಯರೂಪಕ್ಕೆ ಬರಲಿದೆ ಎಂದು ಟ್ರಂಪ್ ಹೇಳಿದರು. ಇದು ಅತ್ಯಂತ ವಿವರವಾದ ತಿಳುವಳಿಕೆ ಒಪ್ಪಂದವಾಗಿದೆ ಎಂದೂ ಅವರು ಹೇಳಿದರು.

ಇರಾನ್ ಅಣ್ವಸ್ತ್ರಗಳನ್ನು ಪಡೆಯುವ ಯಾವುದೇ ಪ್ರಯತ್ನವನ್ನು ಶಾಶ್ವತವಾಗಿ ಕೈಬಿಡಲು ಒಪ್ಪಿಕೊಂಡಿದೆ ಎಂದು ಟ್ರಂಪ್ ಮತ್ತೊಮ್ಮೆ ಪ್ರತಿಪಾದಿಸಿದರು.



ನವದೆಹಲಿ: ಸಿಎಂ ಡಿ.ಕೆ.ಶಿವಕುಮಾರ್ ಅವರು ಇಂದು ಶುಕ್ರವಾರ ರಾಷ್ಟ್ರಪತಿ ದ್ರೌಪತಿ ಮುರ್ಮು ಅವರನ್ನು ಭೇಟಿ ಆಗಿ ರಾಜ್ಯದ ಅಭಿವೃದ್ಧಿ ಬಗ್ಗೆ ಚರ್ಚೆ ನಡೆಸಿದರು.



ತಮಿಳುನಾಡು ಮುಖ್ಯಮಂತ್ರಿ ಹಾಗೂ ಖ್ಯಾತ ನಟ ದಳಪತಿ ವಿಜಯ್ ಅವರು ಕರ್ನಾಟಕದ ಪ್ರಸಿದ್ಧ ಶಕ್ತಿಪೀಠವಾದ ಕೊಲ್ಲೂರು ಶ್ರೀ ಮೂಕಾಂಬಿಕಾ ದೇವಸ್ಥಾನಕ್ಕೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದ್ದಾರೆ. ಈ ಭೇಟಿಯ ಬೆನ್ನಲ್ಲೇ ಅವರು ದೇವಿಯ ಸನ್ನಿಧಿಯಲ್ಲಿ ಮಾಡಿಕೊಂಡಿದ್ದಾರೆನ್ನಲಾದ 'ಶತ್ರು ಸಂಹಾರ ಸಂಕಲ್ಪ' ಈಗ ರಾಜಕೀಯ ಹಾಗೂ ಸಿನಿಮಾ ವಲಯದಲ್ಲಿ ಭಾರೀ ಚರ್ಚೆಗೆ ಕಾರಣವಾಗಿದೆ.

ನಗರಾಭಿವೃದ್ಧಿ ಇಲಾಖೆ ರೈತರು ಅಗತ್ಯ ದಾಖಲೆಗಳನ್ನು ಸಲ್ಲಿಸಿ ಪರಿಹಾರ ಪಡೆದುಕೊಳ್ಳುವಂತೆ ಸೂಚನೆ ನೀಡಿದ್ದು, ಪ್ರತಿ ಎಕರೆಗೆ ಕನಿಷ್ಠ 2.14 ಕೋಟಿ ರೂಪಾಯಿ ಪರಿಹಾರ ದರ ನಿಗದಿಪಡಿಸಲಾಗಿದೆ. ಸರ್ಕಾರದ ಈ ಕ್ರಮ ರಾಜ್ಯ ರಾಜಕೀಯ ಹಾಗೂ ರೈತರ ವಲಯದಲ್ಲಿ ಭಾರೀ ಚರ್ಚೆಗೆ ಕಾರಣವಾಗಿದೆ. ಕಳೆದ ಒಂದೂವರೆ ವರ್ಷಗಳಿಂದ ಬಿಡದಿ ಟೌನ್‌ಶಿಪ್ ಯೋಜನೆಗೆ ವಿರೋಧ ವ್ಯಕ್ತಪಡಿಸುತ್ತಿರುವ ರೈತರು ನಿರಂತರ ಹೋರಾಟ ನಡೆಸುತ್ತಿದ್ದು, ಕೃಷಿ ಭೂಮಿ ಕಳೆದುಕೊಳ್ಳುವ ಆತಂಕ ವ್ಯಕ್ತಪಡಿಸಿದ್ದಾರೆ.

# ಬಿಡದಿ ಟೌನ್‌ಶಿಪ್‌ಗೆ ಅಂತಿಮ ಅಧಿಸೂಚನೆ

ರಾಮನಗರ: ಬಹುಚರ್ಚಿತ ಬಿಡದಿ ಟೌನ್‌ಶಿಪ್ ಯೋಜನೆಗೆ ಸಂಬಂಧಿಸಿದಂತೆ ರೈತರ ತೀವ್ರ ವಿರೋಧದ ನಡುವೆಯೂ ರಾಜ್ಯ ಸರ್ಕಾರ ಮಹತ್ವದ ಹೆಜ್ಜೆ ಇಟ್ಟಿದ್ದು, ಭೂಸ್ವಾಧೀನಕ್ಕೆ ಸಂಬಂಧಿಸಿದ ಅಂತಿಮ ಅಧಿಸೂಚನೆಯನ್ನು ಪ್ರಕಟಿಸಿದೆ.

ಯೋಜನಾ ವ್ಯಾಪ್ತಿಯ ಒಟ್ಟು 9 ಕಂದಾಯ ಗ್ರಾಮಗಳ ಪೈಕಿ ಪ್ರಾರಂಭಿಕ ಹಂತದಲ್ಲಿ ಮೂರು ಗ್ರಾಮಗಳ ಸುಮಾರು 518 ಎಕರೆ ಭೂಸ್ವಾಧೀನ ಪ್ರಕ್ರಿಯೆಗೆ ಸರ್ಕಾರ ಅಧಿಕೃತ ಚಾಲನೆ ನೀಡಿದೆ. ಬಿಡದಿ ಹೋಬಳಿಯ ಕೆಂಪಯ್ಯನಪಾಳ್ಯ, ಮಂಡಲಹಳ್ಳಿ ಹಾಗೂ ವಡೇರಹಳ್ಳಿ ಗ್ರಾಮಗಳ ಸುಮಾರು 754 ರೈತರ ಜಮೀನುಗಳನ್ನು ಭೂಸ್ವಾಧೀನಕ್ಕೆ ಒಳಪಡಿಸಲಾಗುತ್ತಿದೆ.

ನಗರಾಭಿವೃದ್ಧಿ ಇಲಾಖೆ ರೈತರು ಅಗತ್ಯ ದಾಖಲೆಗಳನ್ನು ಸಲ್ಲಿಸಿ ಪರಿಹಾರ ಪಡೆದುಕೊಳ್ಳುವಂತೆ ಸೂಚನೆ ನೀಡಿದ್ದು, ಪ್ರತಿ ಎಕರೆಗೆ ಕನಿಷ್ಠ 2.14 ಕೋಟಿ ರೂಪಾಯಿ ಪರಿಹಾರ ದರ ನಿಗದಿಪಡಿಸಲಾಗಿದೆ.




ಸರ್ಕಾರದ ಈ ಕ್ರಮ ರಾಜ್ಯ ರಾಜಕೀಯ ಹಾಗೂ ರೈತರ ವಲಯದಲ್ಲಿ ಭಾರೀ ಚರ್ಚೆಗೆ ಕಾರಣವಾಗಿದೆ.

ಕಳೆದ ಒಂದೂವರೆ ವರ್ಷಗಳಿಂದ ಬಿಡದಿ ಟೌನ್‌ಶಿಪ್ ಯೋಜನೆಗೆ ವಿರೋಧ ವ್ಯಕ್ತಪಡಿಸುತ್ತಿರುವ ರೈತರು ನಿರಂತರ ಹೋರಾಟ ನಡೆಸುತ್ತಿದ್ದು, ಕೃಷಿ ಭೂಮಿ ಕಳೆದುಕೊಳ್ಳುವ ಆತಂಕ ವ್ಯಕ್ತಪಡಿಸಿದ್ದಾರೆ.

ಆದರೂ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಈ ಯೋಜನೆಯನ್ನು ಪ್ರತಿಷ್ಠೆಯ ವಿಚಾರವಾಗಿ ಪರಿಗಣಿಸಿ, ಯಾವುದೇ ಹಂತದಲ್ಲೂ ಹಿಂದೆ ಸರಿಯದೆ ಯೋಜನೆ ಅನುಷ್ಠಾನ ಪ್ರಕ್ರಿಯೆಯನ್ನು ಮುಂದುವರೆಸುತ್ತಿದ್ದಾರೆ ಎನ್ನಲಾಗಿದೆ.

ಇನ್ನೊಂದೆಡೆ ರೈತರ ಹೋರಾಟಕ್ಕೆ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಬೆಂಬಲ ಸೂಚಿಸಿದ್ದು, ಸರ್ಕಾರದ ವಿರುದ್ಧ ರೈತರ ಹೋರಾಟ ಮತ್ತಷ್ಟು ತೀವ್ರಗೊಳ್ಳುವ ಸಾಧ್ಯತೆಗಳು ಕಾಣಿಸುತ್ತಿವೆ. ಯೋಜನೆ ಕುರಿತ ರಾಜಕೀಯ ಸಂಘರ್ಷ ಕೂಡ ಮುಂದಿನ ದಿನಗಳಲ್ಲಿ ಹೆಚ್ಚಾಗುವ ಸಾಧ್ಯತೆ ಇದೆ. ಒಟ್ಟಾರೆ ಬಿಡದಿ ಟೌನ್‌ಶಿಪ್ ಯೋಜನೆ ಇದೀಗ ರಾಜ್ಯ ರಾಜಕೀಯ ಹಾಗೂ ರೈತರ ಹೋರಾಟದ ಕೇಂದ್ರಬಿಂದುವಾಗಿ ಪರಿಣಮಿಸಿದ್ದು, ಸರ್ಕಾರದ ಮುಂದಿನ ನಡೆ ಮತ್ತು ರೈತರ ಪ್ರತಿಕ್ರಿಯೆ ಕುತೂಹಲ ಮೂಡಿಸಿದೆ.

## ವೈದ್ಯಕೀಯ ಕೋರ್ಸ್‌ಗಳ ಶುಲ್ಕ ಯಥಾಸ್ಥಿತಿ

ಬೆಂಗಳೂರು: ವೈದ್ಯಕೀಯ ವಿದ್ಯಾರ್ಥಿಗಳಿಗೆ ರಾಜ್ಯ ಸರ್ಕಾರ ಸಿಹಿ ಸುದ್ದಿ ಕೊಟ್ಟಿದೆ. ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ವೈದ್ಯಕೀಯ, ದಂತ ವೈದ್ಯಕೀಯ, ಸ್ನಾತಕ ಹಾಗೂ ಸ್ನಾತಕೋತ್ತರ ಕೋರ್ಸ್‌ಗಳ ಶುಲ್ಕವನ್ನು ಹೆಚ್ಚಳ ಮಾಡದೇ ಯಥಾಸ್ಥಿತಿಯನ್ನೇ ಮುಂದುವರೆಸುವ ಮಹತ್ವದ ತೀರ್ಮಾನವನ್ನು ರಾಜ್ಯ ಸರ್ಕಾರ ತೆಗೆದುಕೊಂಡಿದೆ.

ಸರ್ಕಾರದ ಇಂತಹ ನಿರ್ಧಾರದಿಂದಾಗಿ ಈ ಬಾರಿ ವೈದ್ಯಕೀಯ, ದಂತ ವೈದ್ಯಕೀಯ, ಸ್ನಾತಕ ಹಾಗೂ ಸ್ನಾತಕೋತ್ತರ ಕೋರ್ಸ್‌ಗಳ ಶುಲ್ಕ ಹೆಚ್ಚಳವಾಗುತ್ತದೆ ಎಂಬ ಆತಂಕದಲ್ಲಿದ್ದ ವಿದ್ಯಾರ್ಥಿಗಳು ಹಾಗೂ ಪೋಷಕರು ನೆಮ್ಮದಿಯ ನಿಟ್ಟುಸಿರು ಬಿಡುವಂತಾಗಿದೆ. ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಅವರ ಅಧ್ಯಕ್ಷತೆಯಲ್ಲಿ ಖಾಸಗಿ ವೈದ್ಯಕೀಯ ಮತ್ತು ದಂತ ವೈದ್ಯಕೀಯ ಕಾಲೇಜು ಆಡಳಿತ ಮಂಡಳಿಯವರೊಂದಿಗೆ ಶುಕ್ರವಾರ ವಿಕಾಸಸೌಧದಲ್ಲಿ ನಡೆದ ಸಭೆಯಲ್ಲಿ ಈ ಮಹತ್ವದ ತೀರ್ಮಾನವನ್ನು ತೆಗೆದುಕೊಳ್ಳಲಾಗಿದೆ.

ಸಭೆಯ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್, ಖಾಸಗಿ ಕಾಲೇಜು ಆಡಳಿತ ಮಂಡಳಿಗಳ ಶುಲ್ಕವನ್ನು ಹೆಚ್ಚಳ ಮಾಡಬೇಕೆಂಬ ಪ್ರಸ್ತಾವನೆಯನ್ನು ನಾವು ಒಪ್ಪಿಕೊಂಡಿಲ್ಲ. ಈ ಹಿಂದೆ ಅಂದರೆ 2025–26ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿದ್ದ ಶುಲ್ಕವು ಯಥಾಸ್ಥಿತಿಯಲ್ಲೇ ಮುಂದುವರೆಯಲಿದೆ ಎಂದು ಸ್ಪಷ್ಟಪಡಿಸಿದರು. ಪೋಷಕರು ಮತ್ತು ವಿದ್ಯಾರ್ಥಿಗಳು ಶುಲ್ಕ ಹೆಚ್ಚಳವಾಗುತ್ತದೆ ಎಂಬ ಆತಂಕಕ್ಕೆ ಒಳಗಾಗಬಾರದು. ಈಗಾಗಲೇ ವೈದ್ಯಕೀಯ ಕೋರ್ಸ್‌ಗಳ ಪ್ರವೇಶಾತಿಗೆ ನಡೆದಿದ್ದ ನೀಟ್ ಪ್ರವೇಶ ಪರೀಕ್ಷೆ ರದ್ದಾಗಿ ಮರುಪರೀಕ್ಷೆ ನಡೆಯಬೇಕಿರುವುದರಿಂದ ಒತ್ತಡಕ್ಕೆ ಒಳಗಾಗಿದ್ದಾರೆ. ಇಂತಹ ಸಮಯದಲ್ಲಿ ಶುಲ್ಕ ಹೆಚ್ಚಳ ಮಾಡುವುದು ಸರಿಯಲ್ಲ ಎಂಬ ತೀರ್ಮಾನ ಮಾಡಲಾಗಿದೆ ಎಂದರು.

ಖಾಸಗಿ ವೈದ್ಯಕೀಯ ಮತ್ತು ದಂತ ವೈದ್ಯಕೀಯ ಕಾಲೇಜು ಮಂಡಳಿಯವರು ಶುಲ್ಕ ಹೆಚ್ಚಳ ಮಾಡುವ ಪ್ರಸ್ತಾವನೆಗೆ ನಾವು ಅವಕಾಶವನ್ನೇ ಕೊಟ್ಟಿಲ್ಲ. ಹೀಗಾಗಿ ವಿದ್ಯಾರ್ಥಿಗಳು ಮತ್ತು ಪೋಷಕರು ಯಾವುದೇ ರೀತಿಯ ಊಹಾಪೋಹಕ್ಕೆ ಕಿವಿಗೊಡಬಾರದು ಎಂದು ಸಚಿವ ಶರಣಪ್ರಕಾಶ್ ಪಾಟೀಲ್ ಮನವಿ ಮಾಡಿದರು.

ಕಳೆದ ಸಾಲಿನಲ್ಲಿ ನಿಗದಿಪಡಿಸಿದ್ದ ಶುಲ್ಕವನ್ನೇ ಈ ಸಾಲಿನಲ್ಲೂ ಮುಂದುವರೆಸಲಾಗುವುದು. ಈ ನಿಯಮವು ಸರ್ಕಾರಿ ಮತ್ತು ಖಾಸಗಿ ವೈದ್ಯಕೀಯ ಕಾಲೇಜುಗಳೆರಡಕ್ಕೂ ಅನ್ವಯಿಸುತ್ತದೆ. ಈ ನಿರ್ಧಾರದಿಂದಾಗಿ ಪ್ರವೇಶ ಪಡೆಯಲಿರುವ ವಿದ್ಯಾರ್ಥಿಗಳಿಗೆ ಆರ್ಥಿಕ ಹೊರೆ ತಪ್ಪಿದಂತಾಗಿದೆ.

ಡೆಂಟಲ್‌ಗೆ ಶುಲ್ಕ ಏರಿಕೆ ಮಾಡುವಂತೆ ಕೋರಿದ್ದರು. ಆದರೆ, ನಾವು ಅದನ್ನು ನಿರಾಕರಿಸಿದ್ದೇವೆ.

# ಹೆಚ್ಚುತ್ತಲೇ ಇದೆ ಸಚಿವಾಕಾಂಕ್ಷಿಗಳ ಸಂಖ್ಯೆ

ಬೆಂಗಳೂರು: ಸಿಎಂ ಡಿ.ಕೆ.ಶಿವಕುಮಾರ್ ನೇತೃತ್ವದ ನೂತನ ಸರ್ಕಾರದ ಮೊದಲ ಹಂತದ ಸಂಪುಟ ರಚನೆಯಾದ ಬೆನ್ನಲ್ಲೇ ಇದೀಗ ಸಚಿವ ಸಂಪುಟ ವಿಸ್ತರಣೆಗೆ ಕಸರತ್ತು ಆರಂಭವಾಗಿದೆ. ಉಳಿದಿರುವ ಸುಮಾರು 20 ಖಾತೆಗಳಿಗಾಗಿ ಹೊಸಬರು, ಹಿರಿಯ ಶಾಸಕರು, ಮಾಜಿ ಸಚಿವರುಗಳಿಂದ ಪೈಪೋಟಿ, ಲಾಬಿ ತೀವ್ರವಾಗಿದೆ. ಸುಮಾರು 50ಕ್ಕೂ ಅಧಿಕ ಕೈ ಶಾಸಕರುಗಳು ಸಚಿವ ಸ್ಥಾನಕ್ಕಾಗಿ ಲಾಬಿ ನಡೆಸುತ್ತಿದ್ದಾರೆ.

13 ಸಚಿವರುಗಳೊಂದಿಗೆ ಸಿಎಂ ಡಿಕೆಶಿ ನೇತೃತ್ವದ ಹೊಸ ಸರ್ಕಾರ ರಚನೆಯಾಗಿ ವಾರ ಕಳೆದಿದೆ. ಇದೀಗ ಸಂಪೂರ್ಣ ಸಚಿವ ಸಂಪುಟ ರಚನೆಗೆ ಸಿಎಂ ಡಿ.ಕೆ.ಶಿವಕುಮಾರ್ ತಯಾರಿ ಆರಂಭಿಸಿದ್ದಾರೆ. ಜೂನ್ 18ರ ಬಳಿಕ ಉಳಿದಿರುವ ಸುಮಾರು 20 ಖಾತೆಗಳನ್ನೂ ಭರ್ತಿ ಮಾಡಲಾಗುವುದು. ದೆಹಲಿ ಭೇಟಿ ನೀಡಿರುವ ಸಿಎಂ ಡಿ.ಕೆ.ಶಿವಕುಮಾರ್ ತಮ್ಮ ಸಚಿವ ಸಂಪುಟ ವಿಸ್ತರಣೆ ಬಗ್ಗೆ ದೆಹಲಿ ನಾಯಕರ ಜೊತೆ ಚರ್ಚೆ ನಡೆಸಲಿದ್ದಾರೆ. ಹೀಗಾಗಿ ಸಚಿವ ಸ್ಥಾನ ಆಕಾಂಕ್ಷಿಗಳಿಂದ ಲಾಬಿ, ಕಸರತ್ತು ಜೋರಾಗಿದೆ.

50ಕ್ಕೂ ಅಧಿಕ ಶಾಸಕರುಗಳಿಂದ ಲಾಬಿ: ಉಳಿದಿರುವ 20 ಖಾತೆಗಳಿಗಾಗಿ ಸುಮಾರು 50ಕ್ಕೂ ಅಧಿಕ ಕೈ ಶಾಸಕರು ತೀವ್ರ ಪೈಪೋಟಿ ನಡೆಸುತ್ತಿದ್ದಾರೆ. ಸಂಪುಟ ವಿಸ್ತರಣೆ ವೇಳೆ ಸ್ಥಾನ ಗಿಟ್ಟಿಸಿಕೊಳ್ಳಲು ಸಾಧ್ಯದ ಎಲ್ಲ ಮೂಲಗಳ ಮೂಲಕ ಒತ್ತಡ ಹೇರುತ್ತಿದ್ದಾರೆ. ಒಂದಷ್ಟು ಶಾಸಕರು ದೆಹಲಿಗೆ ತೆರಳಿ ಅಲ್ಲೇ ಬೀಡು ಬಿಟ್ಟು ಲಾಬಿ ನಡೆಸುತ್ತಿದ್ದಾರೆ. ಹೈಕಮಾಂಡ್ ನಾಯಕರ ಮುಂದೆ ಪರೇಡ್ ನಡೆಸುತ್ತಿದ್ದಾರೆ. ಹಿರಿಯ ಶಾಸಕರ ಒತ್ತಡದ ನಡುವೆ ಬಹಳಷ್ಟು ಹೊಸ ಶಾಸಕರೂ ಸಚಿವ ಸ್ಥಾನಕ್ಕಾಗಿ ಪೈಪೋಟಿ ನಡೆಸುತ್ತಿದ್ದಾರೆ.

ಹಿರಿಯ ಶಾಸಕರುಗಳೂ ಡಿಕೆಶಿ ಸಚಿವ ಸಂಪುಟದಲ್ಲಿ ಸ್ಥಾನ ಗಳಿಸಲು ಎಲ್ಲಿಲ್ಲದ ಕಸರತ್ತು ನಡೆಸುತ್ತಿದ್ದಾರೆ.

ಒಂದಷ್ಟು ಮಂದಿ ಜಾತಿವಾರು ಲೆಕ್ಕಾಚಾರದೊಂದಿಗೆ ಲಾಬಿ ನಡೆಸುತ್ತಿದ್ದರೆ, ಇನ್ನೊಂದಷ್ಟು ಮಂದಿ ಪ್ರಾದೇಶಿಕವಾರು, ಮತ್ತೊಂದಷ್ಟು ಮಂದಿ ಹಿರಿತನದ ಆಧಾರದಲ್ಲಿ ಸಚಿವ ಸ್ಥಾನಕ್ಕಾಗಿ ಒತ್ತಡ ಹೇರುತ್ತಿದ್ದಾರೆ.

# ಆರ್ಥಿಕ ನೆರವು ಹಾಗೂ ಸಹಕಾರ ಕೋರಿರುವ 18 ಅಂಶಗಳ ಮನವಿ

ನವದೆಹಲಿ: ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ದೆಹಲಿಯಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಿ, ರಾಜ್ಯದ ವಿವಿಧ ಮೂಲಸೌಕರ್ಯ, ನೀರಾವರಿ ಮತ್ತು ಅಭಿವೃದ್ಧಿ ಯೋಜನೆಗಳಿಗೆ ಕೇಂದ್ರದ ಅನುಮೋದನೆ, ಆರ್ಥಿಕ ನೆರವು ಹಾಗೂ ಸಹಕಾರ ಕೋರಿರುವ 18 ಅಂಶಗಳ ಮನವಿಪತ್ರವನ್ನು ಸಲ್ಲಿಸಿದರು.

ಈ ಮನವಿಪತ್ರದಲ್ಲಿ ಪ್ರಮುಖ ನೀರಾವರಿ ಯೋಜನೆಗಳಿಗೆ ಕೇಂದ್ರದ ಬೆಂಬಲ, ಬಾಕಿ ಅನುದಾನಗಳ ಬಿಡುಗಡೆ, ಬೆಂಗಳೂರಿನ ಮೂಲಸೌಕರ್ಯ ಅಭಿವೃದ್ಧಿ ಹಾಗೂ ರಾಯಚೂರಿನಲ್ಲಿ ಅಖಿಲ ಭಾರತ ವೈದ್ಯಕೀಯ ವಿಜ್ಞಾನ ಸಂಸ್ಥೆ ಸ್ಥಾಪನೆಗೆ ಒತ್ತು ನೀಡಲಾಗಿದೆ.

ಮುಖ್ಯ ಬೇಡಿಕೆಗಳ ಪೈಕಿ, ಬೆಂಗಳೂರಿನ ಹೆಚ್ಚುತ್ತಿರುವ ಮೂಲಸೌಕರ್ಯ ಅಗತ್ಯಗಳನ್ನು ಪೂರೈಸಲು 26,000 ಕೋಟಿ ರೂಪಾಯಿ ವಿಶೇಷ ಅನುದಾನವನ್ನು ನೀಡುವಂತೆ ಶಿವಕುಮಾರ್ ಮನವಿ ಮಾಡಿದ್ದಾರೆ. ಜೊತೆಗೆ, ಬೆಂಗಳೂರು ಸ್ಯಾಟಲೈಟ್ ಟೌನ್ ರಿಂಗ್ ರಸ್ತೆ ಯೋಜನೆಗೆ ಶೀಘ್ರ ಅನುಮೋದನೆ ನೀಡುವುದು ಹಾಗೂ ಬೆಂಗಳೂರು ಮೆಟ್ರೋ ಮತ್ತು ಉಪನಗರ ರೈಲು ಜಾಲದ ವಿಸ್ತರಣೆಗೆ ಹೆಚ್ಚುವರಿ ಆರ್ಥಿಕ ನೆರವು ಒದಗಿಸುವಂತೆ ಕೋರಿದ್ದಾರೆ.

ಕಲ್ಯಾಣ ಕರ್ನಾಟಕ ಪ್ರದೇಶದ ಸಮಗ್ರ ಅಭಿವೃದ್ಧಿಗಾಗಿ ವಾರ್ಷಿಕ 25,000 ಕೋಟಿ ರೂಪಾಯಿ ಆರ್ಥಿಕ ನೆರವು ನೀಡುವಂತೆ ಮುಖ್ಯಮಂತ್ರಿ ಮನವಿ ಮಾಡಿದ್ದಾರೆ. ಈ ಪ್ರದೇಶದಲ್ಲಿ ಮೂಲಸೌಕರ್ಯ ಮತ್ತು ಸಾಮಾಜಿಕ ಕ್ಷೇತ್ರಗಳಲ್ಲಿ ಇನ್ನಷ್ಟು ಹೂಡಿಕೆ ಅಗತ್ಯವಿದೆ ಎಂದು ಅವರು ತಿಳಿಸಿದ್ದಾರೆ.

ನೀರಾವರಿ ಕ್ಷೇತ್ರದಲ್ಲಿ, ಬಹುಕಾಲದಿಂದ ಬಾಕಿ ಉಳಿದಿರುವ ಮೇಕೆದಾಟು ಸಮತೋಲನ ಜಲಾಶಯ ಯೋಜನೆಗೆ ಶೀಘ್ರ ಅನುಮೋದನೆ ನೀಡುವಂತೆ ಹಾಗೂ ಕೃಷ್ಣಾ ಮೇಲ್ದಂಡೆ ಯೋಜನೆಗೆ ಕೇಂದ್ರದ



ಬೆಂಬಲ ಮುಂದುವರಿಸುವಂತೆ ಅವರು ಒತ್ತಾಯಿಸಿದ್ದಾರೆ. ಭದ್ರಾ ಮೇಲ್ದಂಡೆ ಯೋಜನೆಯ ಪರಿಷ್ಕೃತ 21,167.93 ಕೋಟಿ ರೂಪಾಯಿ ವೆಚ್ಚದ ಅಂದಾಜು ಈಗಾಗಲೇ ಮೌಲ್ಯಮಾಪನಗೊಂಡಿದ್ದು, ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ–ವೇಗವರ್ಧಿತ ನೀರಾವರಿ ಪ್ರಯೋಜನ ಕಾರ್ಯಕ್ರಮ ಅಡಿಯಲ್ಲಿ ಶೀಘ್ರ ಅನುದಾನ ಬಿಡುಗಡೆ ಮಾಡುವಂತೆ ಕೋರಿದ್ದಾರೆ.

ಕಳಸಾ ಮತ್ತು ಬಂಡೂರಿ ಕುಡಿಯುವ ನೀರಿನ ಯೋಜನೆಗಳಿಗೆ ಅರಣ್ಯ ಮತ್ತು ವನ್ಯಜೀವಿ ಇಲಾಖೆಗಳ ಅನುಮೋದನೆ ವಿಳಂಬವಾಗುತ್ತಿರುವ ವಿಚಾರವನ್ನೂ ಮನವಿಪತ್ರದಲ್ಲಿ ಪ್ರಸ್ತಾಪಿಸಲಾಗಿದೆ. ಈ ಯೋಜನೆಗಳಿಗೆ ಯಾವುದೇ ಕಾನೂನು ಅಡೆತಡೆಗಳಿಲ್ಲ ಎಂದು ತಿಳಿಸಿದ ಶಿವಕುಮಾರ್, ಶೀಘ್ರ ಅನುಮತಿ ನೀಡುವಂತೆ ಮನವಿ ಮಾಡಿದ್ದಾರೆ.

ನೀರಾವರಿ ಕ್ಷೇತ್ರಕ್ಕೆ ಹೆಚ್ಚಿನ ಬೆಂಬಲಕ್ಕಾಗಿ ಪಿಎಂಕೆಎಸ್ ವೈ–ಎಐಬಿಪಿ, ಪ್ರವಾಹ ನಿರ್ವಹಣೆ ಮತ್ತು ಗಡಿ ಪ್ರದೇಶಗಳ ಕಾರ್ಯಕ್ರಮ ಹಾಗೂ ಆಧುನೀಕರಣ, ಕಮಾಂಡ್ ಏರಿಯಾ ಅಭಿವೃದ್ಧಿ ಮತ್ತು ಜಲ ನಿರ್ವಹಣೆ ಯೋಜನೆಗಳಡಿ ನೆರವು ನೀಡುವಂತೆ ಕೋರಿದ್ದಾರೆ.

ಪ್ರಸ್ತಾವಿತ ಗೋದಾವರಿ–ಕಾವೇರಿ ಮತ್ತು ಬೇಡ್ತಿ–ವರದಾ ನದಿ ಜೋಡಣೆ ಯೋಜನೆಗಳ ಅಡಿಯಲ್ಲಿ ಕರ್ನಾಟಕಕ್ಕೆ ಕನಿಷ್ಠ 40–45 ಟಿಎಂಸಿ ನೀರು ಹಂಚಿಕೆ ಮಾಡುವಂತೆ ಮುಖ್ಯಮಂತ್ರಿ ಒತ್ತಾಯಿಸಿದ್ದಾರೆ.

ಸ್ಥಳೀಯ ಸಂಸ್ಥೆಗಳಿಗೆ ಬಾಕಿ ಇರುವ ಅನುದಾನಗಳ ವಿಷಯವನ್ನೂ ಅವರು ಪ್ರಸ್ತಾಪಿಸಿದ್ದಾರೆ. 2025–26ನೇ ಸಾಲಿನ 15ನೇ ಹಣಕಾಸು ಆಯೋಗದ ಅನುದಾನದಡಿ ಗ್ರಾಮ ಪಂಚಾಯಿತಿಗಳಿಗೆ ನೀಡಬೇಕಿರುವ 2,860 ಕೋಟಿ ರೂಪಾಯಿ ಮೊತ್ತವನ್ನು ತಕ್ಷಣ ಬಿಡುಗಡೆ ಮಾಡುವಂತೆ ಅವರು ಮನವಿ ಮಾಡಿದ್ದಾರೆ. ಈ ವಿಳಂಬದಿಂದ ಗ್ರಾಮೀಣ ಅಭಿವೃದ್ಧಿ ಕಾರ್ಯಗಳಿಗೆ ತೊಂದರೆಯಾಗುತ್ತಿದೆ ಎಂದು ತಿಳಿಸಿದ್ದಾರೆ.

ರಾಜ್ಯದ ಮೂಲಸೌಕರ್ಯ ಅಭಿವೃದ್ಧಿ ಹಾಗೂ ಸಾರ್ವಜನಿಕ ಸೇವೆಗಳನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಪ್ರಮುಖ ಯೋಜನೆಗಳ ಅನುಷ್ಠಾನಕ್ಕೆ ಕೇಂದ್ರ ಸರ್ಕಾರದ ಸಹಕಾರ ಮತ್ತು ಸಕಾಲಿಕ ಆರ್ಥಿಕ ನೆರವು ಅಗತ್ಯವಾಗಿದೆ ಎಂದು ಡಿ ಕೆ ಶಿವಕುಮಾರ್ ಒತ್ತಿ ಹೇಳಿದ್ದಾರೆ.

ಭಾರತ ಸಾರಥಿ
13/06/2026
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಹೊಸ ಮಳಿಗೆ ಉದ್ಘಾಟನೆ

ಬೆಂಗಳೂರು

ಭಾರತದ ಅತ್ಯಂತ ವಿಶ್ವಾಸಾರ್ಹ ಹಾಗೂ ವೇಗವಾಗಿ ಬೆಳೆಯುತ್ತಿರುವ ಪ್ರಯೋಗಾಲಯದಲ್ಲಿ ರೂಪಿಸಲಾದ ವಜ್ರಾಭರಣ ಬ್ರಾಂಡ್ ಲೈಮ್ ಲೈಟ್ ಲ್ಯಾಬ್ ಗ್ರೋನ್ ಡೈಮಂಡ್ಸ್ ಇದೀಗ ಬೆಂಗಳೂರಿನಲ್ಲಿ ತನ್ನ ವ್ಯಾಪ್ತಿಯನ್ನು ಮತ್ತಷ್ಟು ವಿಸ್ತರಿಸಿದೆ. ನಗರದ ಪ್ರಮುಖ ವಾಣಿಜ್ಯ




ಹಾಗೂ ಶಾಪಿಂಗ್ ಕೇಂದ್ರಗಳಲ್ಲಿ ಒಂದಾದ ಮಂತ್ರಿ ಸ್ಕ್ವೇರ್ ಮಾಲ್‌ನಲ್ಲಿ ಹೊಸ ಮಳಿಗೆಯನ್ನು ಆರಂಭಿಸುವ ಮೂಲಕ ಬ್ರಾಂಡ್ ತನ್ನ ಬಲಿಷ್ಠ ಹೆಜ್ಜೆ ಗುರುತನ್ನು ಮತ್ತಷ್ಟು ಗಟ್ಟಿಗೊಳಿಸಿದೆ.

ಈ ಹೊಸ ಮಳಿಗೆಯನ್ನು ಲೈಮ್ ಲೈಟ್ ಲ್ಯಾಬ್ ಗ್ರೋನ್ ಡೈಮಂಡ್ಸ್ ಸಹ-ಸಂಸ್ಥಾಪಕ ಹಾಗೂ ನಿರ್ದೇಶಕ ನಿರವ್ ಭಟ್ ಉದ್ಘಾಟಿಸಿದರು. ಕಾರ್ಯಕ್ರಮದಲ್ಲಿ ರೀಜನಲ್ ಪಾರ್ಟ್ನರ್‌ಗಳಾದ ರಿಷಿಕಾ ವಿದ್ಯಾ ಶ್ರೀನಿವಾಸನ್, ಶ್ರೀನಿವಾಸನ್ ಕೆ., ವಿದ್ಯಾ ಶ್ರೀನಿವಾಸನ್ ಸೇರಿದಂತೆ ಬ್ರಾಂಡ್‌ನ ನಾಯಕತ್ವ ತಂಡ ಉಪಸ್ಥಿತರಿದ್ದರು. ಈ ಹೊಸ ಮಳಿಗೆ ಲೈಮ್ ಲೈಟ್ ಬ್ರಾಂಡ್‌ನ ಪ್ರಮುಖ ಮೆಟ್ರೋಪಾಲಿಟನ್ ಮಾರುಕಟ್ಟೆಗಳಲ್ಲಿ ನಡೆಯುತ್ತಿರುವ ವಿಸ್ತರಣಾ ಪ್ರಯಾಣದ ಮತ್ತೊಂದು ಮಹತ್ವದ ಮೈಲಿಗಲ್ಲಾಗಿದೆ.

ಮಂತ್ರಿ ಸ್ಕ್ವೇರ್ ಮಾಲ್‌ನಲ್ಲಿರುವ ಈ ಹೊಸ ಮಳಿಗೆಯು ಬೆಂಗಳೂರಿನ ಆರನೇ ಮಳಿಗೆ ಹಾಗೂ ಕರ್ನಾಟಕದ ಏಳನೇ ಮಳಿಗೆಯಾಗಿದೆ. ಇದರೊಂದಿಗೆ ಲೈಮ್ ಲೈಟ್ ಈಗ ದೇಶದಾದ್ಯಂತ 45ಕ್ಕೂ ಹೆಚ್ಚು ನಗರಗಳಲ್ಲಿ 75ಕ್ಕೂ ಅಧಿಕ ಮಳಿಗೆಗಳನ್ನು ಹೊಂದಿದ್ದು, ರಾಷ್ಟ್ರೀಯ ಮಟ್ಟದಲ್ಲಿ ತನ್ನ ವ್ಯಾಪ್ತಿಯನ್ನು ವೇಗವಾಗಿ ವಿಸ್ತರಿಸುತ್ತಿದೆ.

ನಗರದ ಆಧುನಿಕ ಜೀವನಶೈಲಿ ಮತ್ತು ವಿನ್ಯಾಸಪ್ರಿಯ ಗ್ರಾಹಕರ ಅಭಿರುಚಿಯನ್ನು ಗಮನದಲ್ಲಿಟ್ಟುಕೊಂಡು ಈ ಮಳಿಗೆಯನ್ನು ವಿನ್ಯಾಸಗೊಳಿಸಲಾಗಿದೆ. ಗ್ರಾಹಕರಿಗೆ ಸಮಕಾಲೀನ ಹಾಗೂ ವಿಶೇಷ ಖರೀದಿ ಅನುಭವವನ್ನು ನೀಡುವ ಉದ್ದೇಶದಿಂದ ಮಳಿಗೆಯಲ್ಲಿ ಅತ್ಯಾಧುನಿಕ ವಿನ್ಯಾಸ ಮತ್ತು ಆಕರ್ಷಕ ಪ್ರದರ್ಶನ ವ್ಯವಸ್ಥೆಗಳನ್ನು ರೂಪಿಸಲಾಗಿದೆ.

# ವಿದ್ಯುತ್ (ತಿದ್ದುಪಡಿ) ಮಸೂದೆ ಕೈಬಿಡಲು ಆಗ್ರಹ

ಬೆಂಗಳೂರು

ವಿದ್ಯುತ್ ವಲಯವನ್ನು ಸಂಪೂರ್ಣವಾಗಿ ಖಾಸಗೀಕರಣಗೊಳಿಸುವ ಉದ್ದೇಶ ಹೊಂದಿರುವ ವಿದ್ಯುತ್ (ತಿದ್ದುಪಡಿ) ಮಸೂದೆ ಯನ್ನು ತೀವ್ರವಾಗಿ ವಿರೋಧಿಸಿರುವ ಅಖಿಲ ಭಾರತ ವಿದ್ಯುತ್ ಇಂಜಿನಿಯರ್‌ಗಳ ಒಕ್ಕೂಟ (ಎಐಪಿಇಎಫ್), ಈ ಮಸೂದೆಯನ್ನು ತಕ್ಷಣವೇ ಹಿಂಪಡೆಯುವಂತೆ ಆಗ್ರಹಿಸಿದೆ. ನಗರದಲ್ಲಿ ನಡೆದ 21 ರಾಜ್ಯಗಳ ಪ್ರತಿನಿಧಿಗಳು ಭಾಗವಹಿಸಿದ್ದ ಕಾರ್ಯಕಾರಿ ಸಮಿತಿ ಸಭೆಯಲ್ಲಿ, ಕರ್ನಾಟಕದಲ್ಲಿ ಟಾಟಾ ಪವರ್ ಕಂಪನಿಗೆ ಸಮಾನಾಂತರ ವಿದ್ಯುತ್ ವಿತರಣಾ ಪರವಾನಗಿ ನೀಡುವ ಪ್ರಸ್ತಾವನೆ ಹಾಗೂ ಹಳೇ ಪಿಂಚಣಿ ಯೋಜನೆ ಮರುಸ್ಥಾಪನೆ ಕುರಿತು ಮಹತ್ವದ ನಿರ್ಣಯಗಳನ್ನು ಕೈಗೊಳ್ಳಲಾಗಿದೆ.

ಸಭೆಯನ್ನುದ್ದೇಶಿಸಿ ಮಾತನಾಡಿದ ಎಐಪಿಇಎಫ್ ಅಧ್ಯಕ್ಷ ಶೈಲೇಂದ್ರ ದುಬೆ, "ವಿದ್ಯುತ್ ಕ್ಷೇತ್ರದ ಖಾಸಗೀಕರಣವು ಇಡೀ ವಲಯದ ವಿಭಜನೆಗೆ ಕಾರಣವಾಗಲಿದೆ.



ಒಂದೇ ಪ್ರದೇಶದಲ್ಲಿ ಬಹು ವಿತರಣಾ ಪರವಾನಗಿದಾರರಿಗೆ ಅವಕಾಶ ಕಲ್ಪಿಸುವ ಈ ಮಸೂದೆಯು, ಕೇವಲ ಲಾಭದಾಯಕ ಗ್ರಾಹಕರನ್ನು ಮಾತ್ರ ಆರಿಸಿಕೊಳ್ಳುವ ಪ್ರವೃತ್ತಿಗೆ ಖಾಸಗಿ ಕಂಪನಿಗಳಿಗೆ ಮುಕ್ತ ಅವಕಾಶ ನೀಡುತ್ತದೆ," ಎಂದು ಆತಂಕ ವ್ಯಕ್ತಪಡಿಸಿದರು.

ರಾಜ್ಯದ ಐದು ಎಸ್ಕಾಂಗಳ ವ್ಯಾಪ್ತಿಯಲ್ಲಿ ಬರುವ 19 ಜಿಲ್ಲೆಗಳಲ್ಲಿ ಸಮಾನಾಂತರ ವಿದ್ಯುತ್ ವಿತರಣೆಗಾಗಿ ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗ ದ ಮುಂದೆ ಟಾಟಾ ಪವರ್ ಸಲ್ಲಿಸಿರುವ ಅರ್ಜಿಯನ್ನು ಒಕ್ಕೂಟವು ಕಟುವಾಗಿ ವಿರೋಧಿಸಿದೆ. ಖಾಸಗಿ ಕಂಪನಿಗಳು ಕೇವಲ ಹೆಚ್ಚಿನ ಆದಾಯ ತರುವ ಗ್ರಾಹಕರನ್ನು ಸೆಳೆಯುವುದರಿಂದ, ಗೃಹ ಬಳಕೆದಾರರು, ರೈತರು ಮತ್ತು ದುರ್ಬಲ ವರ್ಗಗಳಿಗೆ ಕೈಗೆಟುಕುವ ದರದಲ್ಲಿ ವಿದ್ಯುತ್ ಪೂರೈಸುವುದು ಅಸಾಧ್ಯ ವಾಗುತ್ತದೆ.

ಆದ್ದರಿಂದ, ಈ ಅರ್ಜಿಯನ್ನು ಕೂಡಲೇ ತಿರಸ್ಕರಿಸಬೇಕು ಎಂದು ಆಗ್ರಹಿಸಲಾಯಿತು. ಇದೇ ರೀತಿ ಹರಿಯಾಣದಲ್ಲಿ ಎಲೆವನ್ ಪವರ್ ಲಿಮಿಟೆಡ್‌ಗೆ ಪರವಾನಗಿ ನೀಡುವ ಪ್ರಸ್ತಾವವನ್ನೂ ಸಭೆ ಖಂಡಿಸಿತು.

# 88.51 ಕೋಟಿ ಎಸ್‌ಎಂಇ ಐಪಿಒಗೆ ಲೀಪ್‌ಫ್ರಾಗ್ ಎಂಜಿನಿಯರಿಂಗ್ ಸಜ್ಜು

ಬೆಂಗಳೂರು

ಬೆಂಗಳೂರು ಮೂಲದ ಎಂಜಿನಿಯರಿಂಗ್, ಪ್ರೊಕ್ಯೂರ್‌ಮೆಂಟ್, ಕನ್‌ಸ್ಟ್ರಕ್ಷನ್ ಹಾಗೂ ಕಮಿಷನಿಂಗ್ ಸೇವೆಗಳನ್ನು ಒದಗಿಸುವ ಲೀಪ್‌ಫ್ರಾಗ್ ಎಂಜಿನಿಯರಿಂಗ್ ಸರ್ವಿಸಸ್ ಲಿಮಿಟೆಡ್ ಇದೀಗ ಸಾರ್ವಜನಿಕ ಷೇರು ಮಾರುಕಟ್ಟೆ ಪ್ರವೇಶಿಸಲು ಸಜ್ಜಾಗಿದೆ. ಕಂಪನಿಯು ಬಿಎಸ್‌ಇ ಎಸ್‌ಎಂಇ ವೇದಿಕೆಯಲ್ಲಿ ತನ್ನ ಬಹುನಿರೀಕ್ಷಿತ ಐಪಿಒ ಬಿಡುಗಡೆ ಘೋಷಿಸಿದ್ದು, ಜೂನ್ 17ರಿಂದ 19ರವರೆಗೆ ಚಂದಾದಾರಿಕೆ ಅವಧಿ ನಿಗದಿಪಡಿಸಲಾಗಿದೆ.

ಕಂಪನಿಯು ಪ್ರತಿ ಷೇರಿನ ದರವನ್ನು ರೂ.21 ರಿಂದ ರೂ.23 ರವರೆಗೆ ನಿಗದಿಪಡಿಸಿದ್ದು, ಒಟ್ಟು ರೂ.88.51 ಕೋಟಿ ಸಂಗ್ರಹಿಸುವ ಗುರಿ ಹೊಂದಿದೆ. ಈ ಐಪಿಒ ಮೂಲಕ ರೂ.79.60 ಕೋಟಿ ಮೊತ್ತವನ್ನು 3.46 ಕೋಟಿ ಹೊಸ ಷೇರುಗಳ ಬಿಡುಗಡೆ ಮೂಲಕ




ಸಂಗ್ರಹಿಸಲಾಗುತ್ತದೆ. ಜೊತೆಗೆ ರೂ.8.91 ಕೋಟಿ ಮೊತ್ತವನ್ನು ಈಗಿನ ಷೇರುದಾರರ ಮಾರಾಟದ ಮೂಲಕ ಅಂದರೆ ಆಫರ್ ಫಾರ್ ಸೇಲ್ ಪ್ರಕ್ರಿಯೆಯಿಂದ ಸಂಗ್ರಹಿಸಲಾಗುತ್ತಿದೆ.

ಐಪಿಒ ಬಳಿಕ ಕಂಪನಿಯ ಪ್ರೋಮೋಟರ್‌ಗಳ ಪಾಲುದಾರಿಕೆ 67 ಶೇಕಡಕ್ಕೂ ಅಧಿಕ ಮಟ್ಟದಲ್ಲಿ ಮುಂದುವರಿಯಲಿದೆ ಎಂದು ತಿಳಿಸಲಾಗಿದೆ. ಸಾರ್ವಜನಿಕ ಮಾರುಕಟ್ಟೆ ಪ್ರವೇಶದ ಮೂಲಕ ಕಂಪನಿಯು ತನ್ನ ಉತ್ಪಾದನಾ ಸಾಮರ್ಥ್ಯ ವಿಸ್ತರಣೆ ಹಾಗೂ ದೀರ್ಘಾವಧಿ ಬೆಳವಣಿಗೆಗೆ ಹೊಸ ದಿಕ್ಕು ನೀಡಲು ಮುಂದಾಗಿದೆ.

ಕಂಪನಿಯು ಐಪಿಒ ಮೂಲಕ ಸಂಗ್ರಹವಾಗುವ ಮೊತ್ತವನ್ನು ಹಲವು ಪ್ರಮುಖ ಉದ್ದೇಶಗಳಿಗೆ ಬಳಸಿಕೊಳ್ಳಲು ಯೋಜಿಸಿದೆ. ಸುಮಾರು ರೂ.27 ಕೋಟಿ ವೆಚ್ಚದಲ್ಲಿ ಬೆಂಗಳೂರಿನ ಯೆಲೆನಹಳ್ಳಿ ಪ್ರದೇಶದಲ್ಲಿ ಹೊಸ ಅಸೆಂಬ್ಲಿ ಘಟಕ ನಿರ್ಮಿಸಲು ನಿರ್ಧರಿಸಲಾಗಿದೆ. ಇದರೊಂದಿಗೆ ಉತ್ಪಾದನಾ ಸಾಮರ್ಥ್ಯ ಹೆಚ್ಚಿಸುವುದರ ಜೊತೆಗೆ ಕಾರ್ಯನಿರ್ವಹಣಾ ದಕ್ಷತೆಯನ್ನೂ ಸುಧಾರಿಸುವ ಉದ್ದೇಶ ಹೊಂದಿದೆ.

# ಮಾನನಷ್ಟ ಮೊಕದ್ದಮೆಗೆ ಸುಪ್ರೀಂತಡೆ

ನವದೆಹಲಿ

ಕರ್ನಾಟಕದ ಐಎಎಸ್ ಅಧಿಕಾರಿ ರೋಹಿಣಿ ಸಿಂಧೂರಿ ಮತ್ತು ಐಪಿಎಸ್ ಅಧಿಕಾರಿ ಡಿ. ರೂಪಾ ಮೌದ್ಗಿಲ್ ನಡುವಿನ ದೀರ್ಘಕಾಲದ ಮಾನನಷ್ಟ ಪ್ರಕರಣದ ವಿಚಾರಣೆಗೆ ಸುಪ್ರೀಂ ಕೋರ್ಟ್ ಮಧ್ಯಂತರ ತಡೆ ನೀಡಿದ್ದು, ಪ್ರಕರಣವನ್ನು ಮಧ್ಯಸ್ಥಿಕೆ ಮೂಲಕ ಬಗೆಹರಿಸಲು ಶುಕ್ರವಾರ ಆದೇಶಿಸಿದೆ.

ಸುಪ್ರೀಂ ಕೋರ್ಟ್ ನ್ಯಾಯಮೂರ್ತಿಗಳಾದ ನ್ಯಾಯಮೂರ್ತಿ ಸತೀಶ್ ಚಂದ್ರ ಶರ್ಮಾ ಮತ್ತು ನ್ಯಾಯಮೂರ್ತಿ ಸಂಜೀವ್ ಸಚ್ ದೇವ ಅವರ ಪೀಠವು, ರೋಹಿಣಿ ಸಿಂಧೂರಿ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿತು.

ಈ ಅರ್ಜಿಯಲ್ಲಿ, ಡಿ. ರೂಪಾ ಮೌದ್ಗಿಲ್ ಅವರು ದಾಖಲಿಸಿದ್ದ ಮಾನಹಾನಿ ಪ್ರಕರಣವನ್ನು ಪರಿಗಣಿಸಿದ ವಿಚಾರಣಾ ನ್ಯಾಯಾಲಯದ ಆದೇಶವನ್ನು ಎತ್ತಿಹಿಡಿದಿದ್ದ ಕರ್ನಾಟಕ ಹೈಕೋರ್ಟ್ ತೀರ್ಪನ್ನು ರದ್ದುಪಡಿಸುವಂತೆ ಕೋರಲಾಗಿತ್ತು.

ಈ ಪ್ರಕರಣವು 2023ರಲ್ಲಿ ಇಬ್ಬರು ಹಿರಿಯ ಅಧಿಕಾರಿಗಳ ನಡುವೆ ಸಾರ್ವಜನಿಕವಾಗಿ ನಡೆದ ವಾಗ್ವಾದ ಮತ್ತು ಆರೋಪ-ಪ್ರತ್ಯಾರೋಪಗಳಿಂದ ಆರಂಭವಾಗಿತ್ತು.

ವಿಚಾರಣೆಯ ವೇಳೆ ಈ ದೀರ್ಘಕಾಲದ ಕಲಹದ ಬಗ್ಗೆ ಕಳವಳ ವ್ಯಕ್ತಪಡಿಸಿದ ಸುಪ್ರೀಂ ಕೋರ್ಟ್, ಈ ನ್ಯಾಯಾಂಗ ಹೋರಾಟ ಮುಂದುವರಿದರೆ ಇಬ್ಬರ ವೃತ್ತಿಜೀವನಕ್ಕೂ ಹಾನಿಯಾಗಬಹುದು ಎಂದು ಎಚ್ಚರಿಸಿತು.

# ನರರೋಗ ಮತ್ತು ಅಪಸ್ಮಾರ ಸಮಸ್ಯೆ ವಿಶೇಷ ಸಮಾಲೋಚನೆ

ಬಾಗಲಕೋಟೆ

ಉತ್ತರ ಕರ್ನಾಟಕದ ನರರೋಗ ಮತ್ತು ಅಪಸ್ಮಾರ ಸಮಸ್ಯೆಯಿಂದ ಬಳಲುತ್ತಿರುವ ರೋಗಿಗಳಿಗೆ ಮಹತ್ವದ ಆರೋಗ್ಯ ಸೇವಾ ಅವಕಾಶ ಒದಗಿದೆ. ಬೆಂಗಳೂರಿನ ಬನ್ನೇರುಘಟ್ಟ ರಸ್ತೆಯ ಖ್ಯಾತ ಫೋರ್ಟಿಸ್ ಆಸ್ಪತ್ರೆ ಹಾಗೂ ಬಾಗಲಕೋಟೆಯ ಪ್ರಸಿದ್ಧ ಆರ್‌ಎನ್‌ಸಿ ಆಸ್ಪತ್ರೆಯ ಜಂಟಿ ಸಹಯೋಗದಲ್ಲಿ ಜೂನ್ 15 ರಂದು ಉಚಿತ ಸುಧಾರಿತ ನರರೋಗ ಹಾಗೂ ಅಪಸ್ಮಾರ ಚಿಕಿತ್ಸಾ ವಿಶೇಷ ಸಮಾಲೋಚನಾ ಶಿಬಿರವನ್ನು ಆಯೋಜಿಸಲಾಗಿದೆ.

ಈ ವಿಶೇಷ ಆರೋಗ್ಯ ಶಿಬಿರವು ಜೂನ್ 15 ರಂದು ಬಾಗಲಕೋಟೆಯ ಆರ್‌ಎನ್‌ಸಿ ಆಸ್ಪತ್ರೆಯಲ್ಲಿ



ಬೆಳಿಗ್ಗೆ 10 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ನಡೆಯಲಿದ್ದು, ಖ್ಯಾತ ನರರೋಗ ಮತ್ತು ಅಪಸ್ಮಾರ ಚಿಕಿತ್ಸಾ ತಜ್ಞೆ ಡಾ. ಸೋನಿಯಾ ತಾಂಬೆ ಅವರು ರೋಗಿಗಳಿಗೆ ನೇರ ಸಮಾಲೋಚನೆ ಹಾಗೂ ಚಿಕಿತ್ಸಾ ಮಾರ್ಗದರ್ಶನ ನೀಡಲಿದ್ದಾರೆ.

ಬೆಂಗಳೂರು ಸೇರಿದಂತೆ ಮಹಾನಗರಗಳಿಗೆ ತೆರಳಿ ಚಿಕಿತ್ಸೆ ಪಡೆಯಲು ಕಷ್ಟಪಡುವ ಬಾಗಲಕೋಟೆ ಹಾಗೂ ಸುತ್ತಮುತ್ತಲಿನ ಜಿಲ್ಲೆಗಳ ರೋಗಿಗಳಿಗೆ ಈ ಶಿಬಿರ ಮಹತ್ತರ ನೆರವಾಗಲಿದೆ. ಸ್ಥಳೀಯ ಮಟ್ಟದಲ್ಲೇ ಗುಣಮಟ್ಟದ ಆರೋಗ್ಯ ಸೇವೆ ಹಾಗೂ ತಜ್ಞ ವೈದ್ಯರ ಸಲಹೆ ಲಭ್ಯವಾಗುತ್ತಿರುವುದು ಸಾರ್ವಜನಿಕರಲ್ಲಿ ಸಂತಸ ಮೂಡಿಸಿದೆ.



ನವದೆಹಲಿಯಲ್ಲಿ ಹಿರಿಯ ನಾಯಕ ಬಿ.ಕೆ.ಹರಿಪ್ರಸಾದ್ ಅವರನ್ನು ಚಿಕ್ಕಬಳ್ಳಾಪುರ ಜಿಲ್ಲೆಯ ಪ್ರಮುಖ ಸಹೋದ್ಯೋಗಿ ನಂದಿ ಅಂಜಿನಪ್ಪ, ಸುಬ್ಬಾರೆಡ್ಡಿ, ಶಿವಶಂಕರ್ ರೆಡ್ಡಿ ಶ್ರೀ ಕೇಶವರೆಡ್ಡಿ ಹಾಗೂ ಇತರ ಮುಖಂಡರೊಂದಿಗೆ ಭೇಟಿ ಮಾಡಿ, ವಿವಿಧ ವಿಷಯಗಳ ಕುರಿತು ಸೌಹಾರ್ದಯುತ ಚರ್ಚೆ ನಡೆಸಲಾಯಿತು.

# ಗೃಹಲಕ್ಷ್ಮಿ ಯೋಜನೆಗೆ ಈಗ ಕಂಡೀಷನ್ ಏಕೆ...?

ಬೆಂಗಳೂರು

ಗೃಹಲಕ್ಷ್ಮಿ ಯೋಜನೆಗೆ ಆಗ ಇಲ್ಲದ ಕಂಡಿಷನ್ ಈಗ ಯಾಕೆ? ಎಂದು ಬಿಜೆಪಿ ರಾಷ್ಟ್ರೀಯ ಮಾಜಿ ಪ್ರಧಾನ ಕಾರ್ಯದರ್ಶಿ ಹಾಗೂ ವಿಧಾನಪರಿಷತ್ ಸದಸ್ಯ ಸಿ.ಟಿ.ರವಿ ಪ್ರಶ್ನಿಸಿದ್ದಾರೆ.

ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕಾಕಾ ಪಾಟೀಲ್ ನಿಂಗೂ ಫ್ರೀ, ಜಮೀರ್ ಅಹ್ಮದ್, ಮಹದೇವಪ್ಪ ನಿಂಗೂ ಫ್ರೀ ಎಂದು ಚುನಾವಣೆ ಪ್ರಚಾರದ ವೇಳೆ ಸಿದ್ದರಾಮಯ್ಯನವರು ತಿಳಿಸಿದ್ದರು ಎಂದು ಗಮನ ಸೆಳೆದರು. 10 ಕೆಜಿ ಅಕ್ಕಿ ಕೊಟ್ಟಿದ್ದೀರಾ? ಮೋದಿಯವರು 5 ಕೆಜಿ ಅಕ್ಕಿ ಕೊಡದೇ ಇದ್ದರೆ, ನಿಮ್ಮನ್ನೇ ನಂಬಿದ್ದರೆ ಜನರು ಖಾಲಿ ಹೊಟ್ಟೆಯಲ್ಲಿ ನೀರು ಕುಡಿದು ಮಲಗಬೇಕಿತ್ತು. ನಿಮ್ಮ ಕಂಡಿಷನ್ ಯಾಕೆ, ಖಜಾನೆ ಖಾಲಿ ಎಂಬುದು ಜನರಿಗೆ ಗೊತ್ತಿದೆ ಎಂದು ತಿಳಿಸಿದರು.

ಫಲಾನುಭವಿ ಜನರನ್ನು ಕಡಿಮೆ ಮಾಡಲು ಕಂಡಿಷನ್ ಹಾಕುತ್ತೀರಿ. ನಿಮ್ಮ ಹಳೆ ಭಾಷಣವನ್ನು ಜನರು ಕೇಳಿಸಿಕೊಳ್ಳುತ್ತಾರೆ ಎಂದರು. ಇದಕ್ಕೆ ಸೂಕ್ತ ಸಮಯದಲ್ಲಿ ಜನರು ಉತ್ತರ ಕೊಡುತ್ತಾರೆ ಎಂದು ಹೇಳಿದರು. ನಮಗೂ ಗ್ಯಾರಂಟಿ ಯೋಜನೆಗಳಿಗೂ ಸಂಬಂಧ ಇಲ್ಲ ಎಂದು ಡಿ.ಕೆ.ಶಿವಕುಮಾರ್ ಅವರು ಹೇಳಿದರೆ, ನಾವು ಪ್ರಶ್ನೆ ಮಾಡುವುದಿಲ್ಲ ಎಂದು ಸವಾಲು ಹಾಕಿದರು. ಗೃಹಲಕ್ಷ್ಮಿ ಕೊಡಬೇಕಾಗುತ್ತದೆ ಎಂದು ಹೊಸ ಬಿಪಿಎಲ್ ಕಾರ್ಡ್ ಕೊಡುವುದನ್ನೂ ನಿಲ್ಲಿಸಿದ್ದಾರೆ. ಇದರಿಂದಾಗಿ ಅರ್ಹ ಫಲಾನುಭವಿಗಳು ಬಿಪಿಎಲ್ ಕಾರ್ಡ್‌ನಿಂದಲೂ ವಂಚಿತರಾಗಿದ್ದಾರೆ. ಇದು ಸರಿಯಲ್ಲ ಎಂದರು. ಸಚಿವ ಸ್ಥಾನ ಹಂಚಿಕೆ ಕುರಿತು ಪ್ರತಿಕ್ರಿಯಿಸಿ, ಒಂದು ಕಣ್ಣಿಗೆ ಸುಣ್ಣ, ಇನ್ನೊಂದು ಕಣ್ಣಿಗೆ ಬೆಣ್ಣೆ ಎಂಬ ನೀತಿಯೇ ಜಾತ್ಯತೀತತೆಯೇ? ಅಹಿಂದದೊಳಗೆ ಒಂದು ಜಾತಿ ಮಾತ್ರ ಇದೆಯೇ ಎಂದು ಕೇಳಿದರು. ಎಲ್ಲ ಜಾತಿಯವರಿಗೂ ಸಮಾನ ಅವಕಾಶ ಎಂಬುದು ಜಾತ್ಯತೀತತೆ ಎಂದು ನಾನು ಭಾವಿಸಿದ್ದೇನೆ ಎಂದು ನುಡಿದರು.

# ಹೈಕೋರ್ಟ್ ಹೊಸ ಕಟ್ಟಡಕ್ಕೆ ರೇಸ್‌ಕೋರ್ಸ್ ಜಾಗ

ಬೆಂಗಳೂರು

ರಾಜಧಾನಿ ಬೆಂಗಳೂರಿನಲ್ಲಿ ಹೊಸ ಹೈಕೋರ್ಟ್ ಕಟ್ಟಡ ನಿರ್ಮಾಣಕ್ಕಾಗಿ ನಗರದ ಕೇಂದ್ರ ಭಾಗದಲ್ಲಿರುವ ಬೆಂಗಳೂರು ಟರ್ಫ್ ಕ್ಲಬ್ ನ ( ರೇಸ್ ಕೋರ್ಟ್) ಸ್ಥಳವನ್ನು ಮುಂದಿನ ವಾರವೇ ಹಂಚಿಕೆ ಮಾಡುವ ಉದ್ದೇಶವನ್ನು ಹೊಂದಿದ್ದೇವೆ ಎಂದು ರಾಜ್ಯ ಸರ್ಕಾರಕ್ಕೆ ಹೈಕೋರ್ಟ್‌ಗೆ ಮಾಹಿತಿ ನೀಡಿದೆ.

ಬೆಂಗಳೂರು ನಗರದಲ್ಲಿ ಹೊಸ ಹೈಕೋರ್ಟ್ ಕಟ್ಟಡ ಸಂಕೀರ್ಣ ನಿರ್ಮಾಣಕ್ಕಾಗಿ ಕನಿಷ್ಠ 30 ಎಕರೆ ಅಥವಾ ಅದಕ್ಕಿಂತ ಹೆಚ್ಚಿನ ಭೂಮಿಯನ್ನು ಒದಗಿಸುವಂತೆ ರಾಜ್ಯ ಸರ್ಕಾರಕ್ಕೆ ನಿರ್ದೇಶನ ನೀಡಬೇಕೆಂದು ಕೋರಿ ಶರಣ್ ದೇಸಾಯಿ ಎಂಬುವರು ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿನ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಮತ್ತು ನ್ಯಾಯಮೂರ್ತಿ ಕೆ.ಎಸ್ .ಹೇಮಲೇಖ ಅವರಿದ್ದ ನ್ಯಾಯಪೀಠಕ್ಕೆ ಸರ್ಕಾರ ಈ ಮಾಹಿತಿ ನೀಡಿದೆ.

ವಿಚಾರಣೆ ವೇಳೆ ಶಶಿಕಿರಣ್ ಶೆಟ್ಟಿ, ಹೊಸ ಹೈಕೋರ್ಟ್ ಕಟ್ಟಡ ನಿರ್ಮಾಣಕ್ಕಾಗಿ ಬೆಂಗಳೂರಿನ ಟರ್ಫ್ ಕ್ಲಬ್‌ನ ಭೂಮಿಯನ್ನು ಮುಂದಿನ ವಾರ ಮಂಜೂರು ಮಾಡುವ ಯೋಜನೆಯಿದೆ. ಈ ಕುರಿತಂತೆ ಟರ್ಫ್ ಕ್ಲಬ್ ಆಡಳಿತ ಮಂಡಳಿಯೊಂದಿಗೆ ಸಭೆ ನಡೆಸುತ್ತೇವೆ ಎಂದು ನ್ಯಾಯಾಲಯಕ್ಕೆ ಮಾಹಿತಿ ನೀಡಿದರು.

ಅದಕ್ಕೆ ಪ್ರತಿಕ್ರಿಯಿಸಿದ ಪೀಠ, ಹೊಸ ಕಟ್ಟಡವು ಮುಂದಿನ 30 ರಿಂದ 50 ವರ್ಷಗಳ ಅಗತ್ಯಗಳನ್ನು ಪೂರೈಸುವ ರೀತಿಯಲ್ಲಿ ನಿರ್ಮಾಣವಾಗಬೇಕು ಎಂದು ಮೌಖಿಕವಾಗಿ ಹೇಳಿತು.

ಅಡ್ವೋಕೇಟ್ ಜನರಲ್ ಶಶಿ ಕಿರಣ್ ಶೆಟ್ಟಿ ಉತ್ತರಿಸಿ, ಪ್ರಸ್ತುತ ಸ್ಥಳಾವಕಾಶ ಮತ್ತು ಭವಿಷ್ಯದ ಅಗತ್ಯತೆಗಳನ್ನು ಪರಿಗಣಿಸಲಾಗುವುದು. ಕಟ್ಟಡ ನಿರ್ಮಾಣಕ್ಕೆ ಸಂಬಂಧಿಸಿದಂತೆ ಫ್ಲೋರ್ ಏರಿಯಾ ರೇಷಿಯೋ (ಎ□□□ಆಎರ್) ವಿನಾಯಿತಿ ಸೇರಿದಂತೆ ಹಲವು ಕಾನೂನು ಅಡೆತಡೆಗಳ ಬಗ್ಗೆಯೂ ಪರಿಶೀಲನೆ ನಡೆಯುತ್ತಿದೆ. ಹೆಚ್ಚಿನ ವಿವರಗಳನ್ನು ತಿಳಿಸಲು ಒಂದು ವಾರ ಅಥವಾ ಹತ್ತು ದಿನಗಳ ಕಾಲಾವಕಾಶ ನೀಡಬೇಕು ಎಂದು ಕೋರಿದರು.

ರಾಜ್ಯದಲ್ಲಿ ಹೈಕೋರ್ಟ್‌ಗೆ ದಾಖಲಾಗುವು ಪ್ರಕರಣಗಳ ಸಂಖ್ಯೆ ಹೆಚ್ಚಾಗುತ್ತಿದೆ. ಅಲ್ಲದೇ, ಪ್ರಕಣಗಳ ಕಡತಗಳ ಸಂಗ್ರಹಕ್ಕೆ ಸೂಕ್ತ ಸ್ಥಳಾವಕಾಶ ಇಲ್ಲವಾಗಿದೆ. ಆದ್ದರಿಂದ ಬೆಂಗಳೂರಿನ ಕೇಂದ್ರ ಭಾಗದಲ್ಲಿ 30 ಎಕರೆ ಜಮೀನು ಮಂಜೂರು ಮಾಡಬೇಕು ಮತ್ತು ಹೊಸ ಹೈಕೋರ್ಟ್ ಕಟ್ಟಡ ನಿರ್ಮಾಣ ಕಾರ್ಯ ಪೂರ್ಣಗೊಳಿಸಲು ಸಂಬಂಧಿತ ಇಲಾಖೆಗಳ ಮೂಲಕ ಅಗತ್ಯ ಅನುದಾನವನ್ನು ಒದಗಿಸುವಂತೆ ಸರ್ಕಾರಕ್ಕೆ ನಿರ್ದೇಶನ ನೀಡಬೇಕೆಂದು ಕೋರಲಾಗಿತ್ತು.

ಪ್ರಸ್ತುತ ರಾಜ್ಯ ಹೈಕೋರ್ಟ್ ಕಾರ್ಯನಿರ್ವಹಿಸುತ್ತಿರುವ ಐತಿಹಾಸಿಕ 'ಅಟ್ಟಾರ ಕಚೇರಿ' ಕಟ್ಟಡವು ಕಬ್ಬನ್ ಪಾರ್ಕ್ ಆವರಣದಲ್ಲಿ ವಿಧಾನ ಸೌಧದ ಮುಂಭಾಗದಲ್ಲಿದೆ. ಬ್ರಿಟೀಷ್‌ರ ಕಾಲದಲ್ಲಿ ಮೈಸೂರು ಸಂಸ್ಥಾನದ ಸಾಮಾನ್ಯ ಮತ್ತು ಕಂದಾಯ ಕಾರ್ಯದರ್ಶಿಗಳ ಕಚೇರಿಯಾಗಿದ್ದ ಈ ಕಟ್ಟಡಕ್ಕೆ 1929ರಲ್ಲಿ ಮೈಸೂರು ಹೈಕೋರ್ಟ್ ಎಂಬ ಹೆಸರಿಡಲಾಯಿತು. 1956ರವರೆಗೆ ರಾಜ್ಯದ ಆಡಳಿತ ಕಚೇರಿಗಳೂ ಇಲ್ಲಿಯೇ ಕಾರ್ಯನಿರ್ವಹಿಸುತ್ತಿದ್ದವು. ನಂತರ

# ಬೀದಿ ನಾಯಿಗಳಿಗೆ ಆಹಾರಕ್ಕೆ ನಿರ್ಬಂಧವಿಲ್ಲ

ಬೆಂಗಳೂರು

ಬೀದಿ ನಾಯಿಗಳಿಗೆ ಆಹಾರ ನೀಡುವುದನ್ನು ನಿಷೇಧಿಸಲಾಗಿಲ್ಲ ಎಂದು ಗ್ರೇಟರ್ ಬೆಂಗಳೂರು ಪ್ರಾಧಿಕಾರ ಸ್ಪಷ್ಟಪಡಿಸಿದೆ. ಸರ್ವೋಚ್ಚ ನ್ಯಾಯಾಲಯದ ನಿರ್ದೇಶನದಂತೆ ಗುರುತಿಸಲಾದ ಸ್ಥಳಗಳಲ್ಲಿ ಮಾತ್ರ ಆಹಾರ ನೀಡಬೇಕು ಎಂದು ತಿಳಿಸಲಾಗಿದೆ.

ಬೀದಿ ನಾಯಿಗಳ ಸಮಸ್ಯೆಗೆ ಸಂಬಂಧಿಸಿದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ವಿಚಾರಣೆಯಲ್ಲಿ ಸರ್ವೋಚ್ಚ ನ್ಯಾಯಾಲಯ ನೀಡಿರುವ ಸೂಚನೆಗಳನ್ನು ಜಾರಿಗೊಳಿಸಲು ಪ್ರಾಧಿಕಾರ ಕ್ರಮ ಕೈಗೊಂಡಿದೆ.

ಪ್ರಾಧಿಕಾರ ಹೊರಡಿಸಿರುವ ಪ್ರಕಟಣೆಯ ಪ್ರಕಾರ, ಐದು ನಗರ ಪಾಲಿಕೆಗಳ ಪ್ರತಿಯೊಂದು ವಾರ್ಡ್‌ನಲ್ಲಿ ಇರುವ ಸಮುದಾಯ ನಾಯಿಗಳ ಸಂಖ್ಯೆಯನ್ನು ಆಧರಿಸಿ ಹೆಚ್ಚುವರಿ ಆಹಾರ ತಾಣಗಳನ್ನು ಗುರುತಿಸಲಾಗುತ್ತಿದೆ.

ವ್ಯಕ್ತಿಗಳು ಅಥವಾ ಸಂಘಟನೆಗಳು ಬೀದಿ ನಾಯಿಗಳನ್ನು ಸ್ವಯಂ ಸ್ಥಳಾಂತರಿಸುವುದು ಅಥವಾ ತೆಗೆದುಹಾಕುವುದು ಕಾನೂನುಬಾಹಿರವಾಗಿದ್ದು, ಅದು ನ್ಯಾಯಾಲಯದ ಆದೇಶ ಉಲ್ಲಂಘನೆಯಾಗಿ ಪರಿಗಣಿಸಲಾಗುತ್ತದೆ ಎಂದು ಎಚ್ಚರಿಸಲಾಗಿದೆ.

ಸ್ಥಳಾಂತರಕ್ಕೆ ಗುರುತಿಸಲಾದ ಪ್ರದೇಶಗಳಲ್ಲಿನ ನಾಯಿಗಳನ್ನು ಮಾತ್ರ ನಿಯೋಜಿತ ಅಧಿಕಾರಿಗಳ ಮೂಲಕ ನಿಗದಿತ ಆಶ್ರಯ ಕೇಂದ್ರಗಳಿಗೆ ಕಳುಹಿಸಲಾಗುತ್ತದೆ ಎಂದು ತಿಳಿಸಲಾಗಿದೆ.

ಬೀದಿ ಪ್ರಾಣಿಗಳ ಮೇಲೆ ಕಿರುಕುಳ, ಹಲ್ಲೆ, ಗಾಯಗೊಳಿಸುವುದು ಅಥವಾ ಕ್ರೌರ್ಯ ಎಸಗುವುದು ಅಪರಾಧವಾಗಿದ್ದು, ಇಂತಹ ಕೃತ್ಯಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಪ್ರಾಧಿಕಾರ ಎಚ್ಚರಿಸಿದೆ. ತಮ್ಮ ಪ್ರದೇಶದಲ್ಲಿ ಆಹಾರ ನೀಡುವ ನಿಗದಿತ ಸ್ಥಳ ಗುರುತಿಸಲು ನಿವಾಸಿಗಳು ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಸಹಾಯವಾಣಿ 1533 ಅನ್ನು ಸಂಪರ್ಕಿಸಬಹುದು.

ಸಮುದಾಯ ಸೌಹಾರ್ದತೆ ಹಾಗೂ ಪ್ರಾಣಿ ಕಲ್ಯಾಣ ಕಾಪಾಡುವ ಉದ್ದೇಶದಿಂದ ನಾಗರಿಕರು, ಪ್ರಾಣಿ ಕಲ್ಯಾಣ ಸಂಘಟನೆಗಳು ಮತ್ತು ನಿವಾಸಿಗಳ ಕಲ್ಯಾಣ ಸಂಘಗಳು ಪರಸ್ಪರ ಸಹಕಾರದ ಮನೋಭಾವದಿಂದ ನಡೆದುಕೊಳ್ಳಬೇಕು ಎಂದು ಪ್ರಾಧಿಕಾರ ಮನವಿ ಮಾಡಿದೆ.

# ಸಮಾಧಾನ್ ಸಮಾರೋಹ್ ಯಶಸ್ಸಿಗೆ ಸಿಎಸ್ ಸೂಚನೆ

ಬೆಂಗಳೂರು

ಸರ್ವೋಚ್ಚ ನ್ಯಾಯಾಲಯದ ವತಿಯಿಂದ ಆಗಸ್ಟ್ 21ರಿಂದ 23ರವರೆಗೆ ನಡೆಯಲಿರುವ 'ಸಮಾಧಾನ್ ಸಮಾರೋಹ್' ಉಚಿತ ಲೋಕ್ ಅದಾಲತ್ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ರಾಜ್ಯದ ಎಲ್ಲಾ ಇಲಾಖೆಗಳಿಗೆ ನಿರ್ದೇಶನ ನೀಡಿದ್ದಾರೆ.

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಮನವಿಯ ಹಿನ್ನೆಲೆಯಲ್ಲಿ ಈ ಸೂಚನೆ ನೀಡಲಾಗಿದ್ದು, ಸರ್ವೋಚ್ಚ ನ್ಯಾಯಾಲಯದಲ್ಲಿ ಬಾಕಿ ಇರುವ ಸರ್ಕಾರಿ ಹಾಗೂ ಸ್ಥಳೀಯ ಸಂಸ್ಥೆಗಳ ಪ್ರಕರಣಗಳನ್ನು ಸೌಹಾರ್ದಯುತವಾಗಿ ಬಗೆಹರಿಸಿಕೊಳ್ಳುವಂತೆ ಇಲಾಖೆಗಳಿಗೆ ತಿಳಿಸಲಾಗಿದೆ.

ಈ ಕುರಿತು ಕೈಗೊಂಡ ಕ್ರಮಗಳ ವರದಿಯನ್ನು ಮೂರು ದಿನಗಳೊಳಗಾಗಿ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರಕ್ಕೆ ಸಲ್ಲಿಸಿ, ಅದರ ಪ್ರತಿಯನ್ನು ಮುಖ್ಯ ಕಾರ್ಯದರ್ಶಿಗಳ ಕಚೇರಿಗೆ ಕಳುಹಿಸುವಂತೆ ಎಲ್ಲಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿಗಳು, ಪ್ರಧಾನ ಕಾರ್ಯದರ್ಶಿಗಳು ಹಾಗೂ ಕಾರ್ಯದರ್ಶಿಗಳಿಗೆ ಸೂಚಿಸಲಾಗಿದೆ.

ಕಂದಾಯ ಇಲಾಖೆ, ವಿಮಾ ಸಂಸ್ಥೆಗಳು, ಪೊಲೀಸ್ ಇಲಾಖೆ, ಖಾಸಗಿ ನಿಗಮಗಳು ಹಾಗೂ ವಿವಿಧ ಸರ್ಕಾರಿ ಕಚೇರಿಗಳೂ ಈ ಕಾರ್ಯಕ್ರಮದಲ್ಲಿ ಭಾಗವಹಿಸಬಹುದಾಗಿದೆ.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ತಾಲೂಕು ಕಾನೂನು ಸೇವೆಗಳ ಸಮಿತಿ ಹಾಗೂ ಹೈಕೋರ್ಟ್ ಕಾನೂನು ಸೇವೆಗಳ ಸಮಿತಿಗಳೊಂದಿಗೆ ಸಮನ್ವಯ ಸಾಧಿಸಿ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳುವಂತೆ ಸೂಚಿಸಲಾಗಿದೆ.

ಸರ್ವೋಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿಗಳು ಹಾಗೂ ಕರ್ನಾಟಕ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿಗಳ ನಿರ್ದೇಶನದ ಮೇರೆಗೆ ಈ ಕ್ರಮ ಕೈಗೊಳ್ಳಲಾಗುತ್ತಿದ್ದು, ಇಲಾಖಾ ಮುಖ್ಯಸ್ಥರು ವೈಯಕ್ತಿಕವಾಗಿ ಗಮನಹರಿಸಬೇಕೆಂದು ಮುಖ್ಯ ಕಾರ್ಯದರ್ಶಿಗಳು ತಿಳಿಸಿದ್ದಾರೆ.

# ಕಾಂಗ್ರೆಸ್ ಆಡಳಿತದಲ್ಲಿ ಭ್ರಷ್ಟಾಚಾರ ಮಾತ್ರ ಇತ್ತು: ವಿಜಯೇಂದ್ರ ವಾಗ್ದಾಳಿ

ಬೆಂಗಳೂರು

ಕಾಂಗ್ರೆಸ್ ನೇತೃತ್ವದ ಯುಪಿಎ ಸರ್ಕಾರದ ಅವಧಿಯಲ್ಲಿ ಭ್ರಷ್ಟಾಚಾರ ತಾಂಡವವಾಡುತ್ತಿತ್ತು. ದೇಶದ ಜನರು ಆ ಆಡಳಿತದಿಂದ ಬೇಸತ್ತಿದ್ದರು. ಅಂತಹ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ದೇಶದ ನೇತೃತ್ವ ವಹಿಸಿ ಸಮರ್ಥ ಆಡಳಿತ ನೀಡಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಶಾಸಕ ಬಿ.ವೈ. ವಿಜಯೇಂದ್ರ ಹೇಳಿದ್ದಾರೆ.



ನಗರದ ಜಗನ್ನಾಥ ಭವನದಲ್ಲಿ ನಡೆದ ಮಾಧ್ಯಮ ಸಂವಾದದಲ್ಲಿ ಮಾತನಾಡಿದ ಅವರು, ಮೋದಿ ನೇತೃತ್ವದಲ್ಲಿ ಭಾರತ ವಿಶ್ವದ ಬಲಿಷ್ಠ ರಾಷ್ಟ್ರವಾಗಿ ಹೊರಹೊಮ್ಮಿದೆ ಎಂದು ಹೇಳಿದರು.

ಯುಪಿಎ ಸರ್ಕಾರದ ಅವಧಿಯಲ್ಲಿ 2ಜಿ, ಕಾಮನ್‌ವೆಲ್ತ್ ಸೇರಿದಂತೆ ಹಲವು ಹಗರಣಗಳು ನಡೆದಿದ್ದವು. ಆದರೆ ಮೋದಿ ಸರ್ಕಾರದ ಅವಧಿಯಲ್ಲಿ ಒಂದೇ ಒಂದು ಹಗರಣವೂ ನಡೆದಿಲ್ಲ ಎಂದು ಅವರು ಪ್ರತಿಪಾದಿಸಿದರು.

ಮೋದಿ ಸರ್ಕಾರದ ಅವಧಿಯಲ್ಲಿ ಮೂಲಸೌಕರ್ಯ, ರೈಲ್ವೆ, ರಾಷ್ಟ್ರೀಯ ಹೆದ್ದಾರಿ, ವಿಮಾನ ನಿಲ್ದಾಣ, ರಕ್ಷಣಾ ಕ್ಷೇತ್ರ ಸೇರಿದಂತೆ ಹಲವು ವಿಭಾಗಗಳಲ್ಲಿ ದೇಶ ಗಣನೀಯ ಅಭಿವೃದ್ಧಿ ಕಂಡಿದೆ ಎಂದು ಹೇಳಿದರು.

ಭಾರತ ಇಂದು ವಿಶ್ವದ ನಾಲ್ಕನೇ ಅತಿದೊಡ್ಡ ಆರ್ಥಿಕ ಶಕ್ತಿಯಾಗಿ ಹೊರಹೊಮ್ಮಿದ್ದು, ಇದಕ್ಕೆ ಪ್ರಧಾನಿ ಮೋದಿ ಅವರ ದೂರದೃಷ್ಟಿ ಹಾಗೂ ಆಡಳಿತ ಅನುಭವ ಕಾರಣ ಎಂದು ವಿಜಯೇಂದ್ರ ಅಭಿಪ್ರಾಯಪಟ್ಟರು.

ಈಶಾನ್ಯ ರಾಜ್ಯಗಳ ಅಭಿವೃದ್ಧಿಗೆ ಮೋದಿ ಸರ್ಕಾರ ವಿಶೇಷ ಆದ್ಯತೆ ನೀಡಿದೆ. ನಕ್ಸಲ್ ಸಮಸ್ಯೆ ಗಣನೀಯವಾಗಿ ಕಡಿಮೆಯಾಗಿದ್ದು, ಕಾಶ್ಮೀರ ಅಭಿವೃದ್ಧಿಯತ್ತ ಸಾಗುತ್ತಿದೆ ಎಂದು ಹೇಳಿದರು.

ಕೋವಿಡ್ ಸಂಕಷ್ಟದ ವೇಳೆ ಭಾರತ ಲಸಿಕೆ ತಯಾರಿಸಿ ವಿಶ್ವದ ಹಲವು ರಾಷ್ಟ್ರಗಳಿಗೆ ಪೂರೈಕೆ ಮಾಡಿದ್ದು, ಮೋದಿ ಸರ್ಕಾರದ ದೊಡ್ಡ ಸಾಧನೆ ಎಂದು ಅವರು ಹೇಳಿದರು. ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ ವಿಜಯೇಂದ್ರ, ಗ್ಯಾರಂಟಿ ಯೋಜನೆಗಳಿಗೆ ಹಣ ಹೊಂದಿಸಲು ರಾಜ್ಯ ಸರ್ಕಾರ ತೈಲದ ಮೇಲಿನ ತೆರಿಗೆಯನ್ನು ನಾಲ್ಕು ಬಾರಿ ಹೆಚ್ಚಿಸಿದೆ ಎಂದು ಆರೋಪಿಸಿದರು.

ವಿರೋಧ ಪಕ್ಷದ ನಾಯಕ ಆರ್. ಅಶೋಕ್, ವಿಧಾನಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ಸಂಸದ ಗೋವಿಂದ ಕಾರಜೋಳ, ಸಂಸದ ಪಿ.ಸಿ. ಮೋಹನ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.


# ಶಿಕ್ಷಣ, ಆರೋಗ್ಯ, ಉದ್ಯೋಗ ಸೃಷ್ಟಿಗೆ ಹೆಚ್ಚಿನ ಪ್ರೋತ್ಸಾಹ ನೀಡಿ: ನೀತಿ ಆಯೋಗ ಸಭೆಯಲ್ಲಿ ಶಿವಕುಮಾರ್ ಸಲಹೆ

ನವದೆಹಲಿ

ಶಿಕ್ಷಣ, ಆರೋಗ್ಯ, ಉದ್ಯೋಗ ಸೃಷ್ಟಿ, ತಂತ್ರಜ್ಞಾನ ಹಾಗೂ ಸಂಶೋಧನೆ ಸೇರಿದಂತೆ ದೇಶದ ಅಭಿವೃದ್ಧಿಗೆ ಮಹತ್ವದ ಕ್ಷೇತ್ರಗಳಲ್ಲಿ ಉತ್ತಮ ಸಾಧನೆ ಮಾಡುವ ರಾಜ್ಯಗಳಿಗೆ ಕೇಂದ್ರ ಸರ್ಕಾರ ಹೆಚ್ಚಿನ ಪ್ರೋತ್ಸಾಹ ನೀಡಬೇಕು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ನೀತಿ ಆಯೋಗದ ಸಭೆಯಲ್ಲಿ ಸಲಹೆ ನೀಡಿದರು.

ದೆಹಲಿಯಲ್ಲಿ ನಡೆದ ನೀತಿ ಆಯೋಗದ ಸಭೆಯಲ್ಲಿ ಭಾಗವಹಿಸಿದ ಅವರು, ಕರ್ನಾಟಕ ಸರ್ಕಾರ ಕೈಗೊಂಡಿರುವ ಅಭಿವೃದ್ಧಿ ಕಾರ್ಯಕ್ರಮಗಳನ್ನು ವಿವರಿಸಿ, ರಾಜ್ಯಗಳ ಸಮಗ್ರ ಪ್ರಗತಿಗೆ ಕೇಂದ್ರ ಸರ್ಕಾರ ವಿಶೇಷ ಉತ್ತೇಜನ ನೀಡಬೇಕೆಂದು ಮನವಿ ಮಾಡಿದರು.

ಸಭೆಯಲ್ಲಿ ಮಾತನಾಡಿದ ಸಿಎಂ, ಸರ್ಕಾರಿ ಶಾಲೆ ಮತ್ತು ಕಾಲೇಜುಗಳಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಗಳ ಮಟ್ಟದ ಗುಣಮಟ್ಟದ ಶಿಕ್ಷಣ ಒದಗಿಸಲು ಒಂದು ಬಾರಿಯ ಮೂಲಸೌಕರ್ಯ ಅನುದಾನ ನೀಡುವಂತೆ ಸಲಹೆ ನೀಡಿದರು.



ಪೌಷ್ಟಿಕಾಂಶ, ಆರೋಗ್ಯ, ಕಲಿಕೆಯ ಫಲಿತಾಂಶಗಳು, ಕೌಶಲ್ಯಾಭಿವೃದ್ಧಿ, ಉದ್ಯೋಗ ಸೃಷ್ಟಿ ಹಾಗೂ ಸುಸ್ಥಿರ ಅಭಿವೃದ್ಧಿ ಸೂಚ್ಯಂಕಗಳಲ್ಲಿ ಉತ್ತಮ ಸಾಧನೆ ಮಾಡುವ ರಾಜ್ಯಗಳಿಗೆ ಪ್ರೋತ್ಸಾಹ ನೀಡುವ ನೀತಿಯನ್ನು ರೂಪಿಸಬೇಕೆಂದು ಹೇಳಿದರು.

ಜಾಗತಿಕ ಆರ್ಥಿಕ ಹಾಗೂ ಭೌಗೋಳಿಕ-ರಾಜಕೀಯ ಸವಾಲುಗಳನ್ನು ಎದುರಿಸಲು ತಂತ್ರಜ್ಞಾನ, ಸಂಶೋಧನೆ ಮತ್ತು ಮಾನವ ಸಂಪನ್ಮೂಲ ಅಭಿವೃದ್ಧಿಯಲ್ಲಿ ಹೆಚ್ಚಿನ ಹೂಡಿಕೆಗೆ ಆದ್ಯತೆ ನೀಡಬೇಕು ಎಂದು ಅಭಿಪ್ರಾಯಪಟ್ಟರು.

ಬೆಂಗಳೂರು ದೇಶದ ಆರ್ಥಿಕ ಬೆಳವಣಿಗೆಯ ಪ್ರಮುಖ ಕೇಂದ್ರವಾಗಿದ್ದು, ವಿವಿಧ ರಾಜ್ಯಗಳಿಂದ ಹೆಚ್ಚಿನ ಪ್ರಮಾಣದಲ್ಲಿ ಜನರು ವಲಸೆ ಬರುತ್ತಿರುವ ಹಿನ್ನೆಲೆಯಲ್ಲಿ ನಗರದ ಮೇಲಿನ ಮೂಲಸೌಕರ್ಯ ಒತ್ತಡ ಹೆಚ್ಚುತ್ತಿದೆ.

ಇದಲ್ಲದೆ, ಬೆಂಗಳೂರು ಮತ್ತು ಕೋಲಾರ, ಮೈಸೂರು, ತುಮಕೂರು ಹಾಗೂ ಚಿಕ್ಕಬಳ್ಳಾಪುರ ನಗರಗಳ ನಡುವೆ ವೇಗದ ಸಂಪರ್ಕ ಕಲ್ಪಿಸಲು ರಾಪಿಡ್ ರೈಲ್ ಟ್ರಾನ್ಸಿಟ್ ಸಿಸ್ಟಮ್ (ಆರ್‌ಆರ್‌ಟಿಎಸ್) ಯೋಜನೆಗೆ ಅನುಮೋದನೆ ನೀಡುವಂತೆ ಕೇಂದ್ರ ಸರ್ಕಾರವನ್ನು ಕೋರಿದರು. "ದೇಶದ ಸಮಗ್ರ ಅಭಿವೃದ್ಧಿ ಮತ್ತು ಪರಿವರ್ತನೆಯ ಪಯಣದಲ್ಲಿ ಕೇಂದ್ರ ಸರ್ಕಾರ ಹಾಗೂ ಇತರೆ ರಾಜ್ಯಗಳೊಂದಿಗೆ ಕೈಜೋಡಿಸಿ ಕಾರ್ಯನಿರ್ವಹಿಸಲು ಕರ್ನಾಟಕ ಸಂಪೂರ್ಣ ಬದ್ಧವಾಗಿದೆ" ಎಂದು ಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.

# ರೈತರ ಹಿತರಕ್ಷಣೆಗೆ ಧಾವಿಸಲು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಆದೇಶ



ಕೋಲಾರ

ಜಿಲ್ಲೆಯಲ್ಲಿ ಮುಂಗಾರು ವಿಳಂಬ ಹಿನ್ನೆಲೆಯಲ್ಲಿ ರೈತರ ನೆರವಿಗೆ ಧಾವಿಸಲು ಹಾಗೂ ಸರ್ಕಾರದ ಪ್ರಮುಖ ಯೋಜನೆಗಳನ್ನು ಪಾರದರ್ಶಕವಾಗಿ ಅನುಷ್ಠಾನಗೊಳಿಸಲು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ತುಳಸಿ ಮದ್ದಿನೇನಿ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ನಡೆದ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಭೆಯಲ್ಲಿ ಕೃಷಿ, ತೋಟಗಾರಿಕೆ, ರೇಷ್ಮೆ, ಶಿಕ್ಷಣ ಹಾಗೂ ಆರೋಗ್ಯ ಸೇರಿದಂತೆ ವಿವಿಧ ಪ್ರಮುಖ ಇಲಾಖೆಗಳ ಪ್ರಗತಿ ಪರಿಶೀಲನೆ ನಡೆಸಿದರು.

ಕೃಷಿ ಇಲಾಖೆಯ ಪ್ರಗತಿ ಪರಿಶೀಲನೆ ನಡೆಸಿದ ಕಾರ್ಯದರ್ಶಿಗಳು, ಮುಂಗಾರು ವಿಳಂಬ ಮತ್ತು ಮಳೆ ಕೊರತೆಯಿಂದ ರೈತರು ಈಗಾಗಲೇ ಸಂಕಷ್ಟದಲ್ಲಿದ್ದಾರೆ ಎಂದು ಕಳವಳ ವ್ಯಕ್ತಪಡಿಸಿದರು.

"ಮಾರುಕಟ್ಟೆಯಲ್ಲಿ ನಕಲಿ ಬಿತ್ತನೆ ಬೀಜ ಮಾರಾಟ ಮಾಡುವವರ ಬಗ್ಗೆ ದೂರುಗಳು ಕೇಳಿಬರುತ್ತಿದ್ದು, ಅಂತವರ ವಿರುದ್ಧ ಕೇವಲ ತಪಾಸಣೆ ನಡೆಸಿದರೆ ಸಾಲದು, ತಕ್ಷಣವೇ ಅವರ ಮಾರಾಟ ಪರವಾನಗಿಯನ್ನು (ಲೈಸೆನ್ಸ್) ರದ್ದುಪಡಿಸಬೇಕು.

ರೈತ ಸಂಪರ್ಕ ಕೇಂದ್ರಗಳಿಗೆ ಪೂರೈಕೆಯಾಗುವ ಪ್ರತಿಯೊಂದು ಬಿತ್ತನೆ ಬೀಜಗಳನ್ನು ಕಡ್ಡಾಯವಾಗಿ ಪ್ರಯೋಗಾಲಯದ ತಪಾಸಣೆಗೆ ಒಳಪಡಿಸಿ ಗುಣಮಟ್ಟವನ್ನು ಖಾತರಿಪಡಿಸಿಕೊಂಡೇ ವಿತರಿಸಬೇಕು."

ಇದೇ ವೇಳೆ, ಜಾಗತಿಕ ಸನ್ನಿವೇಶಗಳಿಂದ ರಸಗೊಬ್ಬರ ಕೊರತೆ ಉಂಟಾಗುವ ಸಾಧ್ಯತೆ ಇರುವುದರಿಂದ ರೈತರಿಗೆ ಪರ್ಯಾಯವಾಗಿ ಸಾವಯವ ಮತ್ತು ಹಸಿರೆಲೆ ಗೊಬ್ಬರ ಬಳಸಲು ಪ್ರೇರೇಪಿಸಬೇಕು ಹಾಗೂ ತಾಂತ್ರಿಕ ಯೂರಿಯಾವನ್ನು ಕೈಗಾರಿಕೆಗಳಿಗೆ ಅಕ್ರಮವಾಗಿ ಸಾಗಿಸುವುದನ್ನು ಪತ್ತೆಹಚ್ಚಲು ಕಟ್ಟುನಿಟ್ಟಿನ ನಿಗಾ ವಹಿಸಬೇಕು ಎಂದು ಜಂಟಿ ಕೃಷಿ ನಿರ್ದೇಶಕರಿಗೆ ಸೂಚಿಸಿದರು.

ಜಿಲ್ಲೆಯ ಪ್ರಮುಖ ಬೆಳೆಯಾದ ತೋತಾಪುರಿ ಮಾವಿನ ಬೆಲೆ ತೀವ್ರ ಕುಸಿತ ಕಂಡು ಪ್ರೊಕ್ಯೂರ್‌ಮೆಂಟ್ ಕಾಸ್ಟ್‌ಗಿಂತಲೂ ಕಡಿಮೆ ದರ ಸಿಗುತ್ತಿರುವುದಕ್ಕೆ ಕಳವಳ ವ್ಯಕ್ತಪಡಿಸಿದ ಅವರು, ತೋಟಗಾರಿಕಾ ಇಲಾಖೆಯು ರೈತರ ಹಿತರಕ್ಷಣೆಗೆ ಧಾವಿಸಬೇಕು ಎಂದರು.

"ಮಾವಿನ ಬೆಲೆ ತೀವ್ರ ಕುಸಿತ ಕಂಡಿರುವುದರಿಂದ ರೈತರಿಗೆ ಅನ್ಯಾಯವಾಗಲು ಬಿಡಬಾರದು. ರೈತರ ನೆರವಿಗಾಗಿ ಕಳೆದ ಬಾರಿಯಂತೆ ಈ ವರ್ಷವೂ ತಕ್ಷಣವೇ ಬೆಲೆ ವ್ಯತ್ಯಾಸ ಪಾವತಿ ಯೋಜನೆ (ಕಆಕಖ) ಜಾರಿಗೆ ತರಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ, ಕ್ಯಾಬಿನೆಟ್ ಉಪಸಮಿತಿಯ ಮುಂದೆ ಇಟ್ಟು ಅನುಮೋದನೆ ಪಡೆದುಕೊಳ್ಳಲು ಅಗತ್ಯ ಕ್ರಮ ವಹಿಸಿ ಎಂದರು.

ಶಾಲಾ ಶಿಕ್ಷಣ ಇಲಾಖೆಯ ಪ್ರಗತಿ ಪರಿಶೀಲನೆ ವೇಳೆ ಶಿಕ್ಷಕರ ಡಿಜಿಟಲ್ ಹಾಜರಾತಿಗಾಗಿ ಜಾರಿಗೆ ತಂದಿರುವ 'ಕರ್ತವ್ಯ ಆ್ಯಪ್' ಕುರಿತು ಅವರು ಅತ್ಯಂತ ಕಟ್ಟುನಿಟ್ಟಿನ ಸೂಚನೆ ನೀಡಿದರು.

"ಶಿಕ್ಷಕರು ಬೆಳಗ್ಗೆ ಶಾಲೆಗೆ ಬಂದು ಜಿಪಿಎಸ್ ಆಧಾರಿತ ಹಾಜರಾತಿ (ಕರ್ತವ್ಯ ಆಪ್) ದಾಖಲಿಸಿದ ನಂತರ, ಯಾವುದೇ ಕಾರಣಕ್ಕೂ ಶಾಲಾ ಅವಧಿಯಲ್ಲಿ ಆವರಣ ಬಿಟ್ಟು ಹೊರಗೆ ಹೋಗುವಂತಿಲ್ಲ. ಒಮ್ಮೆ ಅಟೆಂಡೆನ್ಸ್ ಕೊಟ್ಟಿದ್ದಾರೆ ಎಂದರೆ ಅವರು ಶಾಲೆಯ ಒಳಗೇ ಇದ್ದಾರೆ ಮತ್ತು ಕರ್ತವ್ಯದಲ್ಲಿದ್ದಾರೆ ಎಂದೇ ಅರ್ಥ.

ಇದನ್ನು ಉಲ್ಲಂಘಿಸಿದರೆ ಅತ್ಯಂತ ಗಂಭೀರ ಶಿಸ್ತು ಕ್ರಮ ಎದುರಿಸಬೇಕಾಗುತ್ತದೆ ಎಂದರು.

ಆರೋಗ್ಯ ಇಲಾಖೆಯ ಪರಿಶೀಲನೆ ನಡೆಸಿದ ತುಳಸಿ ಮದ್ದಿನೇನಿ ಅವರು, ಜಿಲ್ಲೆಯಲ್ಲಿ ಹೆಣ್ಣು ಭ್ರೂಣ ಹತ್ಯೆ ತಡೆಗಟ್ಟಲು ತಂತ್ರಜ್ಞಾನ ಆಧಾರಿತ ಮತ್ತು ಕಟ್ಟುನಿಟ್ಟಿನ ತಪಾಸಣೆ ನಡೆಸಲು ಆದೇಶಿಸಿದರು.

ಮುಂಗಾರು ಮಳೆ ಚುರುಕಾಗುತ್ತಿರುವ ಹಿನ್ನೆಲೆಯಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಎಚ್ಚರಿಕೆ ವಹಿಸಲು ಜಿಲ್ಲಾಡಳಿತಕ್ಕೆ ತಾಕೀತು ಮಾಡಲಾಯಿತು. "ಶಿಥಿಲಾವಸ್ಥೆಯಲ್ಲಿರುವ ಶಾಲಾ ಕೊಠಡಿಗಳು, ಅಂಗನವಾಡಿ ಕಟ್ಟಡಗಳು ಹಾಗೂ ಸಾರ್ವಜನಿಕ ಕಟ್ಟಡಗಳನ್ನು ತಕ್ಷಣವೇ ಗುರುತಿಸಿ, ಪರ್ಯಾಯ ವ್ಯವಸ್ಥೆ ಕಲ್ಪಿಸಬೇಕು. ಯಾವುದೇ ಅನಾಹುತ ಸಂಭವಿಸಿದರೂ ಸಂಬಂಧಪಟ್ಟ ಅಧಿಕಾರಿಗಳೇ ಹೊಣೆಗಾರರಾಗಲಿದ್ದಾರೆ," ಎಂದು ಎಚ್ಚರಿಕೆ ನೀಡಿದರು.

ಜಿಲ್ಲೆಯ ಪ್ರಮುಖ ಬೆಳೆಯಾದ ತೋತಾಪುರಿ ಮಾವಿನ ವಹಿವಾಟಿನ ಬಗ್ಗೆ ಎಪಿಎಂಸಿ ಅಧಿಕಾರಿಗಳಿಂದ ಮಾಹಿತಿ ಪಡೆಯಲಾಯಿತು. ಪ್ರಸಕ್ತ ಸಾಲಿನಲ್ಲಿ ಅಂದಾಜು 2 ಲಕ್ಷ ಮೆಟ್ರಿಕ್ ಟನ್ ತೋತಾಪುರಿ ಮಾವು ಉತ್ಪಾದನೆಯಾಗುವ ನಿರೀಕ್ಷೆಯಿದ್ದು, ಮಾರುಕಟ್ಟೆಯಲ್ಲಿ ರೈತರಿಗೆ ಯಾವುದೇ ತೊಂದರೆಯಾಗದಂತೆ ಸುಗಮ ವಹಿವಾಟಿಗೆ ವ್ಯವಸ್ಥೆ ಮಾಡಲು ಸೂಚಿಸಲಾಯಿತು. ಜೊತೆಗೆ, ಅರಣ್ಯ ಇಲಾಖೆ ವತಿಯಿಂದ ನಡೆಯುತ್ತಿರುವ ಒತ್ತುವರಿ ತೆರವು ಕಾರ್ಯಾಚರಣೆ ಹಾಗೂ ಎಪಿಎಂಸಿ ಆವರಣ ಸೇರಿದಂತೆ ಜಿಲ್ಲೆಯಾದ್ಯಂತ ಹಮ್ಮಿಕೊಂಡಿರುವ ಗಿಡ ನೆಡುವ (Afforestation) ಕಾರ್ಯಕ್ರಮಗಳ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿ, ಮತ್ತಷ್ಟು ವೇಗ ನೀಡಲು ತಿಳಿಸಲಾಯಿತು.

ಸಭೆಯಲ್ಲಿ ಜಿಲ್ಲಾಧಿಕಾರಿ ಡಾ. ಎಂ. ಆರ್. ರವಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಪ್ರವೀಣ್ ಪಿ ಬಾಗೇವಾಡಿ, ಉಪ ಅರಣ್ಯ ಸಂರಕ್ಷಣಾ ಅಧಿಕಾರಿ ಸರಿನಾ ಸಿಕ್ಕಲಿಗರ್,ಅಪರ ಪೊಲೀಸ್ ವರಿಷ್ಠಾಧಿಕಾರಿ ಹೆಚ್. ಪಿ ಜಗದೀಶ್, ಉಪಕಾರ್ಯದರ್ಶಿ ಟಿ. ಕೆ. ರಮೇಶ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಶ್ರೀನಿವಾಸ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕ ನಾರಾಯಣಸ್ವಾಮಿ, ತೋಟಗಾರಿಕೆ ಉಪನಿರ್ದೇಶಕ ಕುಮಾರಸ್ವಾಮಿ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರು ಮೈಲಾರಪ್ಪ, ಆಯುಷ್ ಇಲಾಖೆ ಅಧಿಕಾರಿ ರಾಘವೇಂದ್ರ ಶೆಟ್ಟಿಗಾರ್ ಸೇರಿದಂತೆ ಜಿಲ್ಲೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಅರಣ್ಯ ಪ್ರದೇಶದಲ್ಲಿ ವಾಣಿಜ್ಯ ಸಂಕೀರ್ಣ ನಿರ್ಮಾಣಕ್ಕೆ ರೈತ ಮುಖಂಡರ ವಿರೋಧ

ಕನಕಪುರ



ಕಾವೇರಿ ವನ್ಯಧಾಮ ವಿಭಾಗದ ಚಿಲಂದವಾಡಿ ಅರಣ್ಯ ಪ್ರದೇಶದ ಸರ್ವೆ ನಂಬರ್ ಎರಡು ಮೂರು ನಾಲ್ಕು ಆರು ಏಳರಲ್ಲಿ ಓಂ ಶಾಂತಿಧಾಮದ ಶೈಕ್ಷಣಿಕ ಕೇಂದ್ರದಲ್ಲಿ ಕಾನೂನು ಬಾಹಿರವಾಗಿ ವಸತಿ ಸಂಕೀರ್ಣ ಗಳನ್ನು ನಿರ್ಮಿಸುತ್ತಿರುವುದಾಗಿ ರೈತ ಮುಖಂಡ ನಲ್ಲಹಳ್ಳಿ ಶ್ರೀನಿವಾಸ್ ಆರೋಪಿಸಿದ್ದಾರೆ.

ನಗರದಲ್ಲಿ ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು ತಾಲ್ಲೂಕಿನ ಸಂಗಮ ಅರಣ್ಯ ಪ್ರದೇಶ ವ್ಯಾಪ್ತಿ ಕಾವೇರಿ ವನ್ಯಜೀವಿಧಾಮ ಚಿಲಂದವಾಡಿ ಅರಣ್ಯ ಪ್ರದೇಶದಲ್ಲಿ ಓಂ ಶಾಂತಿಧಾಮ, ಓಂ ಶಾಂತಿಧಾಮ ಶೈಕ್ಷಣಿಕ ಕೇಂದ್ರ, ಆನಂದಧಾಮ ಎಂಬ ಹಲವು ಹೆಸರುಗಳಲ್ಲಿ ಯೋಗ ಆಧ್ಯಾತ್ಮಿಕ ಕೇಂದ್ರ ನಡೆಸುತ್ತಿವೆ ಎಂದು ಹೇಳಿ ಈಗ ಇಲ್ಲಿ ವಸತಿ ಸಂಕೀರ್ಣ (ಗೇಟೆಡ್ ಕಮ್ಯೂನಿಟಿ) ನಿರ್ಮಿಸಲು ಅನುಮತಿ ಕೋರಿ ಮನವಿ ಸಲ್ಲಿಸಿರುವುದಾಗಿ ತಿಳಿದು ಬಂದಿದ್ದು ವನ್ಯಜೀವಿ ಸಂರಕ್ಷಣಾ ಕಾಯಿದೆಯ ಅಡಿಯಲ್ಲಿ ರಾಜ್ಯ ಸರ್ಕಾರ ಇದನ್ನು ಅನುಮತಿಸಲು ಬರುವುದಿಲ್ಲ ಎಂದು ತಿಳಿಸಿದರು.

ಆಧ್ಯಾತ್ಮದ ಹೆಸರಿನಲ್ಲಿ ಅಕ್ರಮವಾಗಿ ಪ್ರವಾಸೋದ್ಯಮ ನಡೆಸುತ್ತಿರುವ ಹಿಂದೆ ಓಂ ಶಾಂತಿಧಾಮ, ಆನಂದಧಾಮ ಹೆಸರಿನಲ್ಲಿ ಅಕ್ರಮವಾಗಿ ರೆಸಾರ್ಟ್ ನಡೆಸುತ್ತಿರುವ ಬಗ್ಗೆ ಸೆಂಟ್ರಲ್ ಎಂಪವರ್ಡ್ ಸಮಿತಿ (ಸಿ.ಇ.ಸಿ) ಯಲ್ಲಿ ಮೇ 2014ರಲ್ಲಿ ಇವರ ವಿರುದ್ಧ ದೂರು ದಾಖಲಾಗಿ ಅರಣ್ಯ ಇಲಾಖೆಯಿಂದ ಎಷ್ಟೇ ನೋಟೀಸ್ ಕೊಟ್ಟರೂ ಸಹ ಶಾಂತಿಧಾಮ, ಆನಂದಧಾಮದವರು ಅರಣ್ಯ ಇಲಾಖೆಗೆ ಉತ್ತರ ನೀಡಿಲ್ಲ, ಇವರ ವಿರುದ್ಧ ಅರಣ್ಯ ಇಲಾಖೆ ರಾಜ್ಯ ಉಚ್ಚ ನ್ಯಾಯಾಲಯದಲ್ಲಿನ ಮೊಕದ್ದಮೆ ಆದೇಶದಲ್ಲಿ (WP ನಂ.52947/2016, ಮತ್ತು 53175/2016)

ಇವರ ಸ್ಥಳಕ್ಕೆ ದೊಡ್ಡ ವಾಹನಗಳಲ್ಲಿ ಕಟ್ಟಡ ನಿರ್ಮಾಣ ವಸ್ತುಗಳನ್ನು ಸಾಗಿಸುವುದನ್ನು ನಿಷೇಧ, ವನ್ಯಜೀವಿ ಧಾಮದೊಳಗಿರುವ ಈ ತರಹದ ಖಾಸಗಿ ಜಾಗಗಳನ್ನು ವಾಣಿಜ್ಯ ಉದ್ದೇಶಗಳಿಗೆ ಉಪಯೋಗಿಸಬಾರದು ಎಂದು ಸ್ಪಷ್ಟ ವಾಗಿ ಸೂಚಿಸಿದ್ದು ನ್ಯಾಯಾಲಯದ ಆದೇಶದಂತೆ ವಸತಿ ಸಂಕೀರ್ಣ ನಿರ್ಮಿಸಲು ಇವರಿಗೆ ರೆವೆನ್ಯೂ ಇಲಾಖೆಯು ಕೂಡ ಅನುಮತಿ ನೀಡುವ ಹಾಗಿಲ್ಲ, ನ್ಯಾಯಾಲಯದ ಆದೇಶವಿದ್ದರೂ ನ್ಯಾಯಾಲಯದ ಆದೇಶವನ್ನು ಗಾಳಿಗೆ ತೂರಿ ಅಕ್ರಮವಾಗಿ ವಾಣಿಜ್ಯ ಸಂಕೀರ್ಣ ನಿರ್ಮಿಸಲು ಮುಂದಾಗಿರುವ ಆಶ್ರಮದ ವಾರಸುದಾರರಿಗೆ ಅರಣ್ಯ ಇಲಾಖೆಯು ಅನುಮತಿ ನೀಡಬಾರದು ಎಂದು ಕಾವೇರಿ ವನ್ಯಧಾಮದ ಉಪ ಅಧಿಕಾರಿಗಳಿಗೆ ಮನವಿಯನ್ನು ಸಲ್ಲಿಸಿ ಇಲಾಖೆ ವಿನಾದರೂ ಅನುಮತಿ ನೀಡಿದರೆ ರೈತ ಸಂಘದ ವತಿಯಿಂದ ಪ್ರತಿಭಟನೆ ನಡೆಸಬೇಕಾಗುತ್ತದೆ ಎಂದು ಎಚ್ಚರಿಸಿದ್ದಾರೆ.

# ಶಾಲಾ ಮಕ್ಕಳಿಗೆ ಪರಿಕರ ವಿತರಣೆ

ದೊಡ್ಡಬಳ್ಳಾಪುರ

ಬಾಶೆಟ್ಟಹಳ್ಳಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯ ಬಿಸವನಹಳ್ಳಿ ಗ್ರಾಮದಲ್ಲಿ ಉದ್ಭವ ಮೂರ್ತಿ ಶ್ರೀ ತಿಮ್ಮರಾಯಸ್ವಾಮಿ ದೇವಸ್ಥಾನದಲ್ಲಿ ಗಣೇಶ್ ಕುಮಾರ್ ಮತ್ತು ಪೂರ್ಣಿಮಾ ಅವರ ಕುಟುಂಬದ ಕೇಶವ ಮತ್ತು ಸುಶ್ಮ ದಂಪತಿಯ ಪುತ್ರಿ ಅದ್ವಿತಾ ಅವರ ಜನ್ಮದಿನವನ್ನು ಆಚರಿಸಲಾಯಿತು.

ಜನ್ಮದಿನದ ಅಂಗವಾಗಿ ಗ್ರಾಮದ ಆರಾಧ್ಯ ದೈವ ಉದ್ಭವ ಮೂರ್ತಿ ಶ್ರೀ ತಿಮ್ಮರಾಯ ಸ್ವಾಮಿ ಹಾಗೂ ಶ್ರೀ ಅಭಯ ಆಂಜನೇಯ ಸ್ವಾಮಿ ದೇವಾಲಯಗಳಲ್ಲಿ ವಿಶೇಷ ಪೂಜೆ ಸಲ್ಲಿಸಿ, ಕುಟುಂಬದವರು ಮಗುವಿನ ಸುಖ, ಆರೋಗ್ಯ ಮತ್ತು ಉಜ್ವಲ ಭವಿಷ್ಯಕ್ಕಾಗಿ ಪ್ರಾರ್ಥನೆ ಸಲ್ಲಿಸಿದರು. ಬಿಸವನಹಳ್ಳಿ ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳಿಗೆ ಅಗತ್ಯವಾದ ಶಿಕ್ಷಣ ಪರಿಕರಗಳನ್ನು ವಿತರಿಸಲಾಯಿತು.

ನಂತರ ದೇವರಿಗೆ ಪೂಜಾ ಕೈಂಕರ್ಯಗಳು ನಂತರ ಅಲ್ಲದೆ, ಶಾಲಾ ಮಕ್ಕಳಿಗೆ ಸಿಹಿ ಭೋಜನವನ್ನು ನೀಡಲಾಯಿತು. ಶಿಕ್ಷಣ ಮತ್ತು ಸೇವೆಗೆ ಪ್ರಾಮುಖ್ಯತೆ ನೀಡುವ ಈ ಸಮಾಜಮುಖಿ ಕಾರ್ಯಕ್ಕೆ ಗ್ರಾಮಸ್ಥರು ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಪಟ್ಟಣ ಪಂಚಾಯಿತಿ ಸದಸ್ಯರಾದ ಭಾಗ್ಯಮ್ಮ ಅವರ ಪುತ್ರ ತಿಮ್ಮರಾಯ( ವೇಣು ಗೋಪಾಲ್) ಗ್ರಾಮದ ಮುಖಂಡರಾದ ನಾರಾಯಣಸ್ವಾಮಿ ಎಂ., ರಾಮಯ್ಯ, ಪರಶುರಾಮ ಬಿ.ಕೆ., ಯಲ್ಲಪ್ಪ, ಆಂಜಿನಪ್ಪ (ಬೆಟ್ಟ) ಹಾಗೂ ರವಿಕುಮಾರ್ ಎಂ. ಸೇರಿದಂತೆ ಗ್ರಾಮದ ಗಣ್ಯರು, ಶಿಕ್ಷಕರು, ವಿದ್ಯಾರ್ಥಿಗಳು ಮತ್ತು ಗ್ರಾಮಸ್ಥರು ಉಪಸ್ಥಿತರಿದ್ದು, ಅದ್ವಿತಾ ಅವರಿಗೆ ಜನ್ಮದಿನದ ಶುಭಾಶಯಗಳನ್ನು ಕೋರಿದರು.

# ಪರಿಸರ ಕುರಿತು ಅರಿವು ಕಾರ್ಯಕ್ರಮ

ತಿಪಟೂರು

ಇಂದು ಅತಿಯಾದ ಪ್ಲಾಸ್ಟಿಕ್ ಬಳಕೆಯಿಂದಾಗಿ ಪರಿಸರ ಕಲುಷಿತವಾಗುತ್ತಿದ್ದು, ಹಸಿರು ಬೆಳೆಯಲು ತೊಂದರೆಯಾಗುತ್ತದೆ. ಹತ್ತು ಮೈಕ್ರಾನ್ ಪ್ಲಾಸ್ಟಿಕ್ ಭೂಮಿಗೆ ಸೇರಿದರೆ, ಅದು ಕೊಳೆಯಲು ಐದು ನೂರರಿಂದ ಆರು ನೂರು ವರ್ಷಗಳ ಕಾಲ ತೆಗೆದುಕೊಳ್ಳುತ್ತದೆ. ಜಗತ್ತಿನ ವಾಯು ಮಂಡಲದ ಬಿಸಿ ಹದಿನೈದು ಡಿಗ್ರಿ ಮಾತ್ರ ಇದ್ದು, ಕಲುಷಿತ ವಾತಾವರಣದಿಂದಾಗಿ ಇದರ ಮೂರರಷ್ಟು ಇಂಗಾಲದ ಡೈ ಆಕ್ಸೈಡ್ ವಾತಾವರಣ ಸೇರುತ್ತಿದ್ದು , ಗ್ರೀನ್ ಹೌಸ್ ಪರಿಣಾಮವಾಗಿ ಇಡೀ ಭೂಮಿಗೆ ಪ್ಲಾಸ್ಟಿಕ್ ಹೊದಿಕೆ ಹೊದಿಸಿದಂತಾಗಿದೆ. ಇಂದಿನ ಹಲವು ಸಾಂಕ್ರಾಮಿಕ ರೋಗಗಳಿಗೆ ವಾತಾವರಣದ ಉಷ್ಣತೆಯೇ ಕಾರಣವಾಗಿದೆ. ಇದಕ್ಕೆಲ್ಲಾ ಮಾನವನ ದುರಾಸೆಯೇ ಕಾರಣವಾಗಿದೆ ಎಂದು ತುಮಕೂರಿನ ಖ್ಯಾತ ಪರಿಸರವಾದಿ, ಸಮಾಜ ಚಿಂತಕ ಹೆಚ್.ಎಸ್.ನಿರಂಜನಾರಾಧ್ಯ ತಿಳಿಸಿದರು.

ನಗರದ ಕರ್ನಾಟಕ ರಾಜ್ಯ ನಿವೃತ್ತ ನೌಕರರ ಸಂಘದ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ, ಪರಿಸರ ಕುರಿತ ಮಹತ್ವದ ಅರಿವು ಮೂಡಿಸುವ ಕಾರ್ಯಕ್ರಮದಲ್ಲಿ ಭಾಗವಹಿಸಿ, ಮಾತನಾಡಿದರು.

ಸಂಘದ ಆವರಣದಲ್ಲಿ ಸಸಿ ನೆಡುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅರಣ್ಯಾಧಿಕಾರಿ ರಮೇಶ್, ಅರಣ್ಯ ನಾಶ ಮನುಕುಲಕ್ಕೆ ಕಂಟಕವಾಗಿದೆ. ಇಲಾಖೆ ಈ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವುದರ ಜೊತೆಗೆ ಸಾಕಷ್ಟು ಗಿಡಗಳನ್ನು ಹಾಕಲಾಗುತ್ತಿದೆ. ಅಂತಹ ಸಸಿಗಳನ್ನು ಸಂರಕ್ಷಿಸಿ ಬೆಳೆಸುವ ಹೊಣೆಗಾರಿಕೆ ಸಾರ್ವಜನಿಕರದ್ದಾಗಿದೆ ಎಂದು ತಿಳಿಸಿದರು.

ನಗರಸಭೆ ಆರೋಗ್ಯಾಧಿಕಾರಿ ಶ್ರೀನಿವಾಸಮೂರ್ತಿ,ನಿವೃತ್ತ ನೌಕರರ ಸಂಘದ ಅಧ್ಯಕ್ಷ ಕೆ.ಎಂ.ರಾಜಣ್ಣ ಮಾತನಾಡಿದರು.

ಕಾರ್ಯಕ್ರಮದಲ್ಲಿ ಪ್ರಧಾನ ಕಾರ್ಯದರ್ಶಿ ಪಿ.ಆರ್. ಗುರುಸ್ವಾಮಿ, ಅರೇ ಲಿಂಗೇಗೌಡ, ಡಿ.ಎಸ್.ಮರುಳಪ್ಪ, ಕಾತ್ಯಾಯಿನಿ ಶಿವಗಂಗಪ್ಪ, ಎಂ. ಆರ್.ಸೋಮಶೇಖರ್ ಮತ್ತು ಹೆಚ್.ಎಸ್.ಮಂಜಪ್ಪ ಸೇರಿದಂತೆ ಸಂಘದ ಪದಾಧಿಕಾರಿಗಳು ಹಾಗೂ ಸದಸ್ಯರು ಹಾಜರಿದ್ದರು.




# 3 ಕೋಟಿ ವೆಚ್ಚದ ಕಾಮಗಾರಿಗಳಿಗೆ ಭೂಮಿ ಪೂಜೆ

ಕೆ.ಜಿ.ಎಫ್

ನಗರದ ವಿವಿಧ ವಾರ್ಡ್‌ಗಳಲ್ಲಿ ಮುಖ್ಯಮಂತ್ರಿಗಳ ವಿಶೇಷ ಅನುದಾನದಡಿ ಹಮ್ಮಿಕೊಳ್ಳ ಲಾಗಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಕೆಜಿಎಫ್ ಕ್ಷೇತ್ರದ ಶಾಸಕಿ ರೂಪಕಲಾ ಎಂ. ಶಶಿಧರ್ ಅವರು ಅಧಿಕೃತವಾಗಿ ಭೂಮಿ ಪೂಜೆ ನೆರವೇರಿಸಿದರು.



2025–26ನೇ ಸಾಲಿನ ಮಾನ್ಯ ಮುಖ್ಯಮಂತ್ರಿಗಳ ಮೂಲಭೂತ ಸೌಲಭ್ಯ ಅಭಿವೃದ್ಧಿ ಯೋಜನೆಯಡಿ ಕ್ಷೇತ್ರಕ್ಕೆ ಬಿಡುಗಡೆಯಾಗಿರುವ ಒಟ್ಟು ಅನುದಾನದಲ್ಲಿ, ಕೆಜಿಎಫ್ ನಗರ ಭಾಗದ ಸಮಗ್ರ ಪ್ರಗತಿಗಾಗಿ ಶಾಸಕರು 10.00 ಕೋಟಿ ಅನುದಾನವನ್ನು ಮೀಸಲಿಟ್ಟಿದ್ದಾರೆ.

ಈ ಪೈಕಿ ಮೊದಲ ಹಂತವಾಗಿ ಸುಮಾರು 3.00 ಕೋಟಿ ಅಂದಾಜು ವೆಚ್ಚದ ರಸ್ತೆ ಮತ್ತು ಮೂಲಸೌಕರ್ಯ ಅಭಿವೃದ್ಧಿ ಕೆಲಸಗಳಿಗೆ ಚಾಲನೆ ನೀಡಲಾಯಿತು.

ಭೂಮಿ ಪೂಜೆ ನೆರವೇರಿದ ಪ್ರಮುಖ ಕಾಮಗಾರಿಗಳಾದ ವಾರ್ಡ್ ಸಂಖ್ಯೆ 20 ಉರಿಗಾಂಪೇಟೆಯ ಡಾ. ಬಿ.ಆರ್. ಅಂಬೇಡ್ಕರ್ ಪ್ರತಿಮೆಯಿಂದ ಗಣೇಶ ದೇವಾಲಯ ವೃತ್ತದವರೆಗಿನ ರಸ್ತೆ ಅಭಿವೃದ್ಧಿ ಕಾಮಗಾರಿ, ವಾರ್ಡ್ ಸಂಖ್ಯೆ 21ರ ಸಂಪತ್ ಕುಮಾರ್ ಅವರ ಮನೆಯಿಂದ ಬವರಿಲಾಲ್ ಪೇಟೆಯವರೆಗೆ ರಸ್ತೆ ಅಭಿವೃದ್ಧಿ ಕಾಮಗಾರಿ, ವಾರ್ಡ್ ಸಂಖ್ಯೆ 23ರ ಪೀಷ್ ಲೈನ್ ಪ್ರದೇಶದಲ್ಲಿ ರಸ್ತೆ ಕಾಮಗಾರಿ ಹಾಗೂ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಬಳಿಯ ರಸ್ತೆ ಕಾಮಗಾರಿ, ವಾರ್ಡ್ ಸಂಖ್ಯೆ 27ರ 4ನೇ ಅಡ್ಡ ರಸ್ತೆಯ ರಸ್ತೆ ಕಾಮಗಾರಿ, ಸಲ್ಡಾನ ವೃತ್ತದ ಬಳಿ ಇರುವ ಫುಡ್ ಗೋಡೌನ್ ಆವರಣದಲ್ಲಿ ಸಿಸಿ ರಸ್ತೆ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಚಾಲನೆ ನೀಡಲಾಯಿತು.

ಕೆಜಿಎಫ್ ನಗರದ ರಸ್ತೆಗಳ ಸುಧಾರಣೆ ಮತ್ತು ಸಾರ್ವಜನಿಕರ ಸುಗಮ ಸಂಚಾರಕ್ಕೆ ಹೆಚ್ಚಿನ ಆದ್ಯತೆ ನೀಡುತ್ತಿರುವ ಶಾಸಕಿ ರೂಪಕಲಾ ಶಶಿಧರ್ ಅವರ ಕಾರ್ಯವೈಖರಿಗೆ ವಾರ್ಡ್‌ಗಳ ನಿವಾಸಿಗಳು ಹಾಗೂ ಸಾರ್ವಜನಿಕರು ತೀವ್ರ ಸಂತಸ ವ್ಯಕ್ತಪಡಿಸಿ, ಧನ್ಯವಾದ ಸಮರ್ಪಿಸಿದ್ದಾರೆ.

ಈ ಸಂದರ್ಭದಲ್ಲಿ ಕೆಜಿಎಫ್ ನಾಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಶ್ರೀನಿವಾಸ್, ಎಇಇ ಕಿರಣ್ ಕುಮಾರ್, ನಗರ ಸಭೆಯ ಮಾಜಿ ಅಧ್ಯಕ್ಷ ಇಂದಿರಾಗಾಂಧಿ, ಮಾಜಿ ಅಧ್ಯಕ್ಷರಾದ ಸಂಪತ್ ಕುಮಾರ್, ಮಾಜಿ ಸದಸ್ಯರಾದ ದೇವಿ ಗಣೇಶ್, ಶಾಲಿನಿ ನಂದಕುಮಾರ್, ಮಹೇಂದ್ರ, ಭಾಸ್ಕರ್ ವೇಣುಗೋಪಾಲ್, ಪ್ರವೀಣ್ ಕುಮಾರ್, ಶಶಿಕುಮಾರ್, ಮುರಳಿ ಕೃಷ್ಣ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸ್ಥಳೀಯ ಮುಖಂಡರು ಹಾಗೂ ವಾರ್ಡ್‌ಗಳ ಸಾರ್ವಜನಿಕರು ಉಪಸ್ಥಿತರಿದ್ದರು.

# ಮನೆ ಕಳವು ಪ್ರಕರಣದಲ್ಲಿ ಆರೋಪಿ ಬಂಧನ

ಬಂಗಾರಪೇಟೆ

ಸ್ಥಳೀಯ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಸಂಭವಿಸಿದ್ದ ಮನೆ ಕಳವು ಪ್ರಕರಣದಲ್ಲಿ ಓರ್ವ ಆರೋಪಿಯನ್ನು ಬಂಧಿಸಿ, ಆತನಿಂದ ಸುಮಾರು 8 ಲಕ್ಷ ಮೌಲ್ಯದ 80 ಗ್ರಾಂ ಚಿನ್ನದ ಆಭರಣಗಳನ್ನು ವಶಪಡಿಸಿಕೊಳ್ಳುವಲ್ಲಿ ಬಂಗಾರಪೇಟೆ ಪೊಲೀಸರು ಯಶಸ್ವಿಯಾಗಿದ್ದಾರೆ.

ಮಾ.03 ರಂದು ರಾತ್ರಿ ಬಂಗಾರಪೇಟೆಯ ಬಾಬಾನಗರದಲ್ಲಿ ವಾಸವಾಗಿರುವ ಪಿರ್ಯಾದಿ ಮಾದವಿ ಮನೆಯ ಬಾಗಿಲನ್ನು ಯಾರೋ ಕಳ್ಳರು ಮುರಿದು ಮನೆಯ ಬಿರುವಿನಲ್ಲಿದ್ದ ಸುಮಾರು 7 ಲಕ್ಷ 30 ಸಾವಿರ ಬೆಲೆ ಬಾಳುವ 73 ಗ್ರಾಂ ಚಿನ್ನದ ಆಭರಣಗಳು ಮತ್ತು ರೂ.70 ಸಾವಿರ ನಗದು ಹಣವನ್ನು ಕಳವು ಮಾಡಿಕೊಂಡು ಹೋಗಿರುತ್ತಾರೆಂದು ದೂರು ನೀಡಿದ್ದು, ಮೊ.ಸಂ 67/2026 ಪ್ರಕರಣ ದಾಖಲಾಗಿ ತನಿಖೆ ನಡೆಸಲಾಗುತ್ತಿತ್ತು. ಪ್ರಕರಣದಲ್ಲಿ ಆರೋಪಿ ಮತ್ತು ಮಾಲನ್ನು ಪತ್ತೆ ಮಾಡಲು ಬಂಗಾರಪೇಟೆ ಪೊಲೀಸ್ ಠಾಣೆ ನಿರೀಕ್ಷಕರಾದ ರವಿಕುಮಾರ್. ಸಿ ರವರ ನೇತೃತ್ವದಲ್ಲಿ ವಿಶೇಷ ಅಪರಾಧ ಪತ್ತೆ ತಂಡವನ್ನು ರಚಿಸಿದ್ದು, ವಿಶೇಷ ಕಾರ್ಯಾಚರಣೆ ನಡೆಸಿದ ಅಪರಾಧ ಪತ್ತೆ ತಂಡದವರು ಆರೋಪಿಯಾದ ನರೇಶ್ ಕರ್ಕ ಬಿನ್ ಸಾಮರಾಜ್, 40 ವರ್ಷ, 2 ನೇ ಬ್ಲಾಕ್, ಆಂಡ್ರಸನ್‌ಪೇಟೆ, ಕೆ.ಜಿಎಪ್ ಎಂಬಾತನನ್ನು ಬಂಧಿಸಿ ವಿಚಾರಣೆಗೆ ಒಳಪಡಿಸಿದಾಗ ಈತನು ಈಗಾಗಲೇ ರಾಬರ್ಟ್‌ಸನ್ ಪೇಟೆ ಪೊಲೀಸ್ ಠಾಣೆ ಮೊ.ಸಂ:21/2025 ರ ಪ್ರಕರಣದಲ್ಲಿಯೂ ಸಹ 40 ಗ್ರಾಂ ಚಿನ್ನದ ಆಭರಣಗಳು ಕಳವು ಮಾಡಿರುವುದು ಬೆಳಕಿಗೆ ಬಂದಿದ್ದು, ಆರೋಪಿಯಿಂದ ಒಟ್ಟಾರೆ ರೂ.8 ಲಕ್ಷ ಬಾಳುವ 80 ಗ್ರಾಂ ಚಿನ್ನದ ಆಭರಣಗಳನ್ನು ವಶಪಡಿಸಿಕೊಂಡು ಆರೋಪಿಯನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿರುತ್ತಾರೆ.



ಡಿ.ವೈ.ಎಸ್.ಪಿ ವಿ.ಲಕ್ಷ್ಮಯ್ಯ ಮಾರ್ಗದರ್ಶನದಲ್ಲಿ ಆರೋಪಿಯನ್ನು ಬಂಧಿಸಿ ಮಾಲು ವಶಪಡಿಸಿ ಕೊಳ್ಳುವಲ್ಲಿ ಇನ್ಸ್‌ಪೆಕ್ಟರ್ ರವಿಕುಮಾರ್. ಸಿ ಮತ್ತು ಸಿಬ್ಬಂದಿಯವರಾದ ಮಹೇಂದ್ರ ಕುಮಾರ್, ಮಂಜುನಾಥ್, ಷಹಜಹಾನ್ ನದಾಪ್, ವೇಣುಗೋಪಾಲ್, ವಿಜಯ್ ಕುಮಾರ್, ಮಂಜುನಾಥ್, ಶ್ರೀನಿವಾಸ್, ಮುನೇಂದ್ರಗಳನ್ನೊಳಗೊಂಡ ತಂಡವುಯಶಸ್ವಿಯಾಗಿದ್ದು ತಂಡವನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಶಿವಾಂತು ರಜಪೂತ್ ರವರು ಶ್ಲಾಘಿಸಿದ್ದಾರೆ.

# 'ಮೋದಿ 12 ವರ್ಷಗಳು, ಸಮರ್ಥವಾಗಿ ದೇಶವನ್ನು ಮುನ್ನಡೆಸಿದ್ದಾರೆ'



ವಿಜಯಪುರ

ದೇಶದ ಪ್ರಧಾನಿಯಾಗಿ ನರೇಂದ್ರಮೋದಿಯವರು, ಜವಹಾರ್ ಲಾಲ್ ನೆಹರೂ ಅವರ ದಾಖಲೆಯನ್ನು ಮುರಿಯುವುದರ ಜೊತೆಗೆ, ದೇಶವನ್ನು ಸುಭದ್ರವಾದ ಸ್ಥಿತಿಗೆ ಕೊಂಡೊಯ್ದಿರುವುದು, ಸಂತಸದ ವಿಚಾರವೆಂದು ಬಿಜೆಪಿ ಟೌನ್ ಅಧ್ಯಕ್ಷ ವೆಂಕಟೇಶ್ ಪ್ರಭು ಹೇಳಿದರು.

ಪಟ್ಟಣದ ಓಂಕಾರೇಶ್ವರಸ್ವಾಮಿ ದೇವಾಲಯದಲ್ಲಿ, ಪ್ರಧಾನಿ ನರೇಂದ್ರಮೋದಿಯವರು 12 ವರ್ಷಗಳು ಪೂರೈಸಿರುವ ಹಿನ್ನೆಲೆಯಲ್ಲಿ ಪೂಜೆ ಸಲ್ಲಿಸಿದ ನಂತರ, ಅವರು ಮಾತನಾಡಿದರು.

ದೇಶದಲ್ಲಿ ಸತತವಾಗಿ ಮೂರನೇ ಬಾರಿಗೆ ಪ್ರಧಾನಿಯಾಗುವ ಮೂಲಕ, ದೇಶದ ಜನರ ಪ್ರೀತಿಯನ್ನು ಗಳಿಸಿಕೊಳ್ಳುವಲ್ಲಿ ಯಶಸ್ವಿಯಾಗಿರುವ ಅವರು, ವಿಶ್ವದಲ್ಲೆ ಭಾರತ ದೇಶವು ಗುರ್ತಿಸಿಕೊಳ್ಳುವ ಹಂತಕ್ಕೆ ತಂದಿದ್ದಾರೆ. ಅನೇಕ ಸವಾಲುಗಳ ನಡುವೆಯೂ ಭಾರತವನ್ನು ಮುನ್ನಡೆಸುವುದು ಸುಲಭದ ಮಾತಲ್ಲ, ಆದರೂ ದೇಶದ ಜನರ ವಿಶ್ವಾಸಕ್ಕೆ ತಕ್ಕಂತೆ, ವಿಶ್ವದ ಹಲವಾರು ದೇಶಗಳು ಭಾರತದ ಕಡೆಗೆ ಬೆರಗುಗಣ್ಣಿನಿಂದ ನೋಡುವಂತಹ ಕಾರ್ಯಕ್ರಮಗಳನ್ನು ನೀಡುವುದರ ಜೊತೆಗೆ, ಈ ದೇಶದ, ರೈತರಿಂದ ಹಿಡಿದು, ಸೈನಿಕರವರೆಗೆ ಎಲ್ಲಾ ವರ್ಗಗಳಿಗೂ ಅಗತ್ಯವಾಗಿರುವ ಸೌಲಭ್ಯಗಳನ್ನು ಕೊಡುತ್ತಿದ್ದಾರೆ. ಅವರು ಜಾರಿಗೆ ತಂದಿರುವ ಹಲವಾರು ಯೋಜನೆಗಳು ಇಂದು ಸಾಮಾನ್ಯ ವರ್ಗದ ಕುಟುಂಬಗಳಿಗೆ ಆಸರೆಯಾಗಿದೆ ಎಂದರು.

ಬಿಜೆಪಿ ರಾಷ್ಟ್ರೀಯ ಪರಿಷತ್ ಸದಸ್ಯ ದೇ.ಸೂ.ನಾಗರಾಜ್ ಮಾತನಾಡಿ, ಬಿಜೆಪಿ ಪಕ್ಷ ಸಿದ್ಧಾಂತ ಮೇಲೆ ಮುನ್ನಡೆಯುತ್ತಿರುವ ಪಕ್ಷ. ಇಂತಹ ಪಕ್ಷದ ನಾಯಕತ್ವವನ್ನು ವಹಿಸಿಕೊಂಡಿರುವ ಪ್ರಧಾನಿ ನರೇಂದ್ರಮೋದಿಯವರು ಎಂತಹ ಸವಾಲುಗಳನ್ನಾದರೂ ಮೆಟ್ಟಿ ನಿಂತು, ಈ ದೇಶವನ್ನು ಸಮರ್ಥವಾಗಿ ಮುನ್ನಡೆಸುವಂತಹ ದಿಟ್ಟ ನಾಯಕರಾಗಿದ್ದಾರೆ ಎಂದರು.

ಬಿಜೆಪಿ ತಾಲೂಕು ಪ್ರಧಾನ ಕಾರ್ಯದರ್ಶಿ ಅನಿಲ್ ಕುಮಾರ್, ವರದರಾಜು, ಬುಲೇಟ್ ರಾಮಚಂದ್ರಪ್ಪ, ದಿನೇಶ್, ಚಂದ್ರಪ್ಪ, ಮುನಿಸೊಣ್ಣೇಗೌಡ, ವೀಣಾಶ್ರೀನಿವಾಸ್, ತಾಯಮ್ಮ, ಚಂದ್ರಶೇಖರ್, ರಾಘವ, ಅಜಿತ್, ಸಾಗರ್, ಹಾಜರಿದ್ದರು.

# ಮೇಲುಕೋಟೆಯಲ್ಲಿ ಜೂ. 16 ರಿಂದ ಐತಿಹಾಸಿಕ 'ರೈತರಿಗೆ ಚಿತ್ರನಮನ' ಕಲಾಶಿಬಿರ

ಬೆಂಗಳೂರು

ರೈತರ ಬದುಕು, ಬವಣೆ ಹಾಗೂ ರೈತ ಚಳವಳಿಗಳ ಐತಿಹಾಸಿಕ ಹಾದಿಯನ್ನು ಚಿತ್ರಗಳ ಮೂಲಕ ದಾಖಲಿಸಿ,
ಮುಂದಿನ ತಲೆಮಾರಿಗೆ ಕೊಡುಗೆಯಾಗಿ ನೀಡುವ ಉದ್ದೇಶದಿಂದ 2026ರ ಜೂ. 16 ರಿಂದ ಜೂನ್ 20 ರವರೆಗೆ ಐದು ದಿನಗಳ ಕಾಲ ಮಂಡ್ಯ ಜಿಲ್ಲೆಯ ಮೇಲುಕೋಟೆಯ ಸಂಸ್ಕೃತ ವಿಶ್ವವಿದ್ಯಾನಿಲಯದಲ್ಲಿ "ರೈತರಿಗೆ ಚಿತ್ರನಮನ" ಎಂಬ ಮಹತ್ತರ ಕಲಾ ಶಿಬಿರವನ್ನು ಆಯೋಜಿಸಲಾಗಿದೆ.

ಕರ್ನಾಟಕ ಲಲಿತಕಲಾ ಅಕಾಡೆಮಿ,
ಮೇಲುಕೋಟೆಯ ಸಂಸ್ಕೃತ ವಿಶ್ವವಿದ್ಯಾನಿಲಯ ಹಾಗೂ ಪಾಂಡವಪುರ ತಾಲ್ಲೂಕು ಘಟಕದ ಕರ್ನಾಟಕ ರಾಜ್ಯ ರೈತ ಸಂಘದ ಸಹಯೋಗದೊಂದಿಗೆ ಈ ಐತಿಹಾಸಿಕ ಕಾರ್ಯಕ್ರಮ ನಡೆಯಲಿದೆ. ಈ ಮಹತ್ವದ ಕಲಾಶಿಬಿರವನ್ನು ಹಿರಿಯ ಸಾಹಿತಿಗಳಾದ ದೇವನೂರು ಮಹದೇವ ಅವರು ಉದ್ಘಾಟಿಸಲಿದ್ದಾರೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಸಕರಾದ ದರ್ಶನ್ ಪುಟ್ಟಣ್ಣಯ್ಯ ಅವರು ವಹಿಸಲಿದ್ದಾರೆ. ಕರ್ನಾಟಕ ಲಲಿತಕಲಾ ಅಕಾಡೆಮಿಯ ಅಧ್ಯಕ್ಷರಾದ ಪ.ಸ.ಕುಮಾರ್ ಅವರು ಪ್ರಾಸ್ತಾವಿಕ ನುಡಿಗಳನ್ನಾಡಲಿದ್ದಾರೆ. ಮುಖ್ಯ ಅತಿಥಿಗಳಾಗಿ ಹಿರಿಯ ರೈತ ಹೋರಾಟಗಾರರಾದ ಸುನಿತಾ ಪುಟ್ಟಣ್ಣಯ್ಯ, ಗೋವಿಂದೇಗೌಡರು ಹಾಗೂ ಕರ್ನಾಟಕ ರಾಜ್ಯ ರೈತ ಸಂಘದ ಜಿಲ್ಲಾಧ್ಯಕ್ಷರಾದ ಎ.ಎಲ್.ಕೆಂಪುಗೌಡರ್ ಅವರು ಪಾಲ್ಗೊಳ್ಳಲಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಕಲಾಶಿಬಿರದ ಹೆಚ್ಚಿನ ವಿವರಗಳಿಗಾಗಿ ಕರ್ನಾಟಕ ಲಲಿತಕಲಾ ಅಕಾಡೆಮಿಯ ಸದಸ್ಯ ಸಂಚಾಲಕರಾದ ಅಭಿಲಾಶ್ ಡಿ ಮೊಬೈಲ್: 95353 75075 ಅವರನ್ನು ಸಂಪರ್ಕಿಸಬಹುದಾಗಿದೆ.

# ವಿದ್ಯುತ್ ವ್ಯತ್ಯಯ

ಕೋಲಾರ

ಕೋಲಾರ ಕ.ವಿ.ಪ್ರ.ನಿ.ನಿ ಯೋಜನಾ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ (ವಿ) ರವರು ಜೂನ್ 14 ರಂದು 220ಕೆವಿ ಸ್ವೀಕರಣಾ ಕೇಂದ್ರ, ಕೋಲಾರದ ಆವರಣದಲ್ಲಿ 220ಕೆವಿ ವಿದ್ಯುತ್ ಮಾರ್ಗಗಳನ್ನು ಮರುಜೋಡಿಸುವ ದುರಸ್ಥಿ ಮತ್ತು ನಿರ್ವಹಣೆ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಿದ್ದು, 220ಕೆವಿ ಪಿ.ಜಿ.ಸಿ.ಐ.ಎಲ್–ಕೋಲಾರ ಲೈನ್–1ರ ಮಾರ್ಗಮುಕ್ತತೆಯು ಅವಶ್ಯವಿದ್ದು, 220/66/11ಕೆವಿ ಸ್ವೀಕರಣಾ ಕೇಂದ್ರ ಕೋಲಾರ, ನರಸಾಪುರ, ಟಮಕ, ಕೆಂಬೋಡಿ ಮತ್ತು ವಕ್ಕಲೇರಿ 66/11ಕೆವಿ ಉಪಕೇಂದ್ರಗಳಿಂದ ವಿದ್ಯುತ್ ಸರಬರಾಜಾಗುವ ಗ್ರಾಹಕರಿಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

# ಸಾಲದ ಸಕಾಲಿಕ ಮರುಪಾವತಿಯಿಂದ ಇತರರಿಗೂ ನೆರವು ಸಾಧ್ಯ: ಅಸಗೋಡು ಜಯಸಿಂಹ

ಚಿಂತಾಮಣಿ

ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯಿಂದ ಸಾಲ ಪಡೆದುಕೊಂಡ ಫಲಾನುಭವಿಗಳು ಸಮಯಕ್ಕೆ ಸರಿಯಾಗಿ ಮರುಪಾವತಿ ಮಾಡಿದರೆ, ಸಂಸ್ಥೆಯು ಆರ್ಥಿಕವಾಗಿ ಬಲಗೊಂಡು ಮತ್ತಷ್ಟು ಜನರಿಗೆ ಸಾಲ ಸೌಲಭ್ಯ ನೀಡಲು ಅನುಕೂಲವಾಗುತ್ತದೆ ಎಂದು ಮಂಡಳಿಯ ಅಧ್ಯಕ್ಷ ಅಸಗೋಡು ಜಯಸಿಂಹ ತಿಳಿಸಿದರು.



ಚಿಕ್ಕಬಳ್ಳಾಪುರ ಜಿಲ್ಲೆಯ ಎಲ್ಲ ತಾಲ್ಲೂಕುಗಳಿಗೆ ಭೇಟಿ ನೀಡಿ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯಿಂದ ನೇರ ಸಾಲ ಪಡೆದಿರುವ ಫಲಾನುಭವಿಗಳೊಂದಿಗೆ ಹಮ್ಮಿಕೊಂಡಿದ್ದ ಸಮಾಲೋಚನಾ ಸಭೆಯಲ್ಲಿ ಮಾತನಾಡುತ್ತಿದ್ದರು.

ಸಮಾಜ ಬಾಂಧವರಲ್ಲಿ ಪರಸ್ಪರ ಸಹಾಯ ಮನೋಭಾವನೆಗಿಂತ ಪ್ರೀತಿಯಿಂದ ಮಾತನಾಡುವ ಸೌಜನ್ಯವಿರಬೇಕು ಎಂದು ಆಶಿಸಿದರು. ಇದೇ ಸಂದರ್ಭದಲ್ಲಿ ಸಮಾಜಕ್ಕೆ ಮುಖಂಡರು ನೀಡಿದ ಕೊಡುಗೆಗಳನ್ನು ಸ್ಮರಿಸಿದ ಅವರು, ಮಾಜಿ ಸಚಿವ ಡಾ. ಎಂ.ಸಿ. ಸುಧಾಕರ್ ಅವರು ಸಮಾಜದ ಅಭಿವೃದ್ಧಿಗಾಗಿ 20ಗುಂಟೆ ಜಮೀನು ನೀಡಿದ್ದಾರೆ. ಅವರ ತಾತ ದಿವಂಗತ ಎಂ.ಸಿ. ಆಂಜನೇಯರೆಡ್ಡಿ ಅವರ ಕಾಲದಿಂದಲೂ ಬ್ರಾಹ್ಮಣ ಸಮಾಜದ ಮೇಲೆ ಅಪಾರ ಗೌರವವಿದ್ದು, ಅದೇ ಪರಂಪರೆಯನ್ನು ಡಾ. ಎಂ.ಸಿ. ಸುಧಾಕರ್ ಮುಂದುವರಿಸಿಕೊಂಡು ಬಂದಿದ್ದಾರೆ. ಈ ಹಿನ್ನೆಲೆಯಲ್ಲಿ ಅವರಿಗೆ ಸಮಾಜದ ಪರವಾಗಿ ಕೃತಜ್ಞತೆ ಹಾಗೂ ಅಭಿನಂದನೆಗಳನ್ನು ಸಲ್ಲಿಸುವುದಾಗಿ ಹೇಳಿದರು.

ರಾಜ್ಯಾದ್ಯಂತ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯಿಂದ ಒಟ್ಟು 1016 ಮಂದಿಗೆ ನೇರ ಸಾಲ ವಿತರಣೆ ಮಾಡಲಾಗಿದೆ. ಇದರಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯ 62 ಜನರಿಗೆ ಹಾಗೂ ಚಿಂತಾಮಣಿ ತಾಲ್ಲೂಕಿನ 16 ಮಂದಿ ಫಲಾನುಭವಿಗಳಿಗೆ ಸಾಲದ ಮೊತ್ತವನ್ನು ನೇರ ಬ್ಯಾಂಕ್ ಖಾತೆಗಳಿಗೆ ಜಮೆ ಮಾಡಲಾಗಿದೆ. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ತಮ್ಮ ಅಧಿಕಾರಾವಧಿಯಲ್ಲಿ ಸಮಾಜದ ಪ್ರಗತಿಗೆ ಸಾಕಷ್ಟು ನೆರವು ನೀಡಿದ್ದಾರೆ ಎಂದರು.

ಪ್ರಸ್ತುತ ನೂತನ ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡಿರುವ ಡಿ.ಕೆ. ಶಿವಕುಮಾರ್‌ರವರು ಧಾರ್ಮಿಕ ಮತ್ತು ಸಾಂಸ್ಕೃತಿಕ ಸಂಸ್ಕಾರಗಳಿಗೆ ಸದಾ ಒತ್ತು ನೀಡುವ ನಾಯಕರಾಗಿದ್ದಾರೆ. ಅವರು ಕೂಡ ನಮ್ಮ ಬ್ರಾಹ್ಮಣ ಸಮಾಜದ ಅಭಿವೃದ್ಧಿ ಮಂಡಳಿಗೆ ಮುಂಬರುವ ದಿನಗಳಲ್ಲಿ ಹೆಚ್ಚಿನ ಸಹಕಾರ ಮತ್ತು ಪ್ರೋತ್ಸಾಹ ನೀಡಲಿದ್ದಾರೆ ಎಂಬ ಆಶಾಭಾವನೆಯನ್ನು ಜಯಸಿಂಹ ಅವರು ವ್ಯಕ್ತಪಡಿಸಿದರು.

ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ನಿರ್ದೇಶಕ ನಾಗೇಶ್ ಎಸ್.ಆರ್.ಇ.ಟಿ, ಮಾತನಾಡಿ ರಾಜ್ಯ ಬ್ರಾಹ್ಮಣ ಸಮುದಾಯದ ಪ್ರತಿಭಾವಂತ ಪದವೀಧರರು ನಾಗರಿಕ ಸೇವೆಗಳಾದ ಐ.ಎ.ಎಸ್. ಅಥವಾ ಕೆ.ಎ.ಎಸ್. ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಬರೆದು ಭಾರತದ / ಕರ್ನಾಟಕದ ಆಡಳಿತಾತ್ಮಕ ಸೇವೆಗಳಲ್ಲಿ ತೊಡಗಿಸಿಕೊಳ್ಳಲು ಉತ್ತೇಜನ ನೀಡುವ ಸಲುವಾಗಿ 'ಚಾಣಕ್ಯ ಆಡಳಿತ ತರಬೇತಿ ಯೋಜನೆಯನ್ನು ನೀಡಿದ್ದು ಈಸಾಲಿನಲ್ಲಿ ಪ್ರವೇಶಾತಿ ಪಡೆದು ಪಾವತಿಸಲಾದ ತರಬೇತಿ ಶುಲ್ಕದ ಮೊತ್ತದಲ್ಲಿ ಗರಿಷ್ಠ ರೂ. 1ಲಕ್ಷ ಗಳಿಗೆ ಮಿತಿಗೊಳಿಸಿ ಮೂಲಕ ನೇರವಾಗಿ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ ಮಾಡಲಾಗುವುದೆಂದು ತಿಳಿಸಿದರು.

ಸಮಾಲೋಚನಾ ಸಭೆಯಲ್ಲಿ ಮಂಡಳಿಯ ವ್ಯವಸ್ಥಾಪಕ ನಿರ್ದೇಶಕಿ ದೀಪಶ್ರೀ, ನಿರ್ದೇಶಕ ಸಿ.ಎನ್. ನಾಗೇಶ್ ಎಸ್.ಆರ್.ಇ.ಟಿ, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಪ್ರಸಾದ್, ತಾಲ್ಲೂಕು ಪತ್ರಕರ್ತ ಸಂಘದ ನಿಕಟಪೂರ್ವ ಅಧ್ಯಕ್ಷ ಎಸ್.ವಿ. ರವಿಪ್ರಕಾಶ್, ಬ್ರಾಹ್ಮಣ ಸಮಾಜದ ಮುಖಂಡರಾದ ಕೌಶಿಕ್ ಹಾಗೂ ಸಾಲ ಸೌಲಭ್ಯ ಪಡೆದ ಫಲಾನುಭವಿಗಳು ಉಪಸ್ಥಿತರಿದ್ದರು.

ಭಾರತ ಸಾರಥಿ
BHARATHA SARATHI KANNADA DAILY NEWS PAPER
13/06/2026
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಕೋಲಾರಮ್ಮ ಸನ್ನಿಧಿಯಲ್ಲಿ ಸಾಂಸ್ಕೃತಿಕ ವೈಭವ

ಕೋಲಾರ

ನಗರದ ಐತಿಹಾಸಿಕ ಹಾಗೂ ಇತಿಹಾಸ ಪ್ರಸಿದ್ಧ ಶಕ್ತಿ ದೇವತೆ ಶ್ರೀ ಕೋಲಾರಮ್ಮ ದೇವಸ್ಥಾನದ ಆವರಣದಲ್ಲಿ ನಾಳೆಯಿಂದ (ಶುಕ್ರವಾರ) ಪ್ರತಿ ವಾರ 'ಸಂಜೆ ಸೌರಭ' ಹೆಸರಿನಲ್ಲಿ ಸಾಂಸ್ಕೃತಿಕ ವೈಭವ ಅನಾವರಣಗೊಳ್ಳಲಿದೆ. ಪಾರಂಪರಿಕ ಕಲೆಗಳನ್ನು ಪ್ರೋತ್ಸಾಹಿಸುವ ಹಾಗೂ ಜಿಲ್ಲೆಯ ಸುಪ್ತ ಪ್ರತಿಭೆಗಳಿಗೆ ಸೂಕ್ತ ವೇದಿಕೆ ಕಲ್ಪಿಸುವ ವಿನೂತನ ಉದ್ದೇಶದಿಂದ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಧಾರ್ಮಿಕ ದತ್ತಿ ಇಲಾಖೆಯ ಜಂಟಿ ಆಶ್ರಯದಲ್ಲಿ ಪ್ರತಿ ಶುಕ್ರವಾರ ಸಂಜೆ ಒಂದು ಗಂಟೆಯ ಅವಧಿಯ ಈ 'ಕಲಾ ಸೇವೆ'ಯನ್ನು ಹಮ್ಮಿಕೊಳ್ಳಲಾಗಿದೆ.

ಈ ಶುಕ್ರವಾರದಿಂದಲೇ ಈ ವಿಶಿಷ್ಟ ಯೋಜನೆಗೆ ಅಧಿಕೃತವಾಗಿ ಚಾಲನೆ ದೊರೆಯಲಿದ್ದು, ಇನ್ನು ಮುಂದೆ ಪ್ರತಿ ಶುಕ್ರವಾರ ಸರಣಿ ರೂಪದಲ್ಲಿ ನಿರಂತರವಾಗಿ ಈ ಕಾರ್ಯಕ್ರಮ ಜರುಗಲಿದೆ. ಈ ವಿನೂತನ ಪ್ರಾರಂಭೋತ್ಸವದ ಅಂಗವಾಗಿ ಧಾರ್ಮಿಕ ದತ್ತಿ ಇಲಾಖೆಯ ವತಿಯಿಂದ ಭಕ್ತಾದಿಗಳಿಗೆ ಉಚಿತ ಲಡ್ಡು ಪ್ರಸಾದದ ವ್ಯವಸ್ಥೆಯನ್ನೂ ಮಾಡಲಾಗಿದೆ.

ಪ್ರಸ್ತುತ ಆಧುನಿಕತೆಯ ಅಬ್ಬರದಲ್ಲಿ ಕಣ್ಮರೆಯಾಗುತ್ತಿರುವ ಸಾಂಪ್ರದಾಯಿಕ ಕಲಾ ಪ್ರಕಾರಗಳನ್ನು ಉಳಿಸಿ, ಬೆಳೆಸುವುದು ಈ ಯೋಜನೆಯ ಮುಖ್ಯ ಆಶಯವಾಗಿದೆ. ಜಿಲ್ಲೆಯಾದ್ಯಂತ ಇರುವ ಅಪಾರ ಪ್ರತಿಭಾವಂತ ಕಲಾವಿದರಿಗೆ ಇದೊಂದು ಸುವರ್ಣಾವಕಾಶವಾಗಲಿದೆ.

ಜಿಲ್ಲೆಯ ಗ್ರಾಮೀಣ ಹಾಗೂ ನಗರ ಪ್ರದೇಶಗಳ ಉದಯೋನ್ಮುಖ ಮತ್ತು ಯುವ ಪ್ರತಿಭೆಗಳಿಗೆ ತಮ್ಮ ಅಪ್ರತಿಮ ಸಾಮರ್ಥ್ಯವನ್ನು ಪ್ರದರ್ಶಿಸಲು ಇದೊಂದು ಅತ್ಯುತ್ತಮ ಮತ್ತು ಶಾಶ್ವತ ವೇದಿಕೆಯಾಗಲಿದೆ.

ರಾಜ್ಯ ಹಾಗೂ ಜಿಲ್ಲೆಯ ಪ್ರಸಿದ್ಧ ಮತ್ತು ಅನುಭವಿ ಕಲಾವಿದರ ಜೊತೆಜೊತೆಗೇ ವೇದಿಕೆ ಹಂಚಿಕೊಳ್ಳುವ ಮೂಲಕ ಯುವ ಕಲಾವಿದರು ತಮ್ಮ ಕಲಾ ನೈಪುಣ್ಯತೆಯನ್ನು ಮತ್ತಷ್ಟು ಉತ್ತಮಪಡಿಸಿಕೊಳ್ಳಲು ಅವಕಾಶ ಸಿಗಲಿದೆ.

ನೃತ್ಯ, ಗೀತ, ಭಜನೆ,ವಾದ್ಯ ಸುಗಮ ಸಂಗೀತ, ತತ್ವಪದಗಳು ಹಾಗೂ ವಚನ ಗಾಯನ ಸೇರಿದಂತೆ ವಿವಿಧ ಸಾಂಪ್ರದಾಯಿಕ ಕಲೆಗಳನ್ನು ಜನಸಾಮಾನ್ಯರಿಗೆ ತಲುಪಿಸಲು ಈ ಯೋಜನೆ ನೆರವಾಗಲಿದೆ.ಸಂಜೆ ಸೌರಭ ಕಾರ್ಯಕ್ರಮ ಪ್ರತಿ ಶುಕ್ರವಾರ ಸಂಜೆ 7 ಕ್ಕೆ ಶ್ರೀ ಕೋಲಾರಮ್ಮ ದೇವಸ್ಥಾನದ ಆವರಣದಲ್ಲಿ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಧಾರ್ಮಿಕ ದತ್ತಿ ಇಲಾಖೆ, ಕೋಲಾರ ಜಿಲ್ಲೆ ಇವರ ಸಹಯೋಗದಲ್ಲಿ ಪ್ರತಿವಾರ ತಪ್ಪದೇ ನಡೆಯಲಿದೆ. ಕೋಲಾರ ಜಿಲ್ಲೆಯ ಸಾಂಸ್ಕೃತಿಕ ಶ್ರೀಮಂತಿಕೆಯನ್ನು ಎತ್ತಿಹಿಡಿಯುವ ಹಾಗೂ ಸ್ಥಳೀಯ ಕಲೆ ಮತ್ತು ಕಲಾವಿದರನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಹಮ್ಮಿಕೊಂಡಿರುವ ಈ ಮಹತ್ಕಾರ್ಯಕ್ಕೆ ಜಿಲ್ಲೆಯ ಪ್ರಬುದ್ಧ ಕಲಾ ರಸಿಕರು, ಸಾರ್ವಜನಿಕರು ಹಾಗೂ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು. ಕೋಲಾರಮ್ಮ ದೇವಿಯ ದರ್ಶನ ಪಡೆದು, ಸಾಂಸ್ಕೃತಿಕ ಕಾರ್ಯಕ್ರಮವನ್ನು ವೀಕ್ಷಿಸುವ ಮೂಲಕ 'ಸಂಜೆ ಸೌರಭ'ವನ್ನು ಯಶಸ್ವಿಗೊಳಿಸಬೇಕಾಗಿ ಜಿಲ್ಲಾಡಳಿತದ ಪರವಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಕೋರಿದ್ದಾರೆ.

# ಸೋಮಲಾಪುರದಲ್ಲಿ ಅಪರೂಪದ ಬೃಹತ್ ಶಿಲಾಯುಗದ ಸಮಾಧಿ ನೆಲೆ ಪತ್ತೆ

ಗುಡಿಬಂಡೆ

ತಾಲೂಕಿನ ಕಸಬಾ ಹೋಬಳಿಯ ಉಲ್ಲೋಡು ಗ್ರಾ.ಪಂ ವ್ಯಾಪ್ತಿಯ ಸೋಮಲಾಪುರ ಗ್ರಾಮದ ಪೂರ್ವ ಭಾಗದಲ್ಲಿರುವ ಜಮೀನಿನಲ್ಲಿ ಅಪರೂಪದ ಬೃಹತ್ ಶಿಲಾಯುಗದ (ಮೆಗಾಲಿಥಿಕ್) ಸಮಾಧಿ ನೆಲೆಯೊಂದು ಪತ್ತೆಯಾಗಿದೆ. ಕರ್ನಾಟಕ ಸರ್ಕಾರದ ಪುರಾತತ್ವ ಇಲಾಖೆಯ ಸಹಯೋಗದಲ್ಲಿ ನಡೆಸಿದ ಗ್ರಾಮವಾರು ಸಮೀಕ್ಷೆಯ ಸಂದರ್ಭದಲ್ಲಿ ಈ ಮಹತ್ವದ ಐತಿಹಾಸಿಕ ಆವಿಷ್ಕಾರ ಬೆಳಕಿಗೆ ಬಂದಿದೆ.

ಕರ್ನಾಟಕ ಪುರಾತತ್ವ ಇಲಾಖೆಯ ಉಪನಿರ್ದೇಶಕಿ ಎಂ. ಕಾವ್ಯಶ್ರೀ ಮಾರ್ಗದರ್ಶನದಲ್ಲಿ ಸಂಶೋಧಕರಾದ ಕೆ. ಧನಪಾಲ್ ಹಾಗೂ ಅಪ್ಪೆಗೌಡನಹಳ್ಳಿ ತ್ಯಾಗರಾಜ್ ಅವರು ಗುಡಿಬಂಡೆ ತಾಲೂಕಿನ ವಿವಿಧ ಗ್ರಾಮಗಳಲ್ಲಿ ನಡೆಸಿದ ಕ್ಷೇತ್ರ ಸಮೀಕ್ಷೆಯ ವೇಳೆ ಈ ಪುರಾತತ್ವ ಮಹತ್ವದ ನೆಲೆಯನ್ನು ಗುರುತಿಸಿದ್ದಾರೆ.

ಪತ್ತೆಯಾಗಿರುವ ಈ ನೆಲೆಯಲ್ಲಿ ಬೃಹತ್ ಶಿಲಾಯುಗಕ್ಕೆ ಸೇರಿದ ಕಲ್ಲುವೃತ್ತ,



ನೆಲಕೋಣೆ ಹಾಗೂ ನಿಲಸುಗಲ್ಲು ಮಾದರಿಯ ಸಮಾಧಿ ರಚನೆಗಳು ಕಂಡುಬಂದಿವೆ. ಸುಮಾರು 30 ಅಡಿ ಉದ್ದ ಮತ್ತು 15 ಅಡಿ ಅಗಲದ ಕಲ್ಲುವೃತ್ತ ಸಮಾಧಿಗಳನ್ನು 15ಕ್ಕೂ ಹೆಚ್ಚು ಬೃಹತ್ ಚಪ್ಪಡಿ ಕಲ್ಲುಗಳನ್ನು ಬಳಸಿ ನಿರ್ಮಿಸಲಾಗಿದೆ. ಸಮಾಧಿಗಳ ಮುಚ್ಚಳ ಕಲ್ಲುಗಳು ಸುಮಾರು 7 ಅಡಿ ಅಗಲ ಮತ್ತು 2 ಅಡಿ ಎತ್ತರ ಹೊಂದಿರುವುದು ಗಮನಾರ್ಹವಾಗಿದೆ.

ಈ ನೆಲೆಯ ಅತ್ಯಂತ ವಿಶೇಷ ಅಂಶವೆಂದರೆ, ಒಂದೇ ಕಲ್ಲುವೃತ್ತದೊಳಗೆ ಎರಡು ಬೃಹತ್ ನಿಲಸುಗಲ್ಲುಗಳು ಪತ್ತೆಯಾಗಿರುವುದು. ಅವುಗಳಲ್ಲಿ ಒಂದು ಸುಮಾರು 15 ಅಡಿ ಎತ್ತರ ಮತ್ತು 4 ಅಡಿ ಅಗಲ ಹೊಂದಿದ್ದು, ಮತ್ತೊಂದು ಸುಮಾರು 13 ಅಡಿ ಎತ್ತರದಲ್ಲಿದೆ. ಗ್ರಾನೈಟ್ ಶಿಲೆಯಲ್ಲಿ ರೂಪಿಸಲಾದ ಈ ನಿಲಸುಗಲ್ಲುಗಳಲ್ಲಿ ಒಂದು ಮೊನಚಾದ ತುದಿಯನ್ನು ಹೊಂದಿದ್ದರೆ, ಇನ್ನೊಂದು ಕಾಲಕ್ರಮೇಣ ನೆಲಕ್ಕೆ ಉರುಳಿರುವ ಸ್ಥಿತಿಯಲ್ಲಿ ಕಂಡುಬಂದಿದೆ.

ಒಂದೇ ಕಲ್ಲುವೃತ್ತದೊಳಗೆ ಎರಡು ನಿಲಸುಗಲ್ಲುಗಳು ಕಂಡುಬಂದಿರುವುದು ರಾಜ್ಯದ ಪುರಾತತ್ವ ಅಧ್ಯಯನದಲ್ಲಿ ಅಪರೂಪದ ಸಂಗತಿಯಾಗಿ ಪರಿಗಣಿಸಲಾಗಿದೆ. ಇದೇ ಮಾದರಿಯ ಕಲ್ಲುವೃತ್ತ ಸಮಾಧಿಯೊಂದಿಗೆ ನಿಲಸುಗಲ್ಲುಗಳನ್ನು ತುಮಕೂರು ಜಿಲ್ಲೆಯ ಮಧುಗಿರಿ ತಾಲೂಕಿನ ಕತ್ತಿರಾಜನಹಳ್ಳಿಯಲ್ಲಿಯೂ ಹಾಗೂ ರಾಜ್ಯದ ಕೆಲವೇ ಕೆಲವು ಸ್ಥಳಗಳಲ್ಲಿ ಗುರುತಿಸಲಾಗಿದೆ. ಪುರಾತತ್ವ ತಜ್ಞರಾದ ಡಾ. ಕೆ.ಬಿ. ಶಿವತಾರಕ್ ಅವರ ಪ್ರಕಾರ, ಕರ್ನಾಟಕ ರಾಜ್ಯದಲ್ಲಿ ಇದುವರೆಗೆ 320ಕ್ಕೂ ಹೆಚ್ಚು ನಿಲಸುಗಲ್ಲು ನೆಲೆಗಳನ್ನು ದಾಖಲಿಸಲಾಗಿದೆ. ಇವುಗಳಲ್ಲಿ ಕೆಲವು ಸ್ಥಳಗಳಲ್ಲಿ ಒಂದೇ ನಿಲಸುಗಲ್ಲು ಕಂಡುಬಂದರೆ, ಇನ್ನೂ ಕೆಲವು ನೆಲೆಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ನಿಲಸುಗಲ್ಲುಗಳು ಪತ್ತೆಯಾಗಿವೆ. ಕೆಲವು ನೆಲೆಗಳು ಪ್ರಾಚೀನ ಖಗೋಳ ಜ್ಞಾನದ ಅಧ್ಯಯನಕ್ಕೂ ಮಹತ್ವದ ಮಾಹಿತಿಯನ್ನು ಒದಗಿಸಿವೆ.

ವೈಜ್ಞಾನಿಕ ಅಧ್ಯಯನಗಳ ಪ್ರಕಾರ, ಬೃಹತ್ ಶಿಲಾಯುಗ ಸಂಸ್ಕೃತಿ ಕ್ರಿ.ಪೂ. 3000 ರಿಂದ ಕ್ರಿ.ಶ. ಮೊದಲನೇ ಶತಮಾನದವರೆಗೆ ಅಸ್ತಿತ್ವದಲ್ಲಿತ್ತು. ಸೋಮಲಾಪುರದಲ್ಲಿ ಪತ್ತೆಯಾಗಿರುವ ಈ ಸಮಾಧಿ ರಚನೆಗಳೂ ಇದೇ ಕಾಲಘಟ್ಟಕ್ಕೆ ಸೇರಿವೆ ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

ಈ ಮಹತ್ವದ ಐತಿಹಾಸಿಕ ನೆಲೆಯನ್ನು ಗುರುತಿಸುವ ಕಾರ್ಯದಲ್ಲಿ ಉಲ್ಲೋಡು ಗ್ರಾಮ ಪಂಚಾಯಿತಿಯ ಪಿಡಿಒ ಶ್ರೀನಿವಾಸ್ ಹಾಗೂ ಸಿಬ್ಬಂದಿ ಅಶೋಕ್ ಅವರು ಸಹಕಾರ ನೀಡಿದ್ದು, ಸ್ಥಳೀಯ ಗ್ರಾಮಸ್ಥರೂ ಸಕ್ರಿಯವಾಗಿ ಪಾಲ್ಗೊಂಡಿದ್ದರು.


# ಹುಸೇನ್‌ಪುರದಲ್ಲಿ ಕೆಪಿಟಿಸಿಎಲ್ ವಿದ್ಯುತ್ ಸ್ಥಾವರ ನಿರ್ಮಾಣ

ತುಮಕೂರು

ಜಿಲ್ಲೆ ಪಾವಗಡ ತಾಲ್ಲೂಕಿನ ನಾಗಲಮಡಿಕೆ ಹೋಬಳಿಯ ಹುಸೇನ್‌ಪುರ ಗ್ರಾಮದಲ್ಲಿ 400/220 ಕೆ.ವಿ. ವಿದ್ಯುತ್ ಸ್ಥಾವರ ನಿರ್ಮಾಣ ಯೋಜನೆಗೆ ಅಗತ್ಯವಿರುವ ಭೂಮಿಯನ್ನು ನೇರ ಖರೀದಿ ಮೂಲಕ ಸ್ವಾಧೀನಪಡಿಸಿಕೊಳ್ಳುವ ಸಂಬಂಧ ಧರ ನಿರ್ಧರಣಾ ಸಲಹಾ ಸಮಿತಿಯ ಸಭೆಯು ಇಂದು ಮಾನ್ಯ ಜಿಲ್ಲಾಧಿಕಾರಿಗಳು ಹಾಗೂ ಧರ ನಿರ್ಧರಣಾ ಸಲಹಾ ಸಮಿತಿಯ ಅಧ್ಯಕ್ಷರ ಅಧ್ಯಕ್ಷತೆಯಲ್ಲಿ ನಡೆಯಿತು.

ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಮತ್ತು ನ್ಯಾಯೋಚಿತ ಪರಿಹಾರದ ಹಕ್ಕು, ಪುನರ್ವಸತಿ ಮತ್ತು ಪುನರ್‌ವ್ಯವಸ್ಥೆ ಹಕ್ಕು ಅಧಿನಿಯಮ-2013ರ ಕಲಂ 46ರ ಅನ್ವಯ, ಯೋಜನೆಗೆ ಅಗತ್ಯವಿರುವ ಭೂಮಿಯನ್ನು ಭೂಮಾಲೀಕರಿಂದ ನೇರವಾಗಿ ಖರೀದಿಸುವ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

ಸರ್ಕಾರದ ಮಾರ್ಗಸೂಚಿಯಂತೆ 100 ಎಕರೆ ವಿಸ್ತೀರ್ಣ ಮೀರದ ಭೂಮಿಯನ್ನು ನೇರ ಖರೀದಿ ಮೂಲಕ ಪಡೆಯಲು ಅವಕಾಶವಿದ್ದು, ಈ ಸಂಬಂಧ ಭೂಕೋರಿಕೆ ಇಲಾಖೆಯಾದ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ (ಕೆಪಿಟಿಸಿಎಲ್), ತುಮಕೂರು ವತಿಯಿಂದ ಸಲ್ಲಿಸಲಾದ ಪ್ರಸ್ತಾವನೆಯ ಮೇರೆಗೆ ಕ್ರಮ ಕೈಗೊಳ್ಳಲಾಗಿರುತ್ತದೆ.



ಜಿಲ್ಲಾಧಿಕಾರಿಗಳ ನಿರ್ದೇಶನದಂತೆ ಸದಸ್ಯ ಕಾರ್ಯದರ್ಶಿಗಳು ಹಾಗೂ ಮಧುಗಿರಿ ಉಪ ವಿಭಾಗಾಧಿಕಾರಿಗಳು ಸಂಬಂಧಿತ ಭೂಮಿಗಳ ಮೌಲ್ಯ ನಿರ್ಣಯ ಮಾಡಿ ಸಮಿತಿಯ ಅನುಮೋದನೆಗಾಗಿ ಸಭೆಗೆ ಮಂಡಿಸಿ ಸಭೆಯಲ್ಲಿ ಯೋಜನೆಗೆ ಅಗತ್ಯವಿರುವ ಭೂಮಿಯನ್ನು ನೇರ ಖರೀದಿ ಮೂಲಕ ಪಡೆಯುವ ಕುರಿತು ಸವಿಸ್ತಾರವಾಗಿ ಚರ್ಚಿಸಲಾಯಿತು. ಯೋಜನೆಗಾಗಿ ಖರೀದಿಸಲಾ ಗುತ್ತಿರುವ ಭೂಮಿಗೆ ಸಂಬಂಧಿಸಿದಂತೆ ಒಟ್ಟು 13 ಮಂದಿ ಭೂಮಾಲೀಕರು/ಫಲಾನುಭವಿಗಳು ಇದ್ದು, ರೈತರಿಗೆ ನ್ಯಾಯೋಚಿತ ಪರಿಹಾರ ಒದಗಿಸುವ ಉದ್ದೇಶದಿಂದ ಸಮಿತಿಯು ವಿಷಯವನ್ನು ಕೂಲಂಕುಷವಾಗಿ ಪರಿಶೀಲಿಸಿತು. ಬಳಿಕ ನೇರ ಖರೀದಿ ಆಧಾರದ ಮೇಲೆ ಪ್ರತಿ ಎಕರೆಗೆ ರೂ.22 ಲಕ್ಷಗಳ ದರವನ್ನು ನಿಗದಿಪಡಿಸಿ ಅನುಮೋದಿಸಲಾಯಿತು. ಈ ಯೋಜನೆಯ ಅನುಷ್ಠಾನದಿಂದ ಪ್ರದೇಶದಲ್ಲಿ ವಿದ್ಯುತ್ ಮೂಲಸೌಕರ್ಯ ಮತ್ತಷ್ಟು ಬಲಗೊಳ್ಳಲಿದ್ದು, ವಿದ್ಯುತ್ ಸರಬರಾಜಿನ ಗುಣಮಟ್ಟ ಹಾಗೂ ವಿಶ್ವಾಸಾರ್ಹತೆ ಹೆಚ್ಚಳವಾಗಲಿದೆ ಎಂದು ಸಭೆಯಲ್ಲಿ ತಿಳಿಸಲಾಯಿತು.

ಸಭೆಯಲ್ಲಿ ಮಾನ ಜಿಲ್ಲಾಧಿಕಾರಿಗಳು, ಕೆಪಿಟಿಸಿಎಲ್ ನ ಅಧಿಕಾರಿಗಳು ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

# ದೇವಸ್ಥಾನಗಳನ್ನು ಕಳ್ಳತನ ಮಾಡುತ್ತಿದ್ದ ಕಳ್ಳರ ಬಂಧನ

ದೊಡ್ಡಬಳ್ಳಾಪುರ

ದೇವಸ್ಥಾನಗಳನ್ನೆ ಗುರಿಯಾಗಿಸಿಕೊಂಡು ಸರಣಿ ಕಳ್ಳತನ ನಡೆಸುತ್ತಿದ್ದ ಅಪ್ಪ ಹಾಗೂ ಇಬ್ಬರು ಮಕ್ಕಳನ್ನೊಳಗೊಂಡ ಖತರ್ನಾಕ್ ಕಳ್ಳರ ಜಾಲವನ್ನು ದೊಡ್ಡಬೆಳವಂಗಲ ಠಾಣೆ ಪೊಲೀಸರು ಭೇದಿಸಿದ್ದು, ಮೂವರು ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಬಂಧಿತ ಆರೋಪಿಗಳನ್ನು ಮಹೇಶ್ @ ಓಟಿ, ರಘು ಜಿ, ಅಂಜನ್ ಕುಮಾರ್ ಎಂದು ಗುರುತಿಸಲಾಗಿದೆ. ಪ್ರಕರಣದ ಮತ್ತೋರ್ವ ಆರೋಪಿ ಗಂಗರೆಡ್ಡಿ ತಲೆಮರೆಸಿಕೊಂಡಿದ್ದು, ಆತನ ಬಂಧನಕ್ಕೆ ಪೊಲೀಸರು ಬಲೆ ಬೀಸಿದ್ದಾರೆ.

ಬಂಧಿತರಿಂದ ಅಪಾರ ಮೌಲ್ಯದ ದೇವರ ಬೆಳ್ಳಿ ಕಿರೀಟಗಳು, ಚಿನ್ನಾಭರಣಗಳು ಹಾಗೂ ಕಳ್ಳತನಕ್ಕೆ ಬಳಸುತ್ತಿದ್ದ ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ.

ಬಂಧಿತರ ವಿರುದ್ಧ ವಿವಿಧ ಪೊಲೀಸ್ ಠಾಣೆಗಳಲ್ಲಿ ದೇವಸ್ಥಾನ ಕಳ್ಳತನಕ್ಕೆ ಸಂಬಂಧಿಸಿದ ಹಲವು ಪ್ರಕರಣಗಳು ದಾಖಲಾಗಿರುವ ಶಂಕೆ ವ್ಯಕ್ತವಾಗಿದ್ದು, ಹೆಚ್ಚಿನ ತನಿಖೆ ಮುಂದುವರಿದಿದೆ.

2 ಕೇಬಲ್ ಪ್ರಕರಣಗಳ ಬೆನ್ನತ್ತಿದ್ದ ಪೊಲೀಸರಿಗೆ ಇಬ್ಬರು ಆರೋಪಿಗಳು ತಗಲಾಕ್ಕೊಂಡಿದ್ದಾರೆ.

ಬಂಧಿತ ಆರೋಪಿಗಳು: ಹುಸೇನ್ ಶೇಖ್(19), ಬಾಟೆಲ್ ಆಯುವ ಕೆಲಸ, ಆರೀಫ್ ಶೇಖ್(27) ಪೇಪರ್ ಆಯುವ ಕೆಲಸ.

ಬಂಧಿತರಿಂದ 3 ಲಕ್ಷ ಬೆಲೆ ಬಾಳುವ ಕಂಡಕ್ಟರ್ ಕೇಬಲ್ ಹಾಗೂ 35 ಸಾವಿರ ರೂ. ಬೆಲೆ ಬಾಳುವ 300 ಮೀಟರ್ ಕೇಬಲ್ ಹಾಗೂ ಆರೋಪಿಗಳು ಕೃತ್ಯಕ್ಕೆ ಉಪಯೋಗಿಸಿದ್ದ ಒಂದು ಕ್ಯಾಂಟರ್, ಒಂದು ಅಶೋಕ ಲೈಲ್ಯಾಂಡ್ ದೋಸ್ತ್ ಹಾಗೂ ಒಂದು ಆಟೋ ಹಾಗೂ ಬೈಕನ್ನು ವಶಕ್ಕೆ ಪಡೆದುಕೊಳ್ಳಲಾಗಿದೆ.

# ಅನಧಿಕೃತ ವಾಣಿಜ್ಯ ಮಳಿಗೆ ತೆರವು

ದೊಡ್ಡಬಳ್ಳಾಪುರ

ನಗರದ ಬಸವ ಭವನ ಪಕ್ಕದ ಸೋಮೇಶ್ವರ ಕುಂಟೆ ಜಾಗ ಈಗಾಗಲೇ ಒತ್ತುವರಿಯಾಗಿದ್ದು ಅದನ್ನು ತೆರವು ಗೊಳಿಸಲು ಸಾರ್ವಜನಿಕರಿಂದ ಒತ್ತಾಯಗಳು ಕೇಳಿ ಬಂದಿದೆ.

ಈ ಬಗ್ಗೆ ಕುಂಟೆ ಜಾಗ ಒತ್ತುವರಿ ತೆರವು ಗೊಳಿಸಲು ಕರವೇ ಕನ್ನಡಿಗರ ಬಣ ಹೋರಾಟ ನಡೆಸಿದೆ. ಇದೆಲ್ಲದರ ಮದ್ಯೆ ಸೋಮೇಶ್ವರ ಕುಂಟೆ ಜಾಗದಲ್ಲಿ ಸ್ಕೂಟರ್ ಶೋ ರೂಮ್ ಒಂದರ ತಾತ್ಕಾಲಿಕ ವಾಣಿಜ್ಯ ಮಳಿಗೆ ಪ್ರಾರಂಭ ಗೊಂಡಿದೆ. ಇದನ್ನು ಖಂಡಿಸಿ ಕರವೇ ಕನ್ನಡಿಗರ ಬಣ ಚಂದ್ರಶೇಖರ್ ನೇತೃತ್ವದಲ್ಲಿ ಸಂಬಂಧ ಪಟ್ಟ ಅಧಿಕಾರಿಗಳ ಗಮನಕ್ಕೆ ತಂದು ತಾತ್ಕಾಲಿಕ ವಾಣಿಜ್ಯ ಮಳಿಗೆ ತೆರವು ಗೊಳಿಸಲು ಯಶಸ್ವಿಯಾಗಿದೆ.

ಈ ಬಗ್ಗೆ ಕರವೇ ಕನ್ನಡಿಗರ ಬಣದ ಸಂಸ್ಥಾಪಕ ಅಧ್ಯಕ್ಷ ಚಂದ್ರಶೇಖರ್ ಮಾಧ್ಯಮಗಳೊಂದಿಗೆ ಮಾತನಾಡಿ ಸರ್ಕಾರಿ ಕುಂಟೆಗಳು, ಗೋಮಾಳ ಜಾಗಗಳು ಸೇರಿದಂತೆ ಸರ್ಕಾರಿ ಜಾಗಗಳಲ್ಲಿ ಇತ್ತೀಚೆಗೆ ಅನಧಿಕೃತವಾಗಿ ತಾತ್ಕಾಲಿಕ ವಾಣಿಜ್ಯ ಮಳಿಗೆಗಳು ತಲೆ ಎತ್ತುತ್ತಿವೆ. ಸರ್ಕಾರಿ ಜಾಗಗಳಲ್ಲಿ ವಾಣಿಜ್ಯ ವ್ಯಾಪಾರಕ್ಕೆ ಯಾರು ಅನುಮತಿ ಕೊಡುತ್ತಿದ್ದಾರೆ ಎಂಬುದೇ ಯಕ್ಷ ಪ್ರಶ್ನೆಯಾಗಿದೆ.

ತಾಲೂಕು ಆಡಳಿತ, ನಗರಸಭೆ ಆಡಳಿತಾಧಿಕಾರಿಗಳ ಗಮನಕ್ಕೆ ಬಾರದೆ ಇವೆಲ್ಲ ನಡೆಯುತ್ತಿರುವುದು ತಾಲೂಕು ಆಡಳಿತ ಅಧಿಕಾರಿಗಳ ಜಾಣ ಕುರುಡು ತನಕ್ಕೆ ಸಾಕ್ಷಿಯಾಗಿದೆ. ಅಧಿಕಾರಿಗಳ ಕಣ್ಣೆದುರೇ ಇದ್ದರೂ ಸಹಾ ಸಾರ್ವಜನಿಕರು ಅಥವಾ ಸಂಘಟನೆಗಳು ದೂರು ಕೊಟ್ಟು ಒತ್ತಾಯ ಮಾಡಿದಾಗ ಮಾತ್ರ ಅದರ ಬಗ್ಗೆ ಗಮನ ಹಾರೈಸುತ್ತಾರೆ ಎಂಬುದು ಬೇಸರದ ಸಂಗತಿ. ಎಲ್ಲವನ್ನು ಸಾರ್ವಜನಿಕರೇ ಮಾಡುವಂತಿದ್ದರೆ ಆಡಳಿತಗಳು ಯಾಕೆ ಅಧಿಕಾರಿಗಳು ಯಾಕೆ ಎಂದು ಚಂದ್ರಶೇಖರ್ ಆಕ್ರೋಶ ವ್ಯಕ್ತಪಡಿಸಿದ್ದಾರೆ.

# ಕೋಳೂರು ಗ್ರಾಮದಲ್ಲಿ ಖೇತ್ ಬಚಾವೋ ಅಭಿಯಾನ



ದೊಡ್ಡಬಳ್ಳಾಪುರ

ಕಂಟನಕುಂಟೆ ಗ್ರಾಮಪಂಚಾಯಿತಿ ವ್ಯಾಪ್ತಿಯ ಕೋಳೂರು ಗ್ರಾಮದಲ್ಲಿ ಕೃಷಿ ಇಲಾಖೆಯ ವತಿಯಿಂದ ಕೇಂದ್ರ ಪುರಸ್ಕೃತ ಆತ್ಮಯೋಜನೆಯಡಿ ಖೇತ್ ಬಚಾವೋ ಅಭಿಯಾನದ ಅಂಗವಾಗಿ ಸಮತೋಲನ ರಸಗೊಬ್ಬರಗಳ ಬಳಕೆ ಕುರಿತು ಅರಿವು ಮೂಡಿಸುವ ಕಾರ್ಯಕ್ರಮ ಆಯೋಜನೆ ಮಾಡಲಾಗಿತ್ತು.

ಕೃಷಿ ವಿಜ್ಞಾನ ಕೇಂದ್ರದ ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿದ್ದ ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿ ಡಾ.ಬಾಲಾಜಿ ಮಾತನಾಡಿ, ಕೃಷಿ ಕ್ಷೇತ್ರದಲ್ಲಿ ಹೆಚ್ಚುತ್ತಿರುವ ಉತ್ಪಾದನಾ ವೆಚ್ಚ, ಮಣ್ಣಿನ ಫಲವತ್ತತೆ ಕುಸಿತ ಹಾಗೂ ಪರಿಸರದ ಮೇಲೆ ಉಂಟಾಗುತ್ತಿರುವ ದುಷ್ಪರಿಣಾಮಗಳನ್ನು ತಡೆಗಟ್ಟಲು ವೈಜ್ಞಾನಿಕ ಮತ್ತು ಸುಸ್ಥಿರ ಕೃಷಿ ಪದ್ಧತಿಗಳನ್ನು ಅಳವಡಿಸಿಕೊಂಡು ಭವಿಷ್ಯದ ಪೀಳಿಗೆಯ ಅಗತ್ಯತೆಗಳಿಗೆ ಧಕ್ಕೆಯಾಗದಂತೆ, ಲಭ್ಯವಿರುವ ನೈಸರ್ಗಿಕ ಸಂಪನ್ಮೂಲಗಳನ್ನು ಸಂರಕ್ಷಿಸಿ, ಮಣ್ಣಿನ ಫಲವತ್ತತೆಯನ್ನು ಹೆಚ್ಚಿಸಿ, ಪರಿಸರಕ್ಕೆ ಹಾನಿಯಾಗದಂತೆ ದೀರ್ಘಕಾಲೀನ ಕೃಷಿ ಉತ್ಪಾದನೆಯನ್ನು ಮಾಡುವುದು. ರಾಸಾಯನಿಕ ಗೊಬ್ಬರಗಳ ಹೆಚ್ಚಿನ ಅವಲಂಬನೆ ತಪ್ಪಿಸಿ, ಮಣ್ಣಿನ ಆರೋಗ್ಯಕ್ಕೆ ಪೂರಕವಾಗಿ ರಸಗೊಬ್ಬರಗಳನ್ನು ಬಳಸಬೇಕು ಎಂದು ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಹಾಡೋನಹಳ್ಳಿ, ಆತ್ಮ ಯೋಜನೆಯ ತಾಂತ್ರಿಕ ವ್ಯವಸ್ಥಾಪಕರಾದ ಅರ್ಚನಾ, ಬಸವರಾಜು, ಗ್ರಾಮದ ರೈತ ಮುಖಂಡರು ಹಾಜರಿದ್ದರು.

# ಬಾಕಿ ಬಿಲ್ ಪಾವತಿಸದಿದ್ದರೆ ವಿದ್ಯುತ್ ಸಂಪರ್ಕ ಕಡಿತ ಎಚ್ಚರಿಕೆ

ಮಾಲೂರು

ಬಾಕಿ ವಿದ್ಯುತ್ ಬಿಲ್ ವಸೂಲಾತಿ ವಿಶೇಷ ಅಭಿಯಾನವನ್ನು ಬೆಸ್ಕಾಂ ಮಾಲೂರು ಉಪ ವಿಭಾಗದಿಂದ ಹಮ್ಮಿಕೊಳ್ಳಲಾಗಿದ್ದು, ಬೆಸ್ಕಾಂ ನಿಯಮಾನುಸಾರ ವಿದ್ಯುತ್ ಸಂಪರ್ಕ ಕಡಿತ ಸೇರಿದಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುವುದು ಎಲ್ಲಾ ವಿದ್ಯುತ್ ಗ್ರಾಹಕರು ಬಾಕಿ ಇರುವ ವಿದ್ಯುತ್ ಬಿಲ್ ಮೊತ್ತಗಳನ್ನು ಪಾವತಿಸುವಂತೆ ಎಇಇ ಅನ್ಸರ್ ಬಾಷ ತಿಳಿಸಿದ್ದಾರೆ.

ನಗರ ಬೆಸ್ಕಾಂ ಇಲಾಖೆಯ ಅವರ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ ವಿದ್ಯುತ್ ಬಿಲ್ ಬಾಕಿ ಹೊಂದಿರುವ ಗ್ರಾಹಕರು ತಮ್ಮ ಬಾಕಿ ಮೊತ್ತವನ್ನು ತಕ್ಷಣವೇ ಪಾವತಿಸುವಂತೆ ವಿನಂತಿಸಲಾಗುತ್ತಿದೆ. ಬಾಕಿ ಮೊತ್ತ ಪಾವತಿಸದಿದ್ದಲ್ಲಿ ಬೆಸ್ಕಾಂ ನಿಯಮಾನುಸಾರ ವಿದ್ಯುತ್ ಸಂಪರ್ಕ ಕಡಿತ ಸೇರಿದಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುವುದು. ಗ್ರಾಹಕರು ತಮ್ಮ ಸಮೀಪದ ಬೆಸ್ಕಾಂ ಕಚೇರಿಗೆ ಭೇಟಿ ನೀಡಿ ಅಥವಾ ಆನ್‌ಲೈನ್ ಮೂಲಕ ಬಾಕಿ ಮೊತ್ತವನ್ನು ಪಾವತಿಸಬಹುದು, ಬೆಸ್ಕಾಂನ ಆದಾಯ ಸಂಗ್ರಹಣಾ ಅಭಿಯಾನಕ್ಕೆ ಎಲ್ಲಾ ಗ್ರಾಹಕರು ಸಹಕರಿಸಿ, ವಿದ್ಯುತ್ ಬಿಲ್‌ಗಳನ್ನು ಸಕಾಲದಲ್ಲಿ ಪಾವತಿಸುವಂತೆ ಕೋರಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಂಬಂಧಿಸಿದ ಬೆಸ್ಕಾಂ ವಿಭಾಗ ಕಚೇರಿಯನ್ನು ಸಂಪರ್ಕಿಸಬಹುದು. ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ (ವಿದ್ಯುತ್) ಬೆಸ್ಕಾಂ ಕಚೇರಿಯ ನಗದು ಕೌಂಟರ್ ಅಥವಾ ಆನ್‌ಲೈನ್ ಮೂಲಕ ವಿದ್ಯುತ್ ಬಿಲ್‌ಗಳನ್ನು ಸಕಾಲದಲ್ಲಿ ಪಾವತಿಸಿ- ಉತ್ತಮ ವಿದ್ಯುತ್ ಸೇವೆ ನೀಡಲು ಬೆಸ್ಕಾಂಗೆ ಸಹಕರಿಸುವಂತೆ ಕೋರಿದ್ದಾರೆ.

# ಮೋದಿ 12 ವರ್ಷದ ಆಡಳಿತ: ಸಂಭ್ರಮದ ವಿಶೇಷ ಪೂಜೆ

ಶಿಡ್ಲಘಟ್ಟ

ಭಾರತದಲ್ಲಿರುವ ಕೆಲ ಮುಸ್ಲಿಂರಿಗೆ ಪಾಕಿಸ್ತಾನದ ಬಗ್ಗೆ ಅಂಥ ಪ್ರೇಮವಿದೆ ಅಂತಹವರು ಭಾರತವನ್ನು ಬಿಟ್ಟು ತೊಲಗಿ ಪಾಕಿಸ್ತಾನಕ್ಕೆ ಹೋಗಿ ನೆಲೆಸಿ ಇಲ್ಲಿದ್ದ ಮೇಲೆ ಎಲ್ಲರೂ ವಿಕಸಿತ ಭಾರತಕ್ಕಾಗಿ ಕೈ ಜೋಡಿಸಬೇಕು ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಸೀಕಲ್ ರಾಮಚಂದ್ರಗೌಡ ತಿಳಿಸಿದರು.

ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಪ್ರಧಾನ ಮಂತ್ರಿಯಾಗಿ ಯಶಸ್ವಿ 12 ವರ್ಷ ಪೂರೈಸಿ ಮುಂದುವರೆದಿರುವ ಅಂಗವಾಗಿ ನಗರದ ಕೋಟೆ ಶ್ರೀರಾಮ ದೇವಾಲಯದಲ್ಲಿ ವಿಶೇಷ ಪೂಜೆ, ಸ್ವಚ್ಛತಾ ಕಾರ್ಯ, ಸಸಿ ನೆಟ್ಟು ಅವರು ಮಾತನಾಡಿದರು.

ಎಲ್ಲಾ ಹಿಂದೂ, ಮುಸ್ಲಿಂ, ಕ್ರಿಶ್ಚಿಯನ್ ಎಲ್ಲರೂ ಒಂದೆ ಆದರೆ ಕೆಲವರು ಭಾರತದಲ್ಲಿ ನೆಲೆಸಿ ಇಲ್ಲಿನ ನೀರು ಕುಡಿದು ಗಾಳಿ ಸೇವಿಸಿ ಅನ್ನ, ತಿಂದ ಮೇಲೆ ಭಾರತಕ್ಕೆ ತಲೆ ಬಾಗಬೇಕು. ಭಾರತವನ್ನು ಪ್ರೀತಿಸಬೇಕು. ಭಾರತದ ಕಾನೂನನ್ನು ಗೌರವಿಸಬೇಕು ಎಂದು ಹೇಳಿದರು.

ಕೆಲವರಿಗೆ ಪಾಕಿಸ್ತಾನದ ಮೇಲೆ ಎಲ್ಲಿಲ್ಲದ ಮಮಕಾರ, ಪ್ರೀತ, ಅಂಥ ಪ್ರೇಮ ಇರುತ್ತದೆ ಅಂತಹವರು ಭಾರತ ಬಿಟ್ಟು ಪಾಕಿಸ್ತಾನಕ್ಕೆ ಹೋಗಿ ಅಲ್ಲೇ ನೆಲೆಸಲಿ ನಮ್ಮದೇನು




ಅಭ್ಯಂತರ ಇಲ್ಲ ಎಂದರು.

ಮುಂದಿನ ದಿನಗಳಲ್ಲಿ ನಮ್ಮ ಬಿಜೆಪಿ ಸರಕಾರ ಅಧಿಕಾರಕ್ಕೆ ಬರುವುದು ಖಚಿತ ಎಲ್ಲ ನಾಯಕರು ಒಗ್ಗೂಡಿ ಕೃಷ್ಣಾ ನದಿ ನೀರನ್ನು ಈ ಭಾಗಕ್ಕೆ ಹರಿಸಿ ಕೃಷಿಕರಿಗೆ ಅನುಕೂಲ ಮಾಡಿಕೊಡುವುದು ಶತಸಿದ್ದ ಎಂದರು. ನಮ್ಮ ನೆರೆಯ ಆಂಧ್ರದ ಗಡಿಯಲ್ಲಿ ಕೃಷ್ಣಾ ನದಿ ನೀರು ಹರಿಯುತ್ತಿದ್ದು ಕೃಷ್ಣಾ ನದಿ ನೀರನ್ನು ಕೋಲಾರ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಯ ಕೃಷಿಗೆ ಹರಿಸಬೇಕಿದೆ ಆದರೆ ರಾಜ್ಯ ಸರ್ಕಾರಕ್ಕೆ ಈ ಬಗ್ಗೆ ಹಿತಾಸಕ್ತಿಯೆ ಇಲ್ಲವಾಗಿದೆ ಎಂದು

ಈ ಸಂದರ್ಭದಲ್ಲಿ ಮಾಜಿ ಶಾಸಕ ಎಂ.ರಾಜಣ್ಣ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮುರಳೀಧರ್, ಕೆ.ಬಿ.ಮುರಳಿ ಗ್ರಾಮಾಂತರ ಮಂಡಲ ಅಧ್ಯಕ್ಷ ಸೀಕಲ್ ಅನಂದಗೌಡ ಮಧು, ಕಂಬದಹಳ್ಳಿ ಸುರೇಂದ್ರಗೌಡ, ಬಿ.ಸಿ.ನಂದೀಶ್ ರಮೇಶ್ ಬಾಯರಿ, ವಿ.ಶ್ರೀನಿವಾಸ್, ಅಂಜನೇಯ. ರವಿಚಂದ್ರಕೆ. ಜಗದೀಶ್ ರೆಡ್ಡಿ ಪ್ರಕಾಶ್, ಮತ್ತಿತರರು ಹಾಜರಿದ್ದರು.

# ಮೋದಿ ಆಡಳಿತದ ಸಾಧನೆಗಳನ್ನು ಶ್ಲಾಘಿಸಿದ ರತ್ನಯ್ಯ ಶೆಟ್ಟಿ



ವೈ.ಎನ್.ಹೊಸಕೋಟೆ

ಪ್ರಧಾನ ಮಂತ್ರಿಯಾಗಿ ಅತಿ ಹೆಚ್ಚು ಅವಧಿಗೆ ಆಡಳಿತ ನಡೆಸಿ ದಾಖಲೆ ಬರೆದಿರುವ ನರೇಂದ್ರ ಮೋದಿಯವರನ್ನು ಅಭಿನಂದಿಸಿ, ಬಿಜೆಪಿ ಕಾರ್ಯಕರ್ತರು ವಿಶೇಷ ಪೂಜೆ ಹಮ್ಮಿಕೊಂಡಿದ್ದರು.

ಗ್ರಾಮದ ಬೆಸ್ತರಹಳ್ಳಿ ರಸ್ತೆಯಲ್ಲಿರುವ ಶ್ರೀರಾಮ ದೇವಾಲಯದಲ್ಲಿ ನರೇಂದ್ರ ಮೋದಿಯವರ ಹೆಸರಿನಲ್ಲಿ ವಿಶೇಷ ಅರ್ಚನೆ ಮತ್ತು ಪೂಜೆಗಳನ್ನು ನೆರವೇರಿಸಲಾಯಿತು.

ಪ್ರಧಾನಿಯವರಿಗೆ ಉತ್ತಮ ಆಯುಷ್ಯ, ಆರೋಗ್ಯ ದೊರೆಯಲಿ ಮತ್ತು ದೇಶವನ್ನು ಮತ್ತಷ್ಟು ಪ್ರಗತಿಯತ್ತ ಕೊಂಡೊಯ್ಯಲು ಅಗತ್ಯವಾದ ಶಕ್ತಿ ಸಿಗಲಿ ಎಂದು ದೇವರಲ್ಲಿ ಪ್ರಾರ್ಥಿಸಲಾಯಿತು.

ಮುಖಂಡರಾದ ರತ್ನಯ್ಯ ಶೆಟ್ಟಿ ಅವರು ಮಾತನಾಡಿದ ನರೇಂದ್ರ ಮೋದಿಯವರು ಪ್ರಧಾನಿಯಾಗಿ 4,399 ದಿನಗಳ ಸುದೀರ್ಘ ಕಾಲ ದೇಶವನ್ನು ಮುನ್ನಡೆಸಿ ಐತಿಹಾಸಿಕ ದಾಖಲೆ ನಿರ್ಮಿಸಿದ್ದಾರೆ. ಅವರ ಆಡಳಿತಾವಧಿಯಲ್ಲಿ ಬಡವರು, ದೀನದಲಿತರು, ಮಹಿಳೆಯರು ಹಾಗೂ ರೈತರ ಕಲ್ಯಾಣಕ್ಕಾಗಿ ಜಾರಿಗೆ ತಂದಿರುವ ಹತ್ತು-ಹಲವು ಯೋಜನೆಗಳು ಭಾರತವನ್ನು ಜಾಗತಿಕ ಮಟ್ಟದಲ್ಲಿ ಬಲಿಷ್ಠವಾಗಿ ಬೆಳೆಸುತ್ತಿವೆ ಎಂದು ಶ್ಲಾಘಿಸಿದರು.

ಕಾರ್ಯಕ್ರಮದಲ್ಲಿ ಕಾರ್ಯಕರ್ತರಾದ ಹರೀಶ್ ನಾಯ್ಕ, ಅಭಿಷೇಕ್, ಸಾಯಿ ತೇಜಸ್, ಶಭರೀಶ್, ಸಾಯಿ, ಬಾಲರಾಜು, ಪ್ರಸಾದ್, ಮನೋಜ್ ಕುಮಾರ್, ಉದಯ್ ಕುಮಾರ್, ಉಪಸ್ಥಿತರಿದ್ದರು.

# ವಿದ್ಯುತ್ ಖಾಸಗೀಕರಣ ವಿರೋಧಿಸಿ ಬೆಸ್ಕಾಂ ನೌಕರರ ಪ್ರತಿಭಟನೆ

ಕೊರಟಗೆರೆ

ರಾಜ್ಯದಲ್ಲಿ ವಿದ್ಯುತ್ ವಿತರಣಾ ಚಟುವಟಿಕೆಗಳನ್ನು ನಡೆಸಲು ಟಾಟಾ ಪವರ್ ಕಂಪನಿಗಳಿಗೆ ಅನುಮತಿ ನೀಡಬಾರದೆಂದು ಆಗ್ರಹಿಸಿ ಕೊರಟಗೆರೆ ಬೆಸ್ಕಾಂ ಉಪವಿಭಾಗದ ಕಛೇರಿ ಮುಂದೆ ಬೆಸ್ಕಾಂ ನೌಕರರು ಕೇಂದ್ರ ಸರ್ಕಾರದ ವಿರುದ್ದ ಸಾಕೇತಿಕವಾಗಿ ಪ್ರತಿಭಟನೆ ನಡೆಸಿದರು.

ಪ್ರತಿಭಟನೆಯಲ್ಲಿ ಮಾತನಾಡಿದ ಕೊರಟಗೆರೆ ಉಪವಿಭಾಗದ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ವಿ.ಪ್ರಸನ್ನ ಕುಮಾರ್ ಕೇಂದ್ರ ಸರ್ಕಾರವು ವಿದ್ಯುತ್ ಪ್ರಸರಣ ಹಾಗೂ ಸರಬರಾಜು ನಿಗಮಗಳನ್ನು ಖಾಸಗೀಕರಣ ಗೊಳಿಸುವ ಉದ್ದೇಶದಿಂದ ಜಾರಿ ಮಾಡಲು ಹೊರಟಿರುವ ವಿದ್ಯುತ್ ತಿದ್ದುಪಡಿ ಕಾಯ್ದೆ-2026 ಅನ್ನು ವಾಪಸ್ ಪಡೆಯಬೇಕು ಬೆಸ್ಕಾಂ ಸೇರಿದಂತೆ ಇನ್ನಿತರ ವಿದ್ಯುತ್ ಪ್ರಸರಣಾ ಕೇಂದ್ರಗಳು ಸಾವಿರಾರು ಕೋಟಿ ಮೌಲ್ಯದ ವಿತರಣಾ ಕಂಪನಿಗಳು,



ಉಪಕೇಂದ್ರಗಳು, ಯಂತ್ರೋಪಕರಣ ಬೃಹತ್ ಸೌಕರ್ಯ ಹೊಂದಿರುವ ಸಾರ್ವಜನಿಕ ಅಸ್ತಿ ಅಗಿದ್ದು ನೌಕರರು ಸಮರ್ಪಕವಾಗಿ ವಿದ್ಯುತ್ ಸರಬರಾಜು ಮಾಡುತ್ತಿದ್ದಾರೆ, ಅದರೂ ಖಾಸಗಿ ಕಂಪನಿಯವರಿಗೆ ವಹಿಸುವುದನ್ನು ಖಂಡನೀಯ ಎಂದ ಅವರು ಖಾಸಗಿ ಕಂಪನಿಗಳಿಗೆ ನೀಡಿದರೆ ಖಾಸಗಿ ಕಂಪನಿಗಳು ಸ್ಮಾರ್ಟ್ ಮೀಟರ್‌ಗಳನ್ನು ಹಾಕಿ ಮೊಬೈಲ್ ಕಂಪನಿಗಳ ರೀತಿ ಪೋಸ್ಟ್ ಪೇಯ್ಡ್ ತರಹ ವ್ಯವಸ್ಥೆಗಳನ್ನು ಮಾಡುತ್ತಾರೆ, ರೈತರು ಬಡವರಿಗೆ ಕೂಲಿ ಕಾರ್ಮಿಕರಿಗೆ, ವೃದ್ದರಿಗೆ, ರೈತರ ಪಂಪ್ ಸೇಟ್‌ಗಳಿಗೆ ಭಾಗ್ಯಜ್ಯೋತಿ, ಕುಟೀರ ಜ್ಯೋತಿ ಸೇರಿದೆಂತೆ ಇನ್ನಿತರ ಯೋಜೆನೆಗಳು ಮುಂದಿನ ದಿನಗಳಲ್ಲಿ ರದ್ದಾಗಲಿದ್ದು ಯವುದೇ ಕಾರಣಕ್ಕೂ ಕಾರ್ನಾಟಕ ಸರ್ಕಾರ ವಿದ್ಯುತ್ ವಿತರಣೆ ಕಂಪನಿಗಳನ್ನು ಖಾಸಗಿ ಯವರಿಗೆ ವಿಹಿಸಬಾರದು ಎಂದು ತಿಳಿಸಿದರು.

ಕೊರಟಗೆರೆ ಉಪವಿಭಾಗದ ನೌಕರರ ಸಂಘದ ಕಾರ್ಯದರ್ಶಿ ಕೆ.ವಿ.ನಟರಾಜು ಮಾತನಾಡಿ ವಿದ್ಯುತ್ ಚಟುವಟಿಕೆ ಖಾಸಗೀಕರಣ ಮಾಡಿದರೆ ಮೊಬೈಲ್ ಸೇವಾ ಕಂಪನಿಗಳ ರೀತಿ ಕರನ್ಸಿಹಾಕಿಸಿ ವಿದ್ಯುತ್ ಬಲಸುವ ಪರಿಸ್ಥಿತಿ ಬರುತ್ತದೆ ರೈತರ ಕೊಳವೆಬಾವಿಗೂ ವಿದ್ಯುತ್ ಸಿಗದ ಪರಿಸ್ಥಿತಿ ನಿರ್ಮಾನವಾಗಲಿದ್ದು ಖಾಸಗೀಕರಣ ಕೈಬಿಡಬೇಕುಜ ಎಂದು ಒತ್ತಾಯಿಸಿದರು.

ಪ್ರತಿಟನೆಯಲ್ಲಿ ಕೆಪಿಟಿಸಿಎಲ್ 659 ನೌಕರರ ಸಂಘದ ಆಧಿಕ ಕಾರ್ಯದರ್ಶಿ ಹೆಚ್. ತಿಮ್ಮಪ್ಪ, ಉಪಾಧ್ಯಕ್ಷರಾದ ಲಕ್ಷ್ಮಿಕಾಂತ್ ಹೆಚ್.ಕೃಷ್ಣಮೂರ್ತಿ, ಕಾರ್ಯದರ್ಶಿ ಕೆ.ವಿ.ನಟರಾಜು, ಸುನಿಲ್‌ಕುಮಾರ್, ಸಹಾಯಕ ಇಂಜಿನಿಯರ್ ಯೋಗೀಶ್, ಕಿರಿಯ ಇಂಜಿನಿಯರ್ ಮಲ್ಲಯ್ಯ, ಕಂದಾಯ ಶಾಖೆಯ ಜೆ.ಡಿ.ರಾಘವೇಂದ್ರ, ಕೆ.ವಿ.ಮಂಜುಳಾವಾಣಿ, ಪಾತೀಮ, ಗುತ್ತಿಗೆದಾರರ ಸಂಘದ ಕಾರ್ಯದರ್ಶಿ ಲಕ್ಷ್ಮಿಕಾಂತಬಾಬು, ಮೂಡ್ಲಗಿರಿಯಪ್ಪ, ಗೋವಿಂದರಾಜು, ವೆಂಕಟೇಶ್, ಹೊಸಕೋಟೆ ಮುತ್ತುರಾಜ್ ಸೇರಿದಂತೆ ನೌಕರರು, ಎಲ್ಲಾ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಮತ್ತು ವಿದ್ಯುತ್ ಗುತ್ತಿಗೆದಾರರ ಸಂಘದ ಪದಾಧಿಕಾರಿಗಳು, ರೈತ ಸಂಘದ ಪದಾಧಿಕಾರಿಗಳು, ಮುಖಂಡರುಗಳು ಭಾಗವಹಿಸಿ ಖಾಸಗಿಕರಣ ವಿರೋಧಕ್ಕೆ ಬೆಂಬಲ ವ್ಯಕ್ತಪಡಿಸಿದರು.

# ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ

ರಾಮನಗರ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ (ರಿ), ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಶಾಲಾ ಶಿಕ್ಷಣ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಹಯೋಗದೊಂದಿಗೆ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ–2026 ಕಾರ್ಯಕ್ರಮವನ್ನು ಇದೇ ಜೂ. 12ರ ಶುಕ್ರವಾರ ಬೆಳಿಗ್ಗೆ 10 ಗಂಟೆಗೆ ನಗರದ ಜಿಲ್ಲಾ ಕ್ರೀಡಾಂಗಣದಿಂದ ಜಿಲ್ಲಾ ಪಂಚಾಯತ್ ಭವನದ ವರೆಗೆ ಜಾಗೃತಿ ಜಾಥಾ ಮತ್ತು ಅರಿವು ಕಾರ್ಯಕ್ರಮ ಆಯೋಜಿಸಲಾಗಿದೆ. ನಂತರ ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾ ಪಂಚಾಯತ್ ಭವನದಲ್ಲಿ ವೇದಿಕೆ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ನ್ಯಾ. ಎಂ.ಎಚ್. ಅಣ್ಣಯ್ಯನವರ ಅವರು ಜಾಥಾ ಕಾರ್ಯಕ್ರಮವನ್ನು ಉದ್ಘಾಟಿಸುವರು.

ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸೊಸೈಟಿಯ ಅಧ್ಯಕ್ಷರಾದ ಯಶವಂತ್ ವಿ. ಗುರುಕರ್ ಅವರು ವೇದಿಕೆ ಕಾರ್ಯಕ್ರಮವನ್ನು ಉದ್ಘಾಟಿಸುವರು. ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸವಿತ ಪಿ.ಆರ್ ಅವರು ಅಧ್ಯಕ್ಷತೆ ವಹಿಸುವರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅನ್ಮೋಲ್ ಜೈನ್ ಅವರು ಪ್ರತಿಜ್ಞಾ ವಿಧಿ ಬೋಧಿಸುವರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಆರ್. ಶ್ರೀನಿವಾಸ್‌ಗೌಡ, ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ, ಉಪ ವಿಭಾಗಾಧಿಕಾರಿ ಬಿನೋಯ್, ರಾಮನಗರ ತಾಲ್ಲೂಕು ತಹಶೀಲ್ದಾರರಾದ ತೇಜಸ್ವಿನಿ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಕೆ. ಕೆಂಪಯ್ಯ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪ ನಿರ್ದೇಶಕರಾದ ಸ್ವಾಮಿ ಎಂ., ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ದಿನೇಶ್ ಜೆ.ಆರ್., ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷರಾದ ನಾಗರತ್ನ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ರಜಿನಿ, ಕಾರ್ಮಿಕ ನಿರೀಕ್ಷಕರಾದ ಪ್ರದೀಪ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

# ಅರ್ಜಿ ಆಹ್ವಾನ

ರಾಮನಗರ

ಮೈಸೂರು ವಿಶ್ವವಿದ್ಯಾನಿಲಯದ ಪ್ರವೇಶಾತಿ ಅಧಿಸೂಚನೆಯನ್ವಯ ಬ್ಯಾಚುಲರ್ ಆಫ್ ವಿಜುಯಲ್ ಆರ್ಟ್ಸ್ (ಬಿ.ವಿ.ಎ.) ನಾಲ್ಕು ವರ್ಷದ ಎಂಟು ಸೆಮಿಸ್ಟರ್‌ಗಳ ರಾಜ್ಯ ಶಿಕ್ಷಣ ಪದ್ಧತಿ (ಸ್ಟೇಟ್ ಎಜುಕೇಶನ್ ಪಾಲಿಸಿ) ಯಂತೆ 2026–27 ನೇ ಶೈಕ್ಷಣಿಕ ಸಾಲಿಗೆ ಪ್ರಥಮ ವರ್ಷದ ಬಿ.ವಿ.ಎ. ದೃಶ್ಯ ಕಲೆಯಲ್ಲಿ ಸ್ನಾತಕ ಪದವಿ ಪ್ರವೇಶಾತಿಗಾಗಿ ದ್ವಿತೀಯ ಪಿ.ಯು.ಸಿ./ಸಮಾನಾಂತರ ಕೋರ್ಸುಗಳಲ್ಲಿ ಉತ್ತೀರ್ಣರಾಗಿರುವ ಅಭ್ಯರ್ಥಿಗಳಿಂದ (ಯುಯುಸಿಎಂಎಸ್) ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಆನ್‌ಲೈನ್ https://uucms.karnataka.gov.in ಮೂಲಕ ಜೂ.12ರೊಳಗೆ ಅರ್ಜಿ ಸಲ್ಲಿಸಬೇಕು. ಈ ಪದವಿಯಲ್ಲಿ ಚಿತ್ರಕಲೆ (painting), ಶಿಲ್ಪಕಲೆ (Sculpture), ಗ್ರಾಫಿಕ್ಸ್ (ಅಚ್ಚುಕಲೆ) (Graphic), ಅನ್ವಯಕಲೆ (Applied Art), ಕಲಾ ಇತಿಹಾಸ (Art History)ಹಾಗೂ ಛಾಯಾಚಿತ್ರ ಮತ್ತು ಛಾಯಾಚಿತ್ರ ಪತ್ರಿಕೋಧ್ಯಮ (Photography & Photojournalism)ವಿಭಾಗಗಳಲ್ಲಿ ವಿಶೇಷ ಅಧ್ಯಯನದ ಸ್ನಾತಕ ಪದವಿಯಾಗಿರುತ್ತದೆ. ಪ್ರವೇಶಾತಿ ಕೋರಿ ಅರ್ಜಿಸಲ್ಲಿಸಿದ ಅಭ್ಯರ್ಥಿಗಳನ್ನು ಆಯ್ಕೆಮಾಡಲು ಅರ್ಹತಾ ಪರೀಕ್ಷೆ ಮತ್ತು ವೈಯಕ್ತಿಕ ಸಂದರ್ಶನವನ್ನು ಜೂ. 15ರಂದು ನಡೆಸಲಾಗುವುದು.

ಹೆಚ್ಚಿನ ಮಾಹಿತಿಗೆ ಮೈಸೂರಿನ ಸಿದ್ದಾರ್ಥನಗರದ ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜಿನ್ನು ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದು ಅಥವಾ ದೂ. ಸಂಖ್ಯೆ 0821–2438931 ಅನ್ನು ಸಂಪರ್ಕಿಸುವಂತೆ ಮೈಸೂರಿನ ಚಾಮರಾಜೇಂದ್ರ ಸರ್ಕಾರಿ ದೃಶ್ಯ ಕಲಾ ಕಾಲೇಜಿನ ಡೀನ್ ಅವರು ತಿಳಿಸಿದ್ದಾರೆ.

# ಪ್ರವೇಶಾತಿಗಾಗಿ ಆಹ್ವಾನ

ಕೋಲಾರ

ಮುಳಬಾಗಿಲು ಕಾಂತರಾಜ ಸರ್ಕಲ್ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಯಲ್ಲಿ 2ವರ್ಷಗಳ 3ನೇ ಸೆಮಿಸ್ಟರ್ ಐ.ಟಿ.ಐ/ಪಿ.ಯು.ಸಿ ಸೈನ್ಸ್‌ನಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳಿಂದ ಲ್ಯಾಟರಲ್ ಎಂಟ್ರಿ ಮುಖಾಂತರ 2ವರ್ಷ/3ನೇ ಸೆಮಿಸ್ಟರ್ ಡಿಪ್ಲೋಮಾ ಕೋರ್ಸುಗಳಿಗೆ ಆಫ್‌ಲೈನ್ ಮೂಲಕ ಅರ್ಜಿಗಳನ್ನು ಜೂನ್ 20 ರೊಳಗೆ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ವಿದ್ಯುತ್ ವಿಭಾಗದ ಪ್ರಾಚಾರ್ಯ ಕವಿತ.ಬಿ–9632117987, ಯಾಂತ್ರಿಕ ವಿಭಾಗಾಧಿಕಾರಿ ಎಂ.ಬಸವರಾಜು–9448329578, ರಿಜಿಸ್ಟ್ರಾರ್ ನಾಗವೇಣಿ–7349567820, ಶಿಕ್ಷಕ ಎನ್.ಮುನಿರಾಜು–9113815209, ಪ್ರ. ದ.ಸ ರಾಕೇಶ್–9880665668 ಯನ್ನು ಸಂಪರ್ಕಿಸಬಹುದೆಂದು ಪ್ರಾಂಶುಪಾಲರು ತಿಳಿಸಿದ್ದಾರೆ.

# ಕಾಮಗಾರಿಗಳಿಗೆ ಜಿಐಎಸ್ ಮ್ಯಾಪಿಂಗ್ ಮೂಲಕ ಏಕೀಕರಣಗೊಳಿಸಿ: ಮಹೇಶ್ವರ್ ರಾವ್

ಬೆಂಗಳೂರು

ಜಿಬಿಎ ವ್ಯಾಪ್ತಿಯಲ್ಲಿ ವಿವಿಧ ಇಲಾಖೆಗಳಿಂದ ಕೈಗೆತ್ತಿಕೊಂಡಿರುವ ಕಾಮಗಾರಿಗಳಿಗೆ ಜಿಐಎಸ್ ಮ್ಯಾಪಿಂಗ್ ಮೂಲಕ ಏಕೀಕರಣಗೊಳಿಸುವಂತೆ ಮುಖ್ಯ ಆಯುಕ್ತರಾದ ಮಹೇಶ್ವರ್ ರಾವ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಬಿಎ ವ್ಯಾಪ್ತಿಯಲ್ಲಿ ವಿವಿಧ ಇಲಾಖೆಗಳು ಕೈಗೆತ್ತಿಕೊಂಡಿರುವ ಅಭಿವೃದ್ಧಿ ಕಾಮಗಾರಿಗಳ ಕುರಿತು ನಡೆದ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಜಿಬಿಎ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ನಗರ ಪಾಲಿಕೆಗಳು, ಇಲಾಖೆಗಳು/ಸಂಸ್ಥೆಗಳು ಕೈಗೊಳ್ಳುತ್ತಿರುವ ಮತ್ತು ಕೈಗೊಳ್ಳಲಿರುವ ಯೋಜನೆಗಳನ್ನು ಒಂದೇ ವೇದಿಕೆಗೆ ತರಲು ಜಿಐಎಸ್ ಮ್ಯಾಪ್‌ನಲ್ಲಿ ಅಪ್‌ಲೋಡ್ ಮಾಡುವ ವ್ಯವಸ್ಥೆ ಕಲ್ಪಿಸಬೇಕು. ಇದರಿಂದ ವಿವಿಧ ಇಲಾಖೆಗಳ ನಡುವೆ ಸಮನ್ವಯ ಸಾಧಿಸಿ, ಕಾಮಗಾರಿಗಳನ್ನು ಏಕಕಾಲದಲ್ಲಿ



ಪರಿಣಾಮಕಾರಿಯಾಗಿ ನಿರ್ವಹಿಸಲು ಅನುಕೂಲವಾಗಲಿದೆ.

ಈ ಉದ್ದೇಶಕ್ಕಾಗಿ ಅಗತ್ಯ ವೇದಿಕೆ ಸಿದ್ಧಪಡಿಸುವಂತೆ ಜಿಬಿಎ ಐಟಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಐಎಸ್ ಮ್ಯಾಪಿಂಗ್ ಕಾರ್ಯಕ್ಕಾಗಿ ಎಲ್ಲಾ ನಗರ ಪಾಲಿಕೆಗಳು, ಜಲಮಂಡಳಿ, ಬೆಸ್ಕಾಂ, ಕೆಪಿಟಿಸಿಎಲ್, ಮೆಟ್ರೋ, ಕೆ–ರೈಡ್ ಸೇರಿದಂತೆ ಇತರೆ ಇಲಾಖೆಗಳು ತಮ್ಮ ಕ್ರಿಯಾ ಯೋಜನೆಗಳನ್ನು ಜಿಬಿಎಗೆ ಸಲ್ಲಿಸುವಂತೆ ಸೂಚಿಸಿದರು.

ಜಿಬಿಎ ವ್ಯಾಪ್ತಿಯ ಐದು ನಗರ ಪಾಲಿಕೆಗಳಲ್ಲಿ ಜಿಐಎಸ್ ಮ್ಯಾಪ್‌ನಲ್ಲಿ ಕಾಮಗಾರಿಗಳ ಮಾಹಿತಿಯನ್ನು ಅಪ್‌ಡೇಟ್ ಮಾಡಿದ ನಂತರವೇ ಬಿಲ್ ಪಾವತಿಸುವ ವ್ಯವಸ್ಥೆಯನ್ನು ಜಾರಿಗೆ ತರಲು ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಹೆಬ್ಬಾಳ ಜಂಕ್ಷನ್‌ನಲ್ಲಿ ಪಾದಚಾರಿ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ವಿನ್ಯಾಸ ರೂಪಿಸಲಾಗುತ್ತಿದ್ದು, ಅದನ್ನು ಶೀಘ್ರದಲ್ಲೇ ಅಂತಿಮಗೊಳಿಸಬೇಕು. ಬಳಿಕ ಕಾಮಗಾರಿಯನ್ನು ಆರಂಭಿಸಿ ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಮಳೆಗಾಲದಲ್ಲಿ ರಸ್ತೆಗಳಲ್ಲಿ ನೀರು ನಿಲ್ಲುವುದರಿಂದ ಸಂಚಾರ ದಟ್ಟಣೆ ಉಂಟಾಗುತ್ತದೆ. ಆದ್ದರಿಂದ ಹೆಚ್ಚು ನೀರು ನಿಲ್ಲುವ ಪ್ರದೇಶಗಳನ್ನು ಗುರುತಿಸಿ, ಮಳೆನೀರು ರಸ್ತೆಗಳಲ್ಲಿ ನಿಲ್ಲದಂತೆ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಲಿಫ್ಟ್‌ಗಳ ನಿರ್ವಹಣೆ ಸಮರ್ಪಕವಾಗಿರಲಿ: ಜಿಬಿಎ ವ್ಯಾಪ್ತಿಯ ಐದು ನಗರ ಪಾಲಿಕೆಗಳಲ್ಲಿರುವ ಪಾದಚಾರಿ ಮೇಲ್ಸೇತುವೆಗಳಲ್ಲಿ ಎಷ್ಟು ಲಿಫ್ಟ್‌ಗಳಿವೆ, ಅವುಗಳಲ್ಲಿ ಎಷ್ಟು ಕಾರ್ಯನಿರ್ವಹಿಸುತ್ತಿವೆ ಹಾಗೂ ಎಷ್ಟು ಸ್ಥಗಿತಗೊಂಡಿವೆ ಎಂಬುದರ ಕುರಿತು ಸಮಗ್ರ ಮಾಹಿತಿ ಸಂಗ್ರಹಿಸಬೇಕು. ಸ್ಥಗಿತಗೊಂಡಿರುವ ಲಿಫ್ಟ್ ಗಳನ್ನು ತಕ್ಷಣ ದುರಸ್ತಿಪಡಿಸಿ, ಅವುಗಳ ನಿರ್ವಹಣೆಯನ್ನು ಸಮರ್ಪಕವಾಗಿ ಕೈಗೊಳ್ಳುವಂತೆ ಸೂಚಿಸಿದರು.

ಸಭೆಯಲ್ಲಿ ವಿಶೇಷ ಆಯುಕ್ತರಾದ ಸುಷಮಾ ಗೋಡಬೋಲೆ, ನಗರ ಪಾಲಿಕೆ ಆಯುಕ್ತರಾದ ಪೊಮ್ಮಲ ಸುನೀಲ್ ಕುಮಾರ್, ಜಗದೀಶ್ ಜಿ., ರಮೇಶ್ ಕೆ.ಎನ್., ಡಾ. ರಾಜೇಂದ್ರ ಕೆ.ವಿ., ಅಪರ ಆಯುಕ್ತರು, ಮುಖ್ಯ ಅಭಿಯಂತರರು ಹಾಗೂ ಬಿಡಿಎ, ಪೊಲೀಸ್, ಅಗ್ನಿಶಾಮಕ, ಬೆಸ್ಕಾಂ, ಎನ್‌ಎಚ್‌ಎಐ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಕೆಂಪಾಂಬುಧಿ ಕೆರೆ ಅಭಿವೃದ್ಧಿಗೆ ಡಿಪಿಆರ್ ತಯಾರಿಸಿ: ಡಾ: ರಾಜೇಂದ್ರ

ಬೆಂಗಳೂರು

ಬಸವನಗುಡಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಹಮ್ಮಿಕೊಳ್ಳಲಾಗಿರುವ ವಿವಿಧ ಮೂಲಸೌಕರ್ಯ ಮತ್ತು ನಗರಾಭಿವೃದ್ಧಿ ಕಾಮಗಾರಿಗಳನ್ನು ಬಸವನಗುಡಿ ಕ್ಷೇತ್ರದ ಶಾಸಕರಾದ ರವಿ ಸುಬ್ರಹ್ಮಣ್ಯ ಹಾಗೂ ಬೆಂಗಳೂರು ಪಶ್ಚಿಮ ನಗರ ಪಾಲಿಕೆ ಆಯುಕ್ತರಾದ ಡಾ. ರಾಜೇಂದ್ರ ಕೆ.ವಿ. ಅವರು ಗುರುವಾರ ಜಂಟಿಯಾಗಿ ಪರಿಶೀಲನೆ ನಡೆಸಿದರು.

ವೈಟ್ ಟಾಪಿಂಗ್, ರಸ್ತೆ ಅಭಿವೃದ್ಧಿ, ಉದ್ಯಾನ ಹಾಗೂ ಕೆರೆಗಳ ಪುನಶ್ಚೇತನ ಕಾಮಗಾರಿಗಳನ್ನು ವೀಕ್ಷಿಸಿದ ಅವರು, ಸ್ಥಳದಲ್ಲೇ ಅಧಿಕಾರಿಗಳಿಗೆ ಅಗತ್ಯ ನಿರ್ದೇಶನಗಳನ್ನು ನೀಡಿದರು.

ಐತಿಹಾಸಿಕ ಹಿನ್ನೆಲೆಯುಳ್ಳ ಕೆಂಪಾಂಬುಧಿ ಕೆರೆಯ ಸಮಗ್ರ ಅಭಿವೃದ್ಧಿಗೆ ಸಂಬಂಧಿಸಿದಂತೆ ತುರ್ತಾಗಿ ಕೈಗೊಳ್ಳಬೇಕಾದ ಕಾಮಗಾರಿಗಳ ಕುರಿತು ವಿಶೇಷ ವಿಸ್ತೃತ ಯೋಜನಾ ವರದಿಯನ್ನು ತಕ್ಷಣವೇ ಸಲ್ಲಿಸಿ, ನವೀಕರಣ ಪ್ರಕ್ರಿಯೆಯನ್ನು ಆದಷ್ಟು ಬೇಗ ಆರಂಭಿಸುವಂತೆ ಸಂಬಂಧಪಟ್ಟ ಎಂಜಿನಿಯರ್‌ಗಳಿಗೆ ಸೂಚನೆ ನೀಡಲಾಯಿತು.

ಹನುಮಂತನಗರದ ಪ್ರಮುಖ ರಸ್ತೆಯಾದ 50 ಫೀಟ್ ರೋಡ್‌ನಲ್ಲಿ ಮುಖ್ಯಮಂತ್ರಿಗಳ ಮೂಲಸೌಕರ್ಯ ಅಭಿವೃದ್ಧಿ ಯೋಜನೆ ಅಡಿಯಲ್ಲಿ ಕೈಗೆತ್ತಿಕೊಳ್ಳಲಾಗಿರುವ ರಸ್ತೆ ಕಾಮಗಾರಿಗೆ ಇದೇ ಸಂದರ್ಭದಲ್ಲಿ ಚಾಲನೆ ನೀಡಲಾಯಿತು. ಪ್ರಸ್ತುತ ಮಳೆಗಾಲ ಆರಂಭವಾಗಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗದಂತೆ ಕಾಮಗಾರಿಯನ್ನು ಅತ್ಯಂತ ವೇಗವಾಗಿ ನಡೆಸಿ, ನಿಗದಿತ ಕಾಲಮಿತಿಯೊಳಗೆ



ಪೂರ್ಣಗೊಳಿಸಬೇಕು ಎಂದು ಕಟ್ಟುನಿಟ್ಟಾಗಿ ತಿಳಿಸಲಾಯಿತು.

ಬ್ಯಾಂಕ್ ಕಾಲೊನಿ ಮುಖ್ಯ ರಸ್ತೆಯಲ್ಲಿ ಬಾಕಿ ಇರುವ ವೈಟ್ ಟಾಪಿಂಗ್ ಕೆಲಸಗಳನ್ನು ಶೀಘ್ರವಾಗಿ ಆರಂಭಿಸಲು ನಿರ್ದೇಶಿಸಲಾಯಿತು. ರಸ್ತೆ ನಿರ್ಮಾಣದ ಜೊತೆಗೆ ಪಾದಚಾರಿ ಮಾರ್ಗಗಳನ್ನು ಸುಸಜ್ಜಿತವಾಗಿ ನಿರ್ಮಿಸಬೇಕು ಮತ್ತು ಮುಂಬರುವ ಮಳೆಗಾಲದಲ್ಲಿ ಮಳೆನೀರು ಎಲ್ಲೂ ನಿಲ್ಲದೆ ಸರಾಗವಾಗಿ ಹರಿದುಹೋಗುವಂತೆ ರಾಜಕಾಲುವೆ ಹಾಗೂ ಒಳಚರಂಡಿ ವ್ಯವಸ್ಥೆಯನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು ಎಂದು ಅಧಿಕಾರಿಗಳಿಗೆ ತಾಕೀತು ಮಾಡಿದರು.

ಪರಿಶೀಲನಾ ಸಂದರ್ಭದಲ್ಲಿ ಸ್ಥಳೀಯ ನಾಗರಿಕರು ಹಕ್ಕುಪತ್ರ ವಿತರಣೆಗೆ ಸಂಬಂಧಿಸಿದಂತೆ ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ಶಾಸಕರು ಹಾಗೂ ಆಯುಕ್ತರಿಗೆ ಮುಖತಃ ಅಹವಾಲು ಸಲ್ಲಿಸಿದರು. ಸಾರ್ವಜನಿಕರ ದೂರುಗಳನ್ನು ಆಲಿಸಿದ ಆಯುಕ್ತರು, ಕಾನೂನಿನ ಚೌಕಟ್ಟಿನೊಳಗೆ ಅಗತ್ಯ ಕ್ರಮಗಳನ್ನು ಕೈಗೊಂಡು ಅರ್ಹ ಸಂತ್ರಸ್ತರಿಗೆ ತಕ್ಷಣವೇ ನೆರವಾಗುವಂತೆ ಕಂದಾಯ ವಿಭಾಗದ ಅಧಿಕಾರಿಗಳಿಗೆ ಆದೇಶಿಸಿದರು.

ಈ ಜಂಟಿ ಪರಿಶೀಲನಾ ಕಾರ್ಯಕ್ರಮದಲ್ಲಿ ಪಾಲಿಕೆಯ ಮುಖ್ಯ ಅಭಿಯಂತರರಾದ ಬಸವರಾಜ್ ಕಬಾಡೆ, ಅಧೀಕ್ಷಕ ಅಭಿಯಂತರರು, ಕಾರ್ಯಪಾಲಕ ಅಭಿಯಂತರರು ಹಾಗೂ ಕಂದಾಯ ಮತ್ತು ಆರೋಗ್ಯ ವಿಭಾಗದ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಕೋಟಿ ರೂಪಾಯಿ ಭೂ ಹಗರಣ ಆರೋಪ – ನಾಲ್ವರ ವಿರುದ್ಧ ಪ್ರಕರಣ ದಾಖಲಿಸಲು ಒತ್ತಾಯ

ಬಂಗಾರಪೇಟೆ

ತಾಲ್ಲೂಕಿನ ಕಾರಹಳ್ಳಿ ಗ್ರಾಮದ ಭೂ ಅಭಿವೃದ್ಧಿ ಯೋಜನೆಗೆ ಸಂಬಂಧಿಸಿದಂತೆ ಕೋಟ್ಯಾಂತರ ರೂಪಾಯಿ ವಂಚನೆ ನಡೆದಿದೆ ಎಂದು ಆರೋಪಿಸಿ, ಹಿರಿಯ ನಾಗರಿಕ ಜಿ. ವೆಂಕಟಸ್ವಾಮಿ (81) ಅವರು ಬಂಗಾರಪೇಟೆ ಪೊಲೀಸ್ ಠಾಣೆಗೆ ದೂರು ಸಲ್ಲಿಸಿರುವುದಾಗಿ ತಿಳಿಸಿದರು.



ಬಂಗಾರಪೇಟೆ ಉದ್ಯಾನವನದಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಕಾರಹಳ್ಳಿ ಗ್ರಾಮದ ಸರ್ವೆ ನಂ.126/1ರ ಭೂಮಿಯಲ್ಲಿ ಅಭಿವೃದ್ಧಿಪಡಿಸಲಾದ ಸೈಟುಗಳ ಮಾರಾಟದಲ್ಲಿ ಭಾರೀ ಅಕ್ರಮ ನಡೆದಿದೆ ಎಂದು ಆರೋಪಿಸಿದರು. ಮೂಲ ಮಾಲೀಕರಿಂದ ಹಲವು ಹಂತಗಳಲ್ಲಿ ಸ್ವತ್ತು ವರ್ಗಾವಣೆಯಾಗಿದ್ದು, ನಂತರ ಭೂಮಿಯನ್ನು ಅಭಿವೃದ್ಧಿಪಡಿಸಿ 63 ಸೈಟುಗಳಾಗಿ ವಿಭಜಿಸಿ ಮಾರಾಟ ಮಾಡಲಾಗಿದೆ ಎಂದು ಹೇಳಿದರು.

ಈ ಯೋಜನೆಯ 26 ಸೈಟುಗಳಿಗೆ ಸಂಬಂಧಿಸಿದಂತೆ 2021ರಲ್ಲಿಯೇ ಆಶಾ ಡಿ.ಆರ್. ಅವರ ಹೆಸರಿನಲ್ಲಿ ನೋಂದಾಯಿತ ಕ್ರಯದ ಕರಾರು ಮಾಡಲಾಗಿದ್ದು, ಅದರ ಆಧಾರದ ಮೇಲೆ ಒಂದು ಕೋಟಿ ರೂಪಾಯಿಗೂ ಹೆಚ್ಚು ಹಣವನ್ನು ಮುಂಗಡವಾಗಿ ಸ್ವೀಕರಿಸಲಾಗಿದೆ ಎಂದು ಆರೋಪಿಸಿದರು.

ಆದರೆ ಬಳಿಕ ಆ ಕರಾರಿನ ಮಾಹಿತಿಯನ್ನು ಸಾರ್ವಜನಿಕ ದಾಖಲೆಗಳಿಂದ ಮರೆಮಾಚಿ, ಯಾವುದೇ ಋಣಭಾರ ಅಥವಾ ಕರಾರು ಇಲ್ಲವೆಂದು ತೋರಿಸಿ ತಮ್ಮ ಸೇರಿದಂತೆ ಇನ್ನೂ 12 ಜನರಿಗೆ ಅದೇ ಸೈಟುಗಳನ್ನು ಮಾರಾಟ ಮಾಡಿ ಕೋಟ್ಯಾಂತರ ರೂಪಾಯಿ ಹಣವನ್ನು ಪಡೆದು ವಂಚನೆ ಮಾಡಲಾಗಿದೆ ಎಂದು ದೂರಿದರು.

ಈ ಪ್ರಕರಣದಲ್ಲಿ ಭೂ ಮಾಲೀಕ ವಿಶ್ವೇಶ್ವರಪ್ಪ ಕೆ.ವಿ., ಅಧಿಕಾರ ಪತ್ರ ಪಡೆದ ಜೀವನ್ ಪ್ರಕಾಶ್, ಅಂದಿನ ಉಪನೋಂದಣಾಧಿಕಾರಿ ಸುಮಲತಾ ಹಾಗೂ ಪತ್ರ ಬರಹಗಾರ ವಿ. ರವಿಕುಮಾರ್ (ಡಮಾಲ್ ರವಿ) ಅವರು ಪರಸ್ಪರ ಶಾಮೀಲಾಗಿ ಒಳಸಂಚು ನಡೆಸಿದ್ದಾರೆ ಎಂದು ಆರೋಪಿಸಿದರು.

ಇದಲ್ಲದೆ, ಸರ್ಕಾರಿ ಕಚೇರಿಯ ಕಂಪ್ಯೂಟರ್ ದತ್ತಾಂಶದಲ್ಲಿ ತಿದ್ದುಪಡಿ ಮಾಡಿ ನೋಂದಾಯಿತ ಕ್ರಯದ ಕರಾರನ್ನು ಮರೆಮಾಚಿರುವ ಬಗ್ಗೆ ಈಗಾಗಲೇ ನೋಂದಣಿ ಇಲಾಖೆಯ ಉನ್ನತ ಅಧಿಕಾರಿಗಳಿಗೆ ಪ್ರತ್ಯೇಕ ದೂರು ನೀಡಲಾಗಿದೆ ಎಂದು ತಿಳಿಸಿದರು.

ಈ ನಡುವೆ, 2026ರ ಜನವರಿ 21ರಂದು ಆಶಾ ಡಿ.ಆರ್. ಅವರು ಬಂಗಾರಪೇಟೆ ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಲಯದಲ್ಲಿ ಕ್ರಯದ ಕರಾರು ಜಾರಿಗಾಗಿ ದಾವೆ ಹೂಡಿದ್ದು, ದೂರುದಾರರು ಸೇರಿದಂತೆ ಇತರೆ ಖರೀದಿದಾರರನ್ನು ಪ್ರತಿವಾದಿಗಳನ್ನಾಗಿ ಸೇರಿಸಲಾಗಿದೆ ಎಂದು ಹೇಳಿದರು.

ತಮ್ಮ ವಯಸ್ಸು 81 ವರ್ಷವಾಗಿದ್ದು, ಮಕ್ಕಳ ಭವಿಷ್ಯಕ್ಕಾಗಿ ಸೈಟುಗಳನ್ನು ಖರೀದಿಸಿದ್ದೇನೆ. ಆದರೆ ಆರೋಪಿಗಳು ಮೋಸದಿಂದ ಲಕ್ಷಾಂತರ ರೂಪಾಯಿ ನಷ್ಟ ಉಂಟುಮಾಡಿದ್ದಾರೆ.

ಅಲ್ಲದೆ ವಿಚಾರಿಸಲು ಹೋದಾಗ ಅವಾಚ್ಯ ಶಬ್ದಗಳಿಂದ ನಿಂದಿಸಿ, ಪ್ರಾಣ ಬೆದರಿಕೆ ಹಾಕಿದ್ದಾರೆ ಎಂದು ಆರೋಪಿಸಿದರು.

ಆದ್ದರಿಂದ ವಿಶ್ವೇಶ್ವರಪ್ಪ, ಜೀವನ್ ಪ್ರಕಾಶ್, ಸುಮಲತಾ ಹಾಗೂ ವಿ. ರವಿಕುಮಾರ್ ವಿರುದ್ಧ ಭಾರತೀಯ ನ್ಯಾಯ ಸಂಹಿತೆ 2023ರ ವಿವಿಧ ಕಲಂಗಳಡಿ ಕ್ರಿಮಿನಲ್ ಪ್ರಕರಣ ದಾಖಲಿಸಿ, ಸಮಗ್ರ ತನಿಖೆ ನಡೆಸಿ ನ್ಯಾಯ ಒದಗಿಸಬೇಕೆಂದು ಪೊಲೀಸ್ ಇಲಾಖೆಯನ್ನು ಆಗ್ರಹಿಸಿದರು.

ಈ ಕುರಿತು ಪೂರಕ ದಾಖಲೆಗಳನ್ನು ಸಹ ಪೊಲೀಸ್ ಠಾಣೆಗೆ ಸಲ್ಲಿಸಲಾಗಿದೆ ಎಂದು ಜಿ. ವೆಂಕಟಸ್ವಾಮಿ ತಿಳಿಸಿದ್ದಾರೆ.

# ಅಂಚೆ ಅದಾಲತ್

ಹಾಸನ

ಸಾರ್ವಜನಿಕರು ಅಂಚೆ ವ್ಯವಸ್ಥೆಯ ಕುಂದು ಕೊರತೆಗಳ ಬಗ್ಗೆ ತಮ್ಮ ಅಹವಾಲುಗಳನ್ನು ನೀಡಲು ಅಂಚೆ ಅದಾಲತ್‌ನ್ನು ಜೂ.15 ರಂದು ಅಂಚೆ ಅಧೀಕ್ಷಕರ ಕಚೇರಿಯಲ್ಲಿ ಏರ್ಪಡಿಸಲಾಗಿದೆ. ಸಾರ್ವಜನಿಕರು ಅಂಚೆ ಸೇವೆಯ ಬಗ್ಗೆ ಕುಂದು ಕೊರತೆಗಳು ಏನಾದರು ಇದ್ದಲ್ಲಿ ಜೂ.15 ರಂದು ಸಂಜೆ 4 ಗಂಟೆಯ ಒಳಗೆ ಸಲ್ಲಿಸುವಂತೆ ಅಂಚೆ ಅಧೀಕ್ಷಕರು ತಿಳಿಸಿದ್ದಾರೆ.

# 26ರಿಂದ ಮೂರು ದಿನಗಳ ಬೃಹತ್ ಪುಸ್ತಕ ಸಂತೆ

ತುಮಕೂರು

ವೀರಲೋಕ ಪ್ರತಿಷ್ಠಾನ ಹಾಗೂ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸಹಕಾರದೊಂದಿಗೆ ನಗರದ ಗಾಜಿನ ಮನೆಯಲ್ಲಿ ಈ ತಿಂಗಳ 26, 27 ಮತ್ತು 28 ರಂದು ಹಮ್ಮಿಕೊಂಡಿರುವ 5ನೇ ಆವೃತ್ತಿಯ ಬೃಹತ್ 'ವೀರಲೋಕ ಪುಸ್ತಕ ಸಂತೆ' ಸಾಂಸ್ಕೃತಿಕ ಹಬ್ಬದ ಲೋಗೋವನ್ನು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಗುರುವಾರ ಬಿಡುಗಡೆ ಮಾಡಿದರು.

ಓದುಗನಿಗೂ ಮತ್ತು ಕನ್ನಡ ಪುಸ್ತಕಗಳಿಗೂ ಇರುವ ನಂಟನ್ನು ಮತ್ತಷ್ಟು ಗಟ್ಟಿಗೊಳಿಸುವ ಉದ್ದೇಶದಿಂದ ಆರ್.ಕೆ. ಶ್ರೀನಿವಾಸ್ ಅವರ ನೇತೃತ್ವದಲ್ಲಿ ನಡೆಯುವ 3 ದಿನಗಳ ಜ್ಞಾನದ ಜಾತ್ರೆಗೆ ನಾಡಿನಾದ್ಯಂತ ಒಂದು ಲಕ್ಷಕ್ಕೂ ಅಧಿಕ ಪುಸ್ತಕ ಪ್ರೇಮಿಗಳು ಹಾಗೂ ಓದುಗರು ಆಗಮಿಸುವ ನಿರೀಕ್ಷೆಯಿದೆ. ವೀರಲೋಕ ಪುಸ್ತಕ ಸಂತೆಯ ಯಶಸ್ಸಿಗೆ ಜಿಲ್ಲಾಡಳಿತದ ಸಂಪೂರ್ಣ ಸಹಕಾರ ಇರಲಿದೆ ಎಂದು ಜಿಲ್ಲಾಧಿಕಾರಿಗಳು ಈ ವೇಳೆ ಭರವಸೆ ನೀಡಿದರು.



ಪುಸ್ತಕ ಸಂತೆಯ ಪೂರ್ವ ಸಿದ್ಧತೆಯ 2 ದಿನಗಳು ಹಾಗೂ ಕಾರ್ಯಕ್ರಮ ನಡೆಯುವ 3 ದಿನಗಳು ಸೇರಿದಂತೆ ಒಟ್ಟು ದಿನಗಳ ಕಾಲ ಗಾಜಿನಮನೆಯನ್ನು ಉಚಿತವಾಗಿ ಒದಗಿಸಿಕೊಡಲು ಜಿಲ್ಲಾಡಳಿತ ಒಪ್ಪಿಗೆ ಸೂಚಿಸಿದೆ. ಜಿಲ್ಲೆಯ ಎಲ್ಲಾ ಸರ್ಕಾರಿ ಇಲಾಖೆಗಳು, ಪ್ರೌಢಶಾಲೆ ಹಾಗೂ ಕಾಲೇಜುಗಳ ವಿದ್ಯಾರ್ಥಿಗಳು, ಶಿಕ್ಷಕರು ಮತ್ತು ನೌಕರರು ಈ ಸಾಂಸ್ಕೃತಿಕ ಹಬ್ಬದಲ್ಲಿ ಸಕ್ರಿಯವಾಗಿ ಭಾಗವಹಿಸುವಂತೆ ಉತ್ತೇಜಿಸಲು ಜಿಲ್ಲಾಡಳಿತದ ವತಿಯಿಂದ ಶೀಘ್ರದಲ್ಲೇ ಆದೇಶವನ್ನು ಹೊರಡಿಸಲಾಗುವುದು ಎಂದು ಹೇಳಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎಸ್. ಸಿದ್ದಲಿಂಗಯ್ಯ, ಪುಸ್ತಕ ಸಂತೆಯ ತಂಡವಾದ ರೇವಣ್ಣಸಿದ್ದಪ್ಪ, ಸೌಮ್ಯ, ನರೇಂದ್ರಬಾಬು, ಕಲ್ಪತರು ಪ್ರಶಾಂತ್, ಸೀಗಲಹಳ್ಳಿ ನರಸಿಂಹಮೂರ್ತಿ, ಗೋವರ್ಧನ್, ಶೈಲಜಾ, ಜ್ಯೋತಿ, ಕೃಷ್ಣ, ನಾಗೇಶ್, ಅನಿಲ್, ವಿನಯ್ ಕಾವ್ಯತನಯ ಮೊದಲಾದವರು ಭಾಗವಹಿಸಿದ್ದರು.

# ಅಭಿವೃದ್ಧಿ ಕಾಮಗಾರಿಗೆ ಶಾಸಕರಿಂದ ಭೂಮಿ ಪೂಜೆ



ಶ್ರೀನಿವಾಸಪುರ

ಪಟ್ಟಣದ ಸಮಗ್ರ ಅಭಿವೃದ್ಧಿಗೆ ಮತ್ತೊಂದು ಹೆಜ್ಜೆಯಾಗಿ ಸುಮಾರು 9 ಕೋಟಿ ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ ಜಿ.ಕೆ ವೆಂಕಟಾಶಿವಾರೆಡ್ಡಿ ಹಾಗೂ ಸ್ಥಳೀಯ ಮುಖಂಡರು ಗುದ್ದಲಿ ಪೂಜೆ ನೆರವೇರಿಸಿದರು.

ಪಟ್ಟಣದ ನ್ಯೂ ಕೋಲಾರ್ ಸರ್ಕಲ್, ರಂಗಾ ರಸ್ತೆ, ಅಂಬೇಡ್ಕರ್ ಪಾಳ್ಯ ಸೇರಿದಂತೆ ವಿವಿಧ ಪ್ರದೇಶಗಳ ಸಿಸಿ ರಸ್ತೆ ನಿರ್ಮಾಣ ಕಾಮಗಾರಿ ಹಾಗೂ ಬಾಲಕಿಯರ ಪದವಿ ಪೂರ್ವ ಕಾಲೇಜಿನ ಕಂಪೌಂಡ್ ನಿರ್ಮಾಣ ಕಾಮಗಾರಿಗಳಿಗೆ ಚಾಲನೆ ನೀಡಲಾಯಿತು.

ಇದೇ ವೇಳೆ ಬಾಲಾಂಜನೇಯ ದೇವಸ್ಥಾನದ ಹಿಂಭಾಗದಲ್ಲಿರುವ ಸುಮಾರು 200ಕ್ಕೂ ಹೆಚ್ಚು ಮನೆಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆಯು ಕೆಲ ಖಾಸಗಿ ವ್ಯಕ್ತಿಗಳಿಂದ ಒತ್ತುವರಿಗೆ ಒಳಗಾಗಿರುವ ಕುರಿತು ಸ್ಥಳೀಯರು ಗಮನ ಸೆಳೆದರು. ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಿದ ಶಾಸಕರು, ಸಂಬಂಧಿಸಿದ ಅಧಿಕಾರಿಗಳಿಂದ ತನಿಖೆ ನಡೆಸಿ ಒತ್ತುವರಿ ತೆರವುಗೊಳಿಸಿ ಸಾರ್ವಜನಿಕರಿಗೆ ರಸ್ತೆ ಸೌಲಭ್ಯ ಕಲ್ಪಿಸುವುದಾಗಿ ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ಸ್ಥಳೀಯ ಜನಪ್ರತಿನಿಧಿಗಳು, ಅಧಿಕಾರಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ರಸಗೊಬ್ಬರ ಕಾಯಿದೆ ಉಲ್ಲಂಘಿಸುವವರ ವಿರುದ್ಧ ಮಾರಾಟ ತಡೆ ಆದೇಶ ಸಾಧ್ಯ

ಮಾಲೂರು

ರಸಗೊಬ್ಬರ ಪರವಾನಗಿ ಹೊಂದಿರುವ ಮಾರಾಟಗಾರರು ಕಡ್ಡಾಯವಾಗಿ ರಸಗೊಬ್ಬರಗಳ ದಾಸ್ತಾನು ಹಾಗೂ ದರಗಳನ್ನು ಪ್ರಕಟಣಾ ಫಲಕದಲ್ಲಿ ಪ್ರಕಟಿಸಬೇಕು ಹೆಚ್ಚಿನ ದರಗಳಿಗೆ ಮಾರಾಟ ಮಾಡಿದ್ದು ಕಂಡು ಬಂದಲ್ಲಿ ಮಾರಾಟ ತಡೆ ಆದೇಶಗಳನ್ನು ಹೊರಡಿಸಲಾಗುವುದು ಎಂದು ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಬಿಪಿ ಚಂದ್ರಪ್ಪ ಹೇಳಿದರು.

ಅವರು ನಗರದ ರಸಗೊಬ್ಬರ ಮಾರಾಟ ಮಳಿಗೆಗಳಿಗೆ ಭೇಟಿ ನೀಡಿ ವೀಕ್ಷಿಸಿ ಮಾತನಾಡಿದರು, ಮುಂಗಾರು ಆರಂಭವಾಗಿದ್ದು ಮೇ ತಿಂಗಳಲ್ಲಿ ಸಾಧಾರಣ ಮಳೆಯಾಗಿದೆ, ಮಳೆಯ ಕೊರತೆ ಇದೆ ಈಗಾಗಲೇ ರೈತರು ತಮ್ಮ ಜಮೀನುಗಳನ್ನು ಉಳಿಮೆ ಮಾಡಿಕೊಳ್ಳುತ್ತಿದ್ದು, ರೈತರ ಕೃಷಿ ಚಟುವಟಿಕೆಗಳಿಗೆ ರಸಗೊಬ್ಬರಗಳು



ಬೇಡಿಕೆ ಹೆಚ್ಚಾಗದಂತೆ ನಿಗ ವಹಿಸಲಾಗಿದೆ, ಬಿಜೆಪಿ ಗೊಬ್ಬರಗಳ ಬೇಡಿಕೆಯು ಸಹ ಹೆಚ್ಚಾಗಿರುವುದರಿಂದ ನಕಲಿ ಗೊಬ್ಬರಗಳ ಹಾವಳಿ ಹೆಚ್ಚಾಗಬಹುದು, ಅಲ್ಲದೆ ದೇಶದಲ್ಲಿ ರಸಗೊಬ್ಬರಗಳ ಉತ್ಪಾದನೆಗೆ ಕಚ್ಚಾವಸ್ತುಗಳ ಆಮದು ಮಾಡಿಕೊಳ್ಳುತ್ತಿದ್ದು ಯುದ್ಧದ ಹಿನ್ನೆಲೆಯಲ್ಲಿ ಆಮದು ಮಾಡಿಕೊಳ್ಳುವುದು ಕಷ್ಟ ಸಾಧ್ಯವಾಗಿದೆ. ರಾಸಾಯನಿಕ ಗೊಬ್ಬರಗಳ ಬದಲಾಗಿ ಹೆಚ್ಚಿನ ರೀತಿಯಲ್ಲಿ ಸಾವಯವ ಗೊಬ್ಬರಗಳನ್ನು ಬಳಸಿದ್ದಲ್ಲಿ ಉತ್ತಮ ಇಡುವರಿಗೂ ಸಹ ನೀಡುತ್ತದೆ.

ಆದ್ದರಿಂದ ಪ್ರಮಾಣೀಕೃತ ಪರವಾನಿಗೆ ಪಡೆದಿರುವ ರಸಗೊಬ್ಬರ ಮಳಿಗೆಗಳಲ್ಲಿ ಆಧಾರ್ ಕಾರ್ಡ್ ಮತ್ತು ರೈತರ ಎಫ್‌ಐಡಿ ಅನ್ನು ಕಡ್ಡಾಯವಾಗಿ ತೆಗೆದುಕೊಂಡು ಹೋಗಿ ರಸಗೊಬ್ಬರ ಖರೀದಿಸಬಹುದಾಗಿದೆ ಪಡೆದುಕೊಳ್ಳಬೇಕು, ರಸಗೊಬ್ಬರಗಳು ಖರೀದಿಸುವಾಗ ರೈತರು ತಪ್ಪದೆ ರಸೀದಿಯನ್ನು ಕೇಳಿ ಪಡೆಯಬೇಕು, ತಾಲೂಕಿನ ರಸಗೊಬ್ಬರ ಮಾರಾಟಗಾರರಿಗೆ ಈಗಾಗಲೇ ಜಾಗೃತಿ ಮೂಡಿಸಲಾಗುತ್ತಿದೆ ಕೃಷಿ ಇಲಾಖೆಯ ಸಿಬ್ಬಂದಿಗಳು ಎಲ್ಲಾ ಮಳಿಗೆಗಳಲ್ಲಿ ತಪಾಸಣೆ ನಡೆಸಿ ರಸಗೊಬ್ಬರ ಕಾಯಿದೆ ಉಲ್ಲಂಘಿಸಿದರೆ ಎಚ್ಚರಿಕೆ ನೋಟಿಸ್ ನೀಡಲಾಗುತ್ತಿದೆ, ರಸಗೊಬ್ಬರ ಪರವಾನಗಿದಾರರು ಕಡ್ಡಾಯವಾಗಿ ರಸಗೊಬ್ಬರಗಳ ದಾಸ್ತಾನು ಹಾಗೂ ದರಗಳನ್ನು ಪ್ರಕಟಿಸಬೇಕು,

ಹೆಚ್ಚಿನದರಗಳಿಗೆ ಮಾರಾಟ ಮಾಡಿದ್ದು ಕಂಡುಬಂದಲ್ಲಿ ಮಾರಾಟ ತಡೆ ಆದೇಶಗಳನ್ನು ಹೊರಡಿಸಲಾಗುವುದು ಎಂದರು.

ತಾಲೂಕಿನಲ್ಲಿ ರಾಗಿ ಬಿತ್ತನೆ ಹೆಚ್ಚಾಗಿದ್ದು, ಪ್ರಮಾಣೀಕೃತ ರಾಗಿ, ಬಿತ್ತನೆ ಬೀಜ ಸಂಪರ್ಕ ಕೇಂದ್ರಗಳಲ್ಲಿ ಲಭ್ಯವಿದೆ.

ಹವಾಮಾನ ಇಲಾಖೆ ಪ್ರಸಕ್ತ ವರ್ಷದ ಮಳೆ ಸಾಧಾರಣ ಮಳೆಗಿಂತ ಕಡಿಮೆಯಾಗುವ ಮುನ್ಸೂಚನೆ ನೀಡಿತು, ಈ ವರ್ಷ ಅಲ್ಪಾವಧಿ ತಳಿಗಳು ಬಳಸುವುದು ಸೂಕ್ತ ಜೊತೆಗೆ ರಸಗೊಬ್ಬರಗಳನ್ನು ಮಿತಮಿತವಾಗಿ ಬಳಸುವುದರಿಂದ ಸಾವಯವ ಗೊಬ್ಬರಗಳು ಹೆಚ್ಚಾಗಿ ಬಳಸಿದ್ದಲ್ಲಿ ಮಣ್ಣಿನಲ್ಲಿ ನೀರು ಹಿಡಿದಿಟ್ಟುಕೊಳ್ಳುವ ಶಕ್ತಿ ಹೆಚ್ಚಾಗುತ್ತದೆ. ರೈತರು ಹೆಚ್ಚಾಗಿ ಸಾವಯವ ಗೊಬ್ಬರಗಳು ಉತ್ತಮ ಕೃಷಿಭಾಗ್ಯ ಯೋಜನೆ ಅಡಿ ಕೃಷಿ ಹೊಂಡಗಳಲ್ಲಿ ನೀರನ್ನು ಶೇಖರಿಸಿಕೊಂಡು ಸಂದಿಗ್ಧ ಪರಿಸ್ಥಿತಿಗಳಲ್ಲಿ ನೀರು ಹರಿಸುವುದರಿಂದ ಹೆಚ್ಚಿನ ಇಳುವರಿಯನ್ನು ಪಡೆಯಬಹುದಾಗಿದೆ, ಜೂನ್‌ನಲ್ಲಿ ತೊಗರಿ ಶೇಂಗಾ ಬಿತ್ತನೆಗೆ ಸೂಕ್ತವಾಗಿದ್ದು, ರೈತ ಸಂಪರ್ಕ ಕೇಂದ್ರಗಳಲ್ಲಿ ದಾಸ್ತಾನು ಮಾಡಲಾಗಿದೆ, ರೈತರು ತಮ್ಮ ಹೊಲಗಳನ್ನು ಉಳಿಮೆ ಮಾಡಿಕೊಂಡು ಶೇಂಗಾ ಹಾಗೂ ತೊಗರಿಯನ್ನು ಬಿತ್ತನೆ ಮಾಡಬಹುದಾಗಿದೆ ಎಂದರು.

ಕೃಷಿಭಾಗ್ಯ ಯೋಜನೆಯ ಫಲಾನುಭವಿ ರೈತರು ಕಡ್ಡಾಯವಾಗಿ ತಮ್ಮ ಜಮೀನುಗಳಲ್ಲಿರುವ ಕೃಷಿ ಹೊಂಡಗಳಿಗೆ ತಂತಿ ಬೇಲಿ ಅಳವಡಿಸಿಕೊಳ್ಳಬೇಕು, ಇಲ್ಲವಾದಲ್ಲಿ ಜಿಲ್ಲಾಧಿಕಾರಿಗಳ ಆದೇಶದಂತೆ ರೈತರ ವೆಚ್ಚದಲ್ಲಿಯೇ ಕೃಷಿ ಹೊಂಡಗಳನ್ನು ಮುಚ್ಚಲಾಗುವುದು, ಆದ್ದರಿಂದ ರೈತರು ತಮ್ಮ ಜಮೀನುಗಳಲ್ಲಿರುವ ಕೃಷಿ ಹೊಂಡಗಳಿಗೆ ಕಡ್ಡಾಯವಾಗಿ ತಂತಿ ಬೇಲಿಯನ್ನು ಅಳವಡಿಸಿಕೊಳ್ಳುವಂತೆ ಹೇಳಿದರು.

13/06/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಕಡ್ಡಾಯವಾಗಿ ಕಸ ವಿಂಗಡಣೆಗೆ ಮನವಿ

ಮಾಲೂರು

ನಗರದ ಸ್ವಚ್ಛತೆಗಾಗಿ ಪ್ರತಿಯೊಬ್ಬ ನಾಗರಿಕರು ಬೃಹತ್ ತ್ಯಾಜ್ಯ ಉತ್ಪಾದಕರು ಘನ ತ್ಯಾಜ್ಯ ನಿರ್ವಹಣಾ ನಿಯಮಗಳು 2026ರಂತೆ ಕಸ ವಿಂಗಡಣೆ ಕಡ್ಡಾಯವಾಗಿದ್ದು ತಮ್ಮ ಮನೆಗಳಲ್ಲಿ ಸಂಗ್ರಹವಾಗುವ ಕಸವನ್ನು ಹಸಿ ಕಸ ಒಣಕಸ ಸ್ಯಾನಿಟರಿ ತ್ಯಾಜ್ಯ ವಿಶೇಷ ಕಾಳಜಿ ತ್ಯಾಜ್ಯವಾಗಿ ವಿಂಗಡಿಸಿ ನಗರಸಭೆಯ ಕಸ ಸಂಗ್ರಹಣೆ ಆಟೋ ಟಿಪ್ಪರ್‌ಗಳಿಗೆ ಹಾಕುವಂತೆ ನಗರಸಭೆ ಪೌರಾಯುಕ್ತ ಎಂ ಎಸ್ ಮಹದೇವ ಹೇಳಿದರು.

ನಗರಸಭೆಯ ಅವರ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಘನ ತ್ಯಾಜ್ಯ ನಿರ್ವಹಣೆಗಾಗಿ 2026ರ ಕಸ ವಿಂಗಡಣೆ ಕಡ್ಡಾಯ ಗೊಳಿಸಿರುವದರ ಬಗ್ಗೆ ಮಾಹಿತಿ ನೀಡಿ.

ಮಾಲೂರು ನಗರವು ದಿನದಿಂದ ದಿನಕ್ಕೆ ವೇಗವಾಗಿ ಬೆಳೆಯುತ್ತಿದ್ದು ಅದರಂತೆ ಕಸ ಸಂಗ್ರಹಣೆ ಮಾಡುವುದರ ಮೂಲಕ ನಗರದ ಸ್ವಚ್ಛತೆಯನ್ನು ಕಾಪಾಡುವುದು ನಗರ ಸಭೆಯ ಆದ್ಯ ಕರ್ತವ್ಯವಾಗಿದ್ದು ತಮ್ಮ ಮನೆಗಳಲ್ಲಿ ಸಂಗ್ರಹವಾಗುವ ಕಸವನ್ನು ನಾಗರಿಕರು ಹಸಿ ಕಸ ಒಣ ಕಸ ಸಾನಟರಿ ತ್ಯಾಜ್ಯ ವಿಶೇಷ ಕಾಳಜಿ ತ್ಯಾಜ್ಯವಾಗಿ ವಿಂಗಡಿಸಿ ನಗರಸಭೆಯ ಕಸ ಸಂಗ್ರಹಣೆ ಮಾಡುವ ಆಟೋ ಟಿಪ್ಪರ್‌ಗಳಿಗೆ ನೀಡಬೇಕು, ಘನ ತ್ಯಾಜ್ಯ ನಿರ್ವಹಣಾ ನಿಯಮಗಳು–2026ರ ಪ್ರಕಾರ ಪ್ರತಿಯೊಬ್ಬ ಸಾರ್ವಜನಿಕರು, ಮನೆಮಠಗಳು, ವಾಣಿಜ್ಯ ಸಂಸ್ಥೆಗಳು, ಕಚೇರಿಗಳು ಹಾಗೂ ಎಲ್ಲಾ ತ್ಯಾಜ್ಯ ಉತ್ಪಾದಕರು ತಮ್ಮ ಮೂಲದಲ್ಲಿಯೇ ಕಸವನ್ನು ನಾಲ್ಕು ವಿಧಗಳಾಗಿ ಪ್ರತ್ಯೇಕಿಸಿ ನೀಡುವುದು ಕಡ್ಡಾಯವಾಗಿದೆ.

ಹಸಿ ತ್ಯಾಜ್ಯ ಆಹಾರ ಅವಶೇಷಗಳು, ತರಕಾರಿ ಹಾಗೂ ಹಣ್ಣಿನ ಸಿಪ್ಪೆಗಳು, ತೋಟದ ತ್ಯಾಜ್ಯ.ಒಣ ತ್ಯಾಜ್ಯ ಕಾಗದ, ಪ್ಲಾಸ್ಟಿಕ್, ಲೋಹ, ಗಾಜು ಹಾಗೂ ಮರುಬಳಕೆ ಮಾಡಬಹುದಾದ ವಸ್ತುಗಳು. ಸ್ಯಾನಿಟರಿ ತ್ಯಾಜ್ಯ ಡೈಪರ್‌ಗಳು, ಸ್ಯಾನಿಟರಿ ನ್ಯಾಪ್ಕಿನ್‌ಗಳು ಹಾಗೂ ಇತರೆ ಸ್ವಚ್ಛತಾ ತ್ಯಾಜ್ಯಗಳು.

ವಿಶೇಷ ತ್ಯಾಜ್ಯ ಬ್ಯಾಟರಿಗಳು, ಬಲ್ಬ್‌ಗಳು, ಔಷಧಿಗಳ ಅವಶೇಷಗಳು, ಇ–ತ್ಯಾಜ್ಯ ಹಾಗೂ ಅಪಾಯಕಾರಿ ತ್ಯಾಜ್ಯಗಳು.ಮಿಶ್ರ ಕಸ ನೀಡುವುದು ನಿಯಮ ಉಲ್ಲಂಘನೆಯಾಗಿದ್ದು, ಪರಿಸರ ಮಾಲಿನ್ಯ ಹಾಗೂ ಆರೋಗ್ಯ ಸಮಸ್ಯೆಗಳಿಗೆ ಕಾರಣವಾಗುತ್ತದೆ. ಆದ್ದರಿಂದ ಪ್ರತಿಯೊಬ್ಬ ನಾಗರಿಕರು ತಮ್ಮ ಜವಾಬ್ದಾರಿಯನ್ನು ಅರಿತು ಕಸವನ್ನು ನಾಲ್ಕು ವಿಭಾಗಗಳಲ್ಲಿ ವಿಂಗಡಿಸಿ ಸ್ಥಳೀಯ ಸಂಸ್ಥೆಗೆ ಹಸ್ತಾಂತರಿಸಬೇಕು.ಮೂಲದಲ್ಲಿಯೇ ಕಸ ವಿಂಗಡಣೆ ಸ್ವಚ್ಛ ಪರಿಸರದತ್ತ ಮೊದಲ ಹೆಜ್ಜೆ"ಸ್ವಚ್ಛ ನಗರ, ಆರೋಗ್ಯಕರ ಸಮಾಜ ಹಾಗೂ ಸುಸ್ಥಿರ ಭವಿಷ್ಯಕ್ಕಾಗಿ ಎಲ್ಲರೂ ಘನ ತ್ಯಾಜ್ಯ ನಿರ್ವಹಣಾ ನಿಯಮಗಳು–2026ನ್ನು ಕಟ್ಟುನಿಟ್ಟಾಗಿ ಪಾಲಿಸೋಣ. ಎಂದು ಹೇಳಿದರು.

ಈ ಸಂದರ್ಭದಲ್ಲಿ ಪರಿಸರ ಅಭಿಯಂತರ ಶಾಲಿನಿ ಆರೋಗ್ಯ ನಿರೀಕ್ಷಕ ರಾಜಣ್ಣ ಹಾಜರಿದ್ದರು.

# ಮುಂಗಾರು ಅಭಿಯಾನ

ಮಾಲೂರು

ಹೆಚ್ಚಿನ ರಸಗೊಬ್ಬರಗಳ ಬಳಕೆಯಿಂದ ಜಮೀನುಗಳಲ್ಲಿ ಫಲವತ್ತತೆ ಕಡಿಮೆಯಾಗಿ ಬೆಳೆಗಳ ಇಳುವರಿ ಕಡಿಮೆಯಾಗುತ್ತದೆ ಆದ್ದರಿಂದ ರೈತರು ಸಾವಯವ ಎರೆಹುಳು ತಿಪ್ಪೆ ಗೊಬ್ಬರವನ್ನು ಬಳಸಿ ಬೆಳೆಗಳನ್ನು ಬೆಳೆದರೆ ಉತ್ತಮ ಇಳುವರಿ ನೀಡುವುದರ ಜೊತೆಗೆ ಜನರ ಆರೋಗ್ಯವನ್ನು ಸಹ ಹೆಚ್ಚಿಸುತ್ತದೆ ಎಂದು ಜಾನುವಾರು ರೈತ ಸಂಘದ ಪ್ರಗತಿಪರ ರೈತ ನೀಲಕಂಠ ಆಗ್ರಹಾರ ಶಾಮಣ್ಣ ಹೇಳಿದರು.

ನಗರದ ಕೃಷಿ ಇಲಾಖೆಯ ಆವರಣದಲ್ಲಿ ಕೃಷಿ ಇಲಾಖೆಯ ಸಹಕಾರದಿಂದ ಕೇಂದ್ರ ಪುರಸ್ಕೃತ ಆತ್ಮಯೋಜನೆ ಅಡಿ ರಸಗೊಬ್ಬರ ಹಾಗೂ ಅರಿವು ಮೂಡಿಸುವ ಕುರಿತು ಮುಂಗಾರು ಅಭಿಯಾನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಸಾವಯವ ಎರೆಹುಳು ತಿಪ್ಪೇ ಗೊಬ್ಬರದಲ್ಲಿ ರಸಗೊಬ್ಬರಕ್ಕಿಂತ ಹೆಚ್ಚಿನ ಫಲವತ್ತತೆ ಇರುತ್ತದೆ ಮುಂಗಾರು ಪ್ರಾರಂಭವಾಗಿದೆ ಕಡಿಮೆ ಮಳೆ ಆಗುತ್ತಿದ್ದು ಮುಂಗಾರು ಪ್ರಾರಂಭವಾಗಿದ್ದು ತೊಗರಿ ಹಾಗೂ ನೆಲಗಡಲೆ ಹಾಕಲು ಸಕಾಲವಾಗಿದೆ ತಾಲೂಕಿನ ರೈತರು ತಮ್ಮ ಹೊಲಗಳನ್ನು ಉಳುಮೆ ಮಾಡಿ ತೊಗರಿ ಹಾಗೂ ನೆಲೆಗಡಲೆ ಹಾಕಬಹುದಾಗಿದೆ.

ಸಿರಿಧಾನ್ಯಗಳು ಕೃಷಿ ಇಲಾಖೆಯಲ್ಲಿ ಕೆಲವು ಮಾತ್ರ ಸಿಗುತ್ತದೆ ಕೆಲವು ಸಿರಿಧಾನ್ಯಗಳನ್ನು ವೈಯಕ್ತಿಕವಾಗಿ ಜಿಲ್ಲೆಯ ಯಾರೇ ರೈತರು ಸಂಪರ್ಕಿಸಿದರು ಉಚಿತವಾಗಿ ನೀಡುವದಾಗಿ ಹೇಳಿದ ಅವರು ಸಿರಿಧಾನ್ಯಗಳು ಸೇವಿಸುವುದರಿಂದ ನಮ್ಮ ಆರೋಗ್ಯ ಕಾಪಾಡಿಕೊಳ್ಳಬಹುದಾಗಿದೆ ಜಿಲ್ಲೆಯ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಸಿರಿಧಾನ್ಯಗಳನ್ನು ಬೆಳೆಯುವ ಮುಂದಾಗುವಂತೆ ಹೇಳಿದರು.

ಕೃಷಿ ಇಲಾಖೆಯ ಆತ್ಮ ಯೋಜನೆ ತಾಂತ್ರಿಕ ಅಧಿಕಾರಿ ಕೆ.ಸಿ ನಾರಾಯಣಸ್ವಾಮಿ ಮಾತನಾಡಿ, ರೈತರಿಗೆ ರಸಗೊಬ್ಬರಗಳ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದ್ದು ರೈತರು ಯಥೇಚ್ಛವಾಗಿ ರಸಗೊಬ್ಬರಗಳ ಬಳಕೆ ಮಾಡಿದರೆ ಜಮೀನಿನ ಫಲವತ್ತತೆ ಕಡಿಮೆ ಆಗುತ್ತದೆ ಅಲ್ಲದೆ ಇಳುವರಿಗೂ ಸಹ ಕುಂಟಿತಗೊಳ್ಳುತ್ತದೆ ಸಾವಯವ ತಿಪ್ಪೇ ಗೊಬ್ಬರ ಬಳಕೆ ಮಾಡಬೇಕು, ಯೂರಿಯಾ, ಡಿಎಪಿ ಬದಲು ನ್ಯಾನೋ ಯೂರಿಯ ಡಿಎಪಿ ಬಳಸಿದರೆ ಇಳುವರಿ ಹೆಚ್ಚುತ್ತದೆ, ನ್ಯಾನೋ ಯೂರಿಯಾ ಒಂದು ಬಾಟಲ್ 50 ಕೆಜಿ ಗೆ ಸಮಾನವಾಗಿರುತ್ತದೆ. ರಾಸಾಯನಿಕ ಗೊಬ್ಬರಗಳು ಕಡಿಮೆ ಮಾಡಿ ಸಾವಯವ ಗೊಬ್ಬರಗಳು ಬಳಸಿ ಆಹಾರ ಬೆಳೆಗಳು ಬೆಳೆಯುವುದರಿಂದ ಆಹಾರ ಪದಾರ್ಥಗಳು ಸೇವಿಸಿದವರು ಸಹ ಆರೋಗ್ಯ ಕಾಪಾಡಿಕೊಳ್ಳಬಹುದಾಗಿದೆ ಎಂದರು.

# ಪಕ್ಷ ಸಂಘಟನೆಗೆ ಸಜ್ಜಾಗುವಂತೆ ಕರೆ

ದೇವನಹಳ್ಳಿ

ಮುಂಬರುವ ಗ್ರಾಮ ಪಂಚಾಯಿತಿ, ತಾಲೂಕು ಪಂಚಾಯಿತಿ ಹಾಗೂ ಜಿಲ್ಲಾ ಪಂಚಾಯಿತಿ ಚುನಾವಣೆಗಳನ್ನು ಯಶಸ್ವಿಯಾಗಿ ಎದುರಿಸಲು ಜೆಡಿಎಸ್ ಕಾರ್ಯಕರ್ತರು ತಳಮಟ್ಟದಿಂದಲೇ ಪಕ್ಷ ಸಂಘಟನೆಗೆ ಒತ್ತು ನೀಡಬೇಕು ಎಂದು ದೇವನಹಳ್ಳಿ ಕ್ಷೇತ್ರದ ಮಾಜಿ ಶಾಸಕ ನಿಸರ್ಗ ನಾರಾಯಣಸ್ವಾಮಿ ಕರೆ ನೀಡಿದರು.

ದೇವನಹಳ್ಳಿ ವಿಧಾನಸಭಾ ಕ್ಷೇತ್ರದ ಜೆಡಿಎಸ್ ಅಧ್ಯಕ್ಷ ಎಸ್. ಮಹೇಶ್ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲಾ ಅಧ್ಯಕ್ಷ ಕೆ.ವಿ. ಮಂಜುನಾಥ್ ಅವರ ನೇತೃತ್ವದಲ್ಲಿ ನಡೆದ ಎಸ್‌ಸಿ ಘಟಕದ ನೂತನ ಪದಾಧಿಕಾರಿಗಳ ನೇಮಕಾತಿ ಪತ್ರ ವಿತರಣಾ ಸಮಾರಂಭದಲ್ಲಿ ಅವರು ಮಾತನಾಡಿದರು.

ಈ ಸಂದರ್ಭದಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲಾ ಜೆಡಿಎಸ್ ಎಸ್‌ಸಿ ಘಟಕದ ಅಧ್ಯಕ್ಷರಾಗಿ ಆಯ್ಕೆಯಾದ ನಾಗರಾಜು ಹಾಗೂ ದೇವನಹಳ್ಳಿ ತಾಲೂಕು ಎಸ್‌ಸಿ ಘಟಕದ ಅಧ್ಯಕ್ಷರಾಗಿ ಆಯ್ಕೆಯಾದ ರಾಮಣ್ಣ ಅವರಿಗೆ ಅಧಿಕೃತ ನೇಮಕಾತಿ ಪತ್ರ ವಿತರಿಸಿ ಅಭಿನಂದಿಸಲಾಯಿತು.

ಪರಿಶಿಷ್ಟ ಜಾತಿಯ ವಿವಿಧ ಸಮುದಾಯಗಳ ಮುಖಂಡರು ಒಗ್ಗಟ್ಟಿನಿಂದ ಪದಾಧಿಕಾರಿಗಳ ಆಯ್ಕೆ ಪ್ರಕ್ರಿಯೆ ನಡೆಸಿರುವುದು ಶ್ಲಾಘನೀಯ. ಪಕ್ಷವನ್ನು ಗ್ರಾಮಮಟ್ಟದಲ್ಲಿ ಬಲಪಡಿಸುವ ಮೂಲಕ ಮುಂಬರುವ ಚುನಾವಣೆಗಳಲ್ಲಿ ಉತ್ತಮ ಫಲಿತಾಂಶ ಸಾಧಿಸಲು ಎಲ್ಲರೂ ಶ್ರಮಿಸಬೇಕು ಎಂದು ಹೇಳಿದರು.

ಜೆಡಿಎಸ್ ರಾಜ್ಯದಲ್ಲಿ ಮತ್ತಷ್ಟು ಬಲಿಷ್ಠವಾಗಬೇಕಿದ್ದು, ಕಾರ್ಯಕರ್ತರು ಜನರೊಂದಿಗೆ ನಿರಂತರ ಸಂಪರ್ಕದಲ್ಲಿದ್ದು ಪಕ್ಷದ ತತ್ವ, ಸಿದ್ಧಾಂತಗಳನ್ನು ತಲುಪಿಸಬೇಕು ಎಂದು ಸಲಹೆ ನೀಡಿದರು.

ಬೆಂಗಳೂರು ಗ್ರಾಮಾಂತರ ಜಿಲ್ಲಾ ಜೆಡಿಎಸ್ ಅಧ್ಯಕ್ಷ ಕೆ.ವಿ. ಮಂಜುನಾಥ್ ಮಾತನಾಡಿ, ಎಸ್‌ಸಿ ಘಟಕದ ಪುನರ್‌ರಚನೆಗೆ ಹಿರಿಯ ಮುಖಂಡರಿಂದ ಉತ್ತಮ ಸ್ಪಂದನೆ ದೊರೆತಿದೆ ಎಂದರು.

# ಮುಖ್ಯಮಂತ್ರಿಯಾಗಿ ಡಿಕೆಶಿ: ಸಂಭ್ರಮಾಚರಣೆ

ತಿಪಟೂರು



ಡಿ.ಕೆ. ಶಿವಕುಮಾರ್ ಅವರು ರಾಜ್ಯದ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದ ಹಿನ್ನೆಲೆಯಲ್ಲಿ ತಾಲೂಕಿನ ಮಾದಿಹಳ್ಳಿ ಗೇಟ್ ಬಳಿ ಅವರ ಅಭಿಮಾನಿಗಳು ಸಂಭ್ರಮಾಚರಣೆ ನಡೆಸಿದರು.

ಡಿ.ಕೆ.ಶಿವಕುಮಾರ್ ಅಭಿಮಾನಿ ಬಳಗದ ಅಧ್ಯಕ್ಷ ಎಂ.ಎಂ. ರವೀಶ್ ಅವರ ನೇತೃತ್ವದಲ್ಲಿ ಸಾರ್ವಜನಿಕರಿಗೆ ಸಿಹಿ ಹಂಚಿ, ಪಟಾಕಿ ಸಿಡಿಸುವ ಮೂಲಕ ಸಂತಸ ವ್ಯಕ್ತಪಡಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಎಂ.ಎಂ. ರವೀಶ್, ಡಿ.ಕೆ. ಶಿವಕುಮಾರ್ ಅವರು ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿರುವುದು ತಮ್ಮಂತಹ ಕೋಟ್ಯಾಂತರ ಅಭಿಮಾನಿಗಳಿಗೆ ಸಂತೋಷದ ಕ್ಷಣವಾಗಿದೆ ಎಂದು ಹೇಳಿದರು.

ರಾಜ್ಯದ ಅಭಿವೃದ್ಧಿಗೆ ಹೊಸ ದಿಕ್ಕು ಸಿಗಲಿದ್ದು, ಪಕ್ಷದ ತಳಮಟ್ಟದ ಕಾರ್ಯಕರ್ತರಿಂದ ಸಾಮಾನ್ಯ ಜನರ ತನಕ ಎಲ್ಲರಿಗೂ ನ್ಯಾಯ ಒದಗಿಸುವ ನಾಯಕತ್ವವನ್ನು ಡಿ.ಕೆ. ಶಿವಕುಮಾರ್ ಅವರು ನೀಡಲಿದ್ದಾರೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು. ತಾಳ್ಮೆ, ದೃಢ ಸಂಕಲ್ಪ ಮತ್ತು ನಿರಂತರ ಪರಿಶ್ರಮದಿಂದ ಅವರು ಮುಖ್ಯಮಂತ್ರಿ ಹುದ್ದೆ ಅಲಂಕರಿಸುವಂತಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷರಾದ ಮಾಧುಸ್ವಾಮಿ, ಶಶಿಧರ್, ಮುಖಂಡರಾದ ಜಿ.ಕೆ. ವಿಲಾಸ್, ರಮೇಶ್, ವೆಂಕಟೇಶ್ ಸೇರಿದಂತೆ ಹಲವು ಮುಖಂಡರು

## ಡಿಕೆಶಿ ಸಂಪುಟದಲ್ಲಿ ಬಾಗೇಪಲ್ಲಿ ಶಾಸಕ ಎಸ್.ಎನ್. ಸುಬ್ಬಾರೆಡ್ಡಿಗೆ

# ಸಿಗಲಿದೆಯೇ ಸಚಿವ ಸ್ಥಾನ?

ಚಿಕ್ಕಬಳ್ಳಾಪುರ

ರಾಜ್ಯ ರಾಜಕೀಯದಲ್ಲಿ ನಡೆದಿರುವ ಬೆಳವಣಿಗೆಗಳ ನಡುವೆ ನೂತನ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಸಚಿವ ಸಂಪುಟ ರಚನೆಗೆ ಸಂಬಂಧಿಸಿದ ಚಟುವಟಿಕೆಗಳು ತೀವ್ರಗೊಂಡಿವೆ. ಇದರ ನಡುವೆ ಚಿಕ್ಕಬಳ್ಳಾಪುರ ಜಿಲ್ಲೆಯ ಬಾಗೇಪಲ್ಲಿ ಕ್ಷೇತ್ರದ ಶಾಸಕ ಎಸ್.ಎನ್. ಸುಬ್ಬಾರೆಡ್ಡಿ ಅವರಿಗೆ ಸಚಿವ ಸ್ಥಾನ ದೊರೆಯಬೇಕು ಎಂಬ ಬೇಡಿಕೆ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಅಭಿಮಾನಿಗಳ ವಲಯದಲ್ಲಿ ಜೋರಾಗಿ ಕೇಳಿಬರುತ್ತಿದೆ.

ಸತತ ಮೂರು ಬಾರಿ ವಿಧಾನಸಭಾ ಚುನಾವಣೆಯಲ್ಲಿ ಗೆಲುವು ಸಾಧಿಸಿರುವ ಎಸ್.ಎನ್. ಸುಬ್ಬಾರೆಡ್ಡಿ ಅವರು ಜಿಲ್ಲೆಯ ಹಿರಿಯ ಕಾಂಗ್ರೆಸ್ ನಾಯಕರಲ್ಲಿ ಒಬ್ಬರಾಗಿದ್ದು, ಪಕ್ಷದ ಸಂಘಟನೆ ಮತ್ತು ಕ್ಷೇತ್ರದ ಅಭಿವೃದ್ಧಿಗೆ ಸಲ್ಲಿಸಿರುವ ಸೇವೆಯನ್ನು ಪರಿಗಣಿಸಿ ಈ ಬಾರಿ ಸಚಿವ ಸ್ಥಾನ ನೀಡಬೇಕು ಎಂಬ ಒತ್ತಾಯ ವ್ಯಕ್ತವಾಗುತ್ತಿದೆ.

ಕಾಂಗ್ರೆಸ್ ಸರ್ಕಾರದ ಹಿಂದಿನ ಅವಧಿಗಳಲ್ಲಿಯೂ ಸಚಿವ ಸ್ಥಾನಕ್ಕಾಗಿ ಯಾವುದೇ ರೀತಿಯ ಲಾಬಿ ನಡೆಸದೆ ಸರಳ ಹಾಗೂ ನಿಷ್ಠಾವಂತ ರಾಜಕಾರಣಿಯಾಗಿ ಗುರುತಿಸಿಕೊಂಡಿರುವ ಸುಬ್ಬಾರೆಡ್ಡಿ ಅವರಿಗೆ ಈ ಬಾರಿ ಅವಕಾಶ ಸಿಗಬಹುದು ಎಂಬ ನಿರೀಕ್ಷೆ ಪಕ್ಷದ ಕಾರ್ಯಕರ್ತರಲ್ಲಿ ಹೆಚ್ಚಾಗಿದೆ.

ಆಂಧ್ರಪ್ರದೇಶ ಗಡಿಭಾಗಕ್ಕೆ ಹೊಂದಿಕೊಂಡಿರುವ ಬಾಗೇಪಲ್ಲಿ ಕ್ಷೇತ್ರಕ್ಕೆ ಇದುವರೆಗೆ ಸಚಿವ ಸ್ಥಾನ ದೊರೆತಿಲ್ಲ. ಹೀಗಾಗಿ ಈ ಬಾರಿ ಆದರೂ ಕ್ಷೇತ್ರಕ್ಕೆ ಸಚಿವ ಸ್ಥಾನ ದೊರೆಯಲಿ ಎಂಬ ಆಶಯದಿಂದ ವಿವಿಧ ದೇವಾಲಯಗಳಲ್ಲಿ ವಿಶೇಷ ಪೂಜೆಗಳು ನಡೆಯುತ್ತಿವೆ. ಕೆಲ ಧಾರ್ಮಿಕ ಕೇಂದ್ರಗಳಲ್ಲಿಯೂ ಅವರ ಪರವಾಗಿ ಪ್ರಾರ್ಥನೆ ಸಲ್ಲಿಸಲಾಗುತ್ತಿದೆ ಎಂದು ಬೆಂಬಲಿಗರು ತಿಳಿಸಿದ್ದಾರೆ.




ಸುಬ್ಬಾರೆಡ್ಡಿ ಅವರು ಕಳೆದ ಹಲವು ವರ್ಷಗಳಿಂದ ಸಮಾಜಸೇವೆ, ಬಡವರ ಪರ ಕಾಳಜಿ, ಸಾರ್ವಜನಿಕ ಸಮಸ್ಯೆಗಳಿಗೆ ಸ್ಪಂದನೆ, ಸಾಮೂಹಿಕ ವಿವಾಹಗಳು ಹಾಗೂ ಅಭಿವೃದ್ಧಿ ಕಾರ್ಯಗಳ ಮೂಲಕ ಜನಾನುರಾಗಿಯಾಗಿದ್ದಾರೆ ಎಂದು ಬೆಂಬಲಿಗರು ಅಭಿಪ್ರಾಯಪಟ್ಟಿದ್ದಾರೆ.

ಕಾಂಗ್ರೆಸ್ ಪ್ರಚಾರ ಸಮಿತಿ ಜಿಲ್ಲಾ ಅಧ್ಯಕ್ಷ ಹಾಗೂ ವಕೀಲ ಮಂಡಿಕಲ್ ನಾರಾಯಣಸ್ವಾಮಿ ಮಾತನಾಡಿ, ಸುಬ್ಬಾರೆಡ್ಡಿ ಅವರು ಸರಳ, ಸಜ್ಜನಿಕೆ ಹಾಗೂ ಜನಸ್ನೇಹಿ ವ್ಯಕ್ತಿತ್ವ ಹೊಂದಿದ್ದು, ಅವರಿಗೆ ಸಚಿವ ಸ್ಥಾನ ದೊರೆತರೆ ಜಿಲ್ಲೆಯ ಜನರಿಗೆ ಮತ್ತಷ್ಟು ಅನುಕೂಲವಾಗಲಿದೆ ಎಂದು ಹೇಳಿದರು.

ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಹಾಗೂ ರಾಜ್ಯ ಒಕ್ಕಲಿಗರ ಸಂಘದ ನಿರ್ದೇಶಕ ಯಲುವಳ್ಳಿ ಎನ್. ರಮೇಶ್ ಮಾತನಾಡಿ, ಸುಬ್ಬಾರೆಡ್ಡಿ ಅವರಿಗೆ ಸಚಿವ ಸ್ಥಾನ ಸಿಕ್ಕರೂ ಸಂತೋಷವೇ, ಅಥವಾ ಹಾಲಿ ಸಚಿವ ಡಾ. ಎಂ.ಸಿ. ಸುಧಾಕರ್ ಮುಂದುವರಿದರೂ ಅಭ್ಯಂತರವಿಲ್ಲ. ಜಿಲ್ಲೆಯ ಅಭಿವೃದ್ಧಿಯೇ ಮುಖ್ಯವಾಗಿದ್ದು, ಪಕ್ಷದ ಹೈಕಮಾಂಡ್ ಹಾಗೂ ಮುಖ್ಯಮಂತ್ರಿ ತೆಗೆದುಕೊಳ್ಳುವ ನಿರ್ಧಾರಕ್ಕೆ ಎಲ್ಲರೂ ಬದ್ಧರಾಗಿರಬೇಕು ಎಂದು ಹೇಳಿದರು. ಇನ್ನೊಂದೆಡೆ, ಹಾಲಿ ಸಚಿವರಾಗಿರುವ ಚಿಂತಾಮಣಿಯ ಡಾ. ಎಂ.ಸಿ. ಸುಧಾಕರ್ ಅವರು ಸಂಪುಟದಲ್ಲಿ ಮುಂದುವರಿಯುವ ಸಾಧ್ಯತೆಯೂ ಇದೆ ಎಂಬ ಅಭಿಪ್ರಾಯವನ್ನು ಪಕ್ಷದ ಕೆಲವು ಮುಖಂಡರು ವ್ಯಕ್ತಪಡಿಸಿದ್ದಾರೆ.

ಒಟ್ಟಾರೆ, ಜಿಲ್ಲೆಯ ವಿವಿಧ ಕ್ಷೇತ್ರಗಳಿಗೆ ಹಿಂದಿನ ಅವಧಿಗಳಲ್ಲಿ ಸಚಿವ ಸ್ಥಾನ ದೊರೆತಿದ್ದರೂ, ಬಾಗೇಪಲ್ಲಿ ಕ್ಷೇತ್ರಕ್ಕೆ ಇದುವರೆಗೆ ಆ ಅವಕಾಶ ಸಿಕ್ಕಿಲ್ಲ. ಹೀಗಾಗಿ ಡಿ.ಕೆ. ಶಿವಕುಮಾರ್ ನೇತೃತ್ವದ ಹೊಸ ಸಚಿವ ಸಂಪುಟದಲ್ಲಿ ಎಸ್.ಎನ್. ಸುಬ್ಬಾರೆಡ್ಡಿ ಅವರಿಗೆ ಸ್ಥಾನ ಸಿಗಲಿ ಎಂಬ ಆಶಯ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಅಭಿಮಾನಿಗಳಲ್ಲಿ ವ್ಯಕ್ತವಾಗುತ್ತಿದೆ.

# ಕೋವಿಡ್‌ನಿಂದ ಪೋಷಕರನ್ನು ಕಳೆದುಕೊಂಡ ಮಕ್ಕಳಿಗೆ ಜಿಲ್ಲಾಧಿಕಾರಿಗಳಿಂದ ಧೈರ್ಯ



ಚಿಕ್ಕಬಳ್ಳಾಪುರ

ಕೋವಿಡ್–19 ಸಾಂಕ್ರಾಮಿಕದ ವೇಳೆ ತಂದೆ–ತಾಯಿಯನ್ನು ಕಳೆದುಕೊಂಡ ಮಕ್ಕಳ ಸರ್ವತೋಮುಖ ಅಭಿವೃದ್ಧಿಗಾಗಿ ಸರ್ಕಾರ ಹಲವು ಯೋಜನೆಗಳನ್ನು ಜಾರಿಗೊಳಿಸಿದ್ದು, ಅವುಗಳ ಸದುಪಯೋಗ ಪಡೆದು ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಜಿ. ಪ್ರಭು ಅವರು ಕರೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಪಿ.ಎಂ. ಕೇರ್ಸ್ ಯೋಜನೆಯಡಿ ದಾಖಲಾದ ಮಕ್ಕಳ ಅನುಪಾಲನಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಕೋವಿಡ್ ಸಾಂಕ್ರಾಮಿಕದಿಂದ 16 ಮಕ್ಕಳು ಪರಿತ್ಯಕ್ತರಾಗಿದ್ದು, ಪ್ರಸ್ತುತ 9 ಮಕ್ಕಳು ಪಿ.ಎಂ. ಕೇರ್ಸ್ ಯೋಜನೆಯ ಸೌಲಭ್ಯ ಪಡೆಯುತ್ತಿದ್ದಾರೆ ಎಂದು ಅವರು ತಿಳಿಸಿದರು.

ಈ ಯೋಜನೆಯಡಿ ಜಿಲ್ಲಾಧಿಕಾರಿ ಹಾಗೂ ಫಲಾನುಭವಿಯ ಹೆಸರಿನಲ್ಲಿ ಜಂಟಿ ಖಾತೆ ತೆರೆಯಲಾಗಿದ್ದು, ಸರ್ಕಾರದ ಮಾರ್ಗಸೂಚಿಯಂತೆ ಮಕ್ಕಳ ವಯಸ್ಸಿಗೆ ಅನುಗುಣವಾಗಿ ಕನಿಷ್ಠ ರೂ.3.58 ಲಕ್ಷದಿಂದ ರೂ.10 ಲಕ್ಷದವರೆಗೆ ಮೊತ್ತವನ್ನು ಅಂಚೆ ಕಚೇರಿಯ ವೈಯಕ್ತಿಕ ಖಾತೆಗಳಲ್ಲಿ ಜಮೆ ಮಾಡಲಾಗಿದೆ ಎಂದು ವಿವರಿಸಿದರು.

ಮಕ್ಕಳು 23 ವರ್ಷ ವಯಸ್ಸು ಪೂರ್ಣಗೊಂಡ ನಂತರ ಈ ಮೊತ್ತವನ್ನು ಪಡೆಯಬಹುದಾಗಿದ್ದು, 18 ವರ್ಷ ತುಂಬಿದ ಬಳಿಕ ಯೋಜನೆಯಡಿ ಜಮೆಯಾಗುವ ಮೊತ್ತದ ಬಡ್ಡಿ ರೂಪದಲ್ಲಿ ಪ್ರತಿ ತಿಂಗಳು ರೂ.5,000 ವರೆಗೆ ಪಡೆಯುವ ಅವಕಾಶವಿದೆ ಎಂದು ಹೇಳಿದರು.

ಜಿಲ್ಲೆಯ 1ರಿಂದ 12ನೇ ತರಗತಿವರೆಗೆ ವ್ಯಾಸಂಗ ಮಾಡುತ್ತಿರುವ 8 ಮಕ್ಕಳಿಗೆ ವಾರ್ಷಿಕ ರೂ.20,000 ವಿದ್ಯಾರ್ಥಿವೇತನ ನೀಡಲಾಗುತ್ತಿದೆ. ಜೊತೆಗೆ ಪ್ರಯೋಜಕತ್ವ ಕಾರ್ಯಕ್ರಮದಡಿ ತಿಂಗಳಿಗೆ ರೂ.4,000 ಪ್ರೋತ್ಸಾಹಧನ ಹಾಗೂ ರಾಜ್ಯ ಸರ್ಕಾರದಿಂದ ಹೆಚ್ಚುವರಿಯಾಗಿ ರೂ.3,500 ನೆರವು ನೀಡಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ಅಲ್ಲದೆ, ವೈದ್ಯಕೀಯ ಅಗತ್ಯಗಳಿಗಾಗಿ ರೂ.5 ಲಕ್ಷದವರೆಗೆ ಆರೋಗ್ಯ ವಿಮೆ ಸೌಲಭ್ಯವೂ ಲಭ್ಯವಿದ್ದು, ಸರ್ಕಾರದ ಎಲ್ಲ ಯೋಜನೆಗಳನ್ನು ಸಮರ್ಪಕವಾಗಿ ಬಳಸಿಕೊಂಡು ಆತ್ಮವಿಶ್ವಾಸದಿಂದ ಬದುಕು ಕಟ್ಟಿಕೊಳ್ಳಬೇಕು ಎಂದು ಮಕ್ಕಳಿಗೆ ಸಲಹೆ ನೀಡಿದರು.

ಸಭೆಯಲ್ಲಿ ಮಕ್ಕಳ ಸುರಕ್ಷತೆ ಕುರಿತಂತೆ ವಿಶೇಷ ಒತ್ತು ನೀಡಿದ ಜಿಲ್ಲಾಧಿಕಾರಿಗಳು, ಜಿಲ್ಲೆಯ ಎಲ್ಲಾ ಶಾಲೆಗಳಲ್ಲಿ 'ಗುಡ್ ಟಚ್' ಮತ್ತು 'ಬ್ಯಾಡ್ ಟಚ್' ಕುರಿತು ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ತಾಲ್ಲೂಕುವಾರು ಹಾಗೂ ಶಾಲಾವಾರು ವೇಳಾಪಟ್ಟಿ ರೂಪಿಸಿ ಮಕ್ಕಳಲ್ಲಿ ಲೈಂಗಿಕ ದೌರ್ಜನ್ಯ ತಡೆ ಕುರಿತ ಜಾಗೃತಿ ಮೂಡಿಸಲು ಕ್ರಮವಹಿಸುವಂತೆ ನಿರ್ದೇಶನ ನೀಡಿದರು.

ಕೋವಿಡ್‌ನಿಂದ ಪೋಷಕರನ್ನು ಕಳೆದುಕೊಂಡ ಮಕ್ಕಳ ಶಿಕ್ಷಣ ವೆಚ್ಚವನ್ನು ಸರ್ಕಾರದಿಂದ ಭರಿಸಲು ಹಾಗೂ ಅಗತ್ಯವಿದ್ದಲ್ಲಿ ಸರ್ಕಾರಿ ವಸತಿ ನಿಲಯಗಳಲ್ಲಿ ವಿಶೇಷ ಅವಕಾಶ ಕಲ್ಪಿಸಲು ಜಿಲ್ಲಾಧಿಕಾರಿಗಳು ಸ್ಥಳದಲ್ಲೇ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಭೆಯ ಬಳಿಕ ಮಕ್ಕಳೊಂದಿಗೆ ಸಮಾಲೋಚನೆ ನಡೆಸಿದ ಅವರು, "ನಿಮ್ಮೊಂದಿಗೆ ಜಿಲ್ಲಾಡಳಿತ ಸದಾ ಇರುತ್ತದೆ. ಯಾವುದೇ ಸಮಸ್ಯೆ ಎದುರಾದರೂ ನಮ್ಮನ್ನು ಸಂಪರ್ಕಿಸಿ" ಎಂದು ಧೈರ್ಯ ತುಂಬಿದರು. ಈ ಸಂದರ್ಭದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಬಿ. ಶಿಲ್ಪ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ನೌತಾಜ್, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ತೇಜಾನಂದರೆಡ್ಡಿ, ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಹಾಗೂ ಪರಿತ್ಯಕ್ತ ಮಕ್ಕಳು ಉಪಸ್ಥಿತರಿದ್ದರು.

# ದರೋಡೆಗೆ ಹೊಂಚು ಹಾಕುತ್ತಿದ್ದವರ ಬಂಧನ

ವಿಜಯಪುರ

ವಿಜಯಪುರ–ಕೋಲಾರ ರಸ್ತೆಯಲ್ಲಿ, ದರೋಡೆ ಮಾಡಲು ಕಾರಿನಲ್ಲಿ ಹೊಂಚು ಹಾಕುತ್ತಿದ್ದವರ ಮೇಲೆ ಪೊಲೀಸರು ಮಿಂಚಿನ ಕಾರ್ಯಾಚರಣೆ ನಡೆಸಿ, 6 ಮಂದಿಯಿಂದ ಮಾರಕಾಸ್ತ್ರಗಳೊಂದಿಗೆ ಕಾಯುತ್ತಿದ್ದ ಗುಂಪಿನ ಮೇಲೆ ದಾಳಿ ಮಾಡಿರುವ ವಿಜಯಪುರ ಪೊಲೀಸರು, 6 ಮಂದಿಯನ್ನು ವಶಕ್ಕೆ ಪಡೆದುಕೊಂಡು, ಕೇಸು ದಾಖಲಿಸಿ, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

ಸಹಾಯಕ ಸಬ್ ಇನ್ ಸ್ಪೆಕ್ಟರ್ ರಾಧಾಕೃಷ್ಣ, ಅವರು, ಈ ಬಗ್ಗೆ ದೂರು ದಾಖಲಿಸಿದ್ದು, ವಿಜಯಪುರ–ಕೋಲಾರ ರಸ್ತೆಯ ಹಾರ್ಡಿಪುರ ಗ್ರಾಮದ ಬಳಿ ಸುಮಾರು 5–6 ಜನರು, ಕಾರನ್ನು ನಿಲ್ಲಿಸಿಕೊಂಡು, ಕೈಗಳಲ್ಲಿ ಅಪಾಯಕರ ಆಯುಧಗಳಾದ ಲಾಂಗ್, ಕಲ್ಲು, ಮತ್ತು ಖಾರದ ಪುಡಿ ಹಿಡಿದುಕೊಂಡು ದರೋಡೆ ಮಾಡಲು ಹೊಂಚು ಹಾಕುತ್ತಿರುವ ಬಗ್ಗೆ ಮಾಹಿತಿ ಬಂದ ಹಿನ್ನೆಲೆಯಲ್ಲಿ, ಹಾರ್ಡಿಪುರ ಗ್ರಾಮದ ಬಳಿಗೆ ಹೋಗಿ ನೋಡಿದಾಗ, ವಿಜಯಪುರ – ಕೋಲಾರ ರಸ್ತೆಯ ಹಾರ್ಡಿಪುರ ಗ್ರಾಮದ ವೆಂಕಟರಮಣಸ್ವಾಮಿ ದೇವಾಲಯದ ಸಮೀಪದ ರಸ್ತೆಯ ಪಕ್ಕದಲ್ಲಿ. ಕಾರನ್ನು ನಿಲ್ಲಿಸಿಕೊಂಡು 6 ಜನರು ತಮ್ಮ ಕೈಗಳಲ್ಲಿ ಮಾರಕಾಸ್ತ್ರಗಳನ್ನು ಹಿಡಿದುಕೊಂಡು ರಸ್ತೆಯಲ್ಲಿ ನಿಂತು ರಸ್ತೆಯಲ್ಲಿ ಹೋಗುವ ಸಾರ್ವಜನಿಕರ ಕಾರುಗಳನ್ನು ಗಮನಿಸುತ್ತಿದ್ದರು. ಅವರುಗಳ ಮೇಲೆ ನಮಗೆ ಅನುಮಾನ ಬಂದು ಕೂಡಲೆ ನಾವುಗಳು ಅವರನ್ನು ಸುತ್ತುವರೆದಾಗ, ಎಲ್ಲಾರು ಓಡಲು ಪ್ರಯತ್ನಿಸಿದರು. ಅವರನ್ನು ಹಿಡಿದು, ವಶಕ್ಕೆ ತೆಗೆದುಕೊಂಡು, ವಿಚಾರಿಸಿದಾಗ ದರೋಡೆ ಮಾಡಲು ಹೊಂಚು ಹಾಕುತ್ತಿರುವುದಾಗಿ ಒಪ್ಪಿಕೊಂಡಿದ್ದಾರೆ.

ಆರೋಪಿಗಳನ್ನು ಶಹಬಾಜ್, ಅರ್ಬಾಜ್, ಮುನಿ, ವಿನಯ್, ಪುನೀತ್, ಗುರುರಾಜ್ ಎಂದು ಗುರ್ತಿಸಲಾಗಿದ್ದು, ಆಯುಧಗಳ ಸಮೇತ ವಶಕ್ಕೆ ಪಡೆದುಕೊಳ್ಳಲಾಗಿದೆ. ಕೃತ್ಯಕ್ಕೆ ಬಳಕೆ ಮಾಡಿದ್ದ ಕಾರನ್ನೂ ವಶಕ್ಕೆ ಪಡೆಯಲಾಗಿದೆ ಎಂದು ದೂರಿನಲ್ಲಿ ತಿಳಿಸಿದ್ದಾರೆ.

# ರಸ್ತೆ–ಚರಂಡಿ ದುರಸ್ತಿಗೆ ಮನವಿ



ದೊಡ್ಡಬಳ್ಳಾಪುರ

ನಗರದಲ್ಲಿನ ಹದಗೆಟ್ಟ ರಸ್ತೆಗಳ ದುರಸ್ತಿ ಹಾಗೂ ಕಸ ಮತ್ತು ಮಣ್ಣಿನಿಂದ ತುಂಬಿರುವ ಚರಂಡಿಗಳ ಸ್ವಚ್ಛತೆಗೆ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ರಾಜ್ಯ ವಿಜಯ ಕರ್ನಾಟಕ ರಕ್ಷಣಾ ವೇದಿಕೆ ಪದಾಧಿಕಾರಿಗಳು ದೊಡ್ಡಬಳ್ಳಾಪುರ ನಗರಸಭೆ ಪೌರಾಯುಕ್ತರಿಗೆ ಮನವಿ ಸಲ್ಲಿಸಿದರು.

ಸಂಘಟನೆಯ ಸಂಸ್ಥಾಪಕ ಅಧ್ಯಕ್ಷ ಎ. ನಂಜಪ್ಪ ಮಾತನಾಡಿ, ದೊಡ್ಡಬಳ್ಳಾಪುರ ನಗರದ ಬಹುತೇಕ ರಸ್ತೆಗಳು ಗುಂಡಿಗಳಿಂದ ಕೂಡಿದ್ದು, ಮಳೆಗಾಲ ಆರಂಭವಾಗಿರುವ ಹಿನ್ನೆಲೆಯಲ್ಲಿ ಗುಂಡಿಗಳಲ್ಲಿ ನೀರು ನಿಂತು ವಾಹನ ಸವಾರರಿಗೆ ಅಪಾಯ ಉಂಟಾಗುತ್ತಿದೆ ಎಂದು ಹೇಳಿದರು. ಆದ್ದರಿಂದ ತಕ್ಷಣವೇ ಡಾಂಬರೀಕರಣ ಕಾಮಗಾರಿ ನಡೆಸಿ ರಸ್ತೆಗಳನ್ನು ಸುಗಮಗೊಳಿಸಬೇಕು ಎಂದು ಒತ್ತಾಯಿಸಿದರು.

ನಗರದ ಹಲವೆಡೆ ಒಳಚರಂಡಿಗಳು ಮಣ್ಣು ಹಾಗೂ ಕಸದಿಂದ ತುಂಬಿಕೊಂಡಿದ್ದು, ತ್ಯಾಜ್ಯ ನೀರು ರಸ್ತೆಗಳ ಮೇಲೆ ಹರಿಯುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ ಎಂದು ಅವರು ತಿಳಿಸಿದರು. ವನ್ನಿಗರಪೇಟೆ, ಜೆಸಿ ವೃತ್ತದಿಂದ ರಂಗಪ್ಪ ವೃತ್ತದವರೆಗೆ, ದೇವರಾಜನಗರ, ಡಿ.ಕ್ರಾಸ್ ರಸ್ತೆ, ಹೊಸ ಕರಗದಗುಡಿ ರಸ್ತೆ, ದರ್ಜಿಪೇಟೆ ಮುಖ್ಯರಸ್ತೆ, ತಾಲ್ಲೂಕು ರಸ್ತೆ, ಮುಕ್ತಾಂಬಿಕಾ ರಸ್ತೆ ಹಾಗೂ ಸಂಜಯನಗರ ಸೇರಿದಂತೆ ವಿವಿಧ ಪ್ರದೇಶಗಳ ಚರಂಡಿಗಳನ್ನು ತಕ್ಷಣ ಸ್ವಚ್ಛಗೊಳಿಸಿ ಮಳೆನೀರು ಸರಾಗವಾಗಿ ಹರಿಯುವಂತೆ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ಜೆಸಿ ವೃತ್ತದಿಂದ ರಂಗಪ್ಪ ವೃತ್ತದವರೆಗೆ ನಡೆದ ಕಾಮಗಾರಿಯಿಂದ ರಸ್ತೆ ಸಂಪೂರ್ಣ ಹಾಳಾಗಿದ್ದು, ಈ ಬಗ್ಗೆ ಈಗಾಗಲೇ ಹಲವು ಬಾರಿ ನಗರಸಭೆ ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಗಿದೆ. ಆದರೂ ಯಾವುದೇ ಕ್ರಮ ಕೈಗೊಳ್ಳದಿರುವುದು ವಿಷಾದನೀಯ ಎಂದು ಅವರು ಹೇಳಿದರು.

ಸಂಬಂಧಿಸಿದ ಅಧಿಕಾರಿಗಳು ಶೀಘ್ರದಲ್ಲೇ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸದಿದ್ದರೆ ನಗರಸಭೆ ಕಚೇರಿ ಎದುರು ತಮಟೆ ಚಳವಳಿ ನಡೆಸಲಾಗುವುದು ಎಂದು ವೇದಿಕೆ ಎಚ್ಚರಿಕೆ ನೀಡಿದೆ.

ಈ ಸಂದರ್ಭದಲ್ಲಿ ರಾಜ್ಯ ವಿಜಯ ಕರ್ನಾಟಕ ರಕ್ಷಣಾ ವೇದಿಕೆಯ ಬೆಂಗಳೂರು ಗ್ರಾಮಾಂತರ ಜಿಲ್ಲಾಧ್ಯಕ್ಷ ಮಂಜುನಾಥ್, ಬಿ.ಎನ್. ಚಂದ್ರಶೇಖರ್, ಎನ್. ಚಂದ್ರಶೇಖರಯ್ಯ, ವೇಣುಗೋಪಾಲ್, ಬಿ.ಎನ್. ಸೋಮಶೇಖರ್, ಆರ್. ಶಿವಕುಮಾರ್, ಸೌಮ್ಯಬಾಯಿ, ನಾಗಮಣಿ, ರೇಷ್ಮಾ ಖಾನಂ, ಪದ್ಮ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಜಮೀನು ವಿವಾದ ಹಿನ್ನೆಲೆ ಮಹಿಳೆ ಮೇಲೆ ಹಲ್ಲೆ

ಕೋಲಾರ

ಜಮೀನು ವಿವಾದದ ಹಿನ್ನೆಲೆ ಮಹಿಳೆಯೊಬ್ಬರ ಮೇಲೆ ಹಲ್ಲೆ ನಡೆಸಿರುವ ಘಟನೆ ತಾಲೂಕಿನ ಧನಮಟ್ನಹಳ್ಳಿ ಗ್ರಾಮದಲ್ಲಿ ನಡೆದಿರುವುದಾಗಿ ಆರೋಪಿಸಲಾಗಿದೆ. ಘಟನೆಯಲ್ಲಿ ಗ್ರಾಮದ ವರಲಕ್ಷ್ಮಿ ಗಂಭೀರವಾಗಿ ಗಾಯಗೊಂಡಿದ್ದು, ಅವರು ಕೋಲಾರದ ಎಸ್.ಎನ್. ಆರ್. ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಈ ಸಂಬಂಧ ಅದೇ ಗ್ರಾಮದ ನೀಲಾವತಿ, ಅವರ ಪತಿ ಮುನಿರಾಜು ಹಾಗೂ ವಕೀಲ ವೆಂಕಟಾಚಲಪತಿ ವಿರುದ್ಧ ಹಲ್ಲೆ ಹಾಗೂ ಪ್ರಾಣ ಬೆದರಿಕೆ ಆರೋಪ ಕೇಳಿಬಂದಿದೆ. ಈ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ವರಲಕ್ಷ್ಮಿ ಅವರ ಪತಿ ವೆಂಕಟರಾಮ್ ಹಾಗೂ ಕುಟುಂಬದ ಸದಸ್ಯರು, ವಂಶವೃಕ್ಷಕ್ಕೆ ಸಹಿ ಬೇಕೆಂದು ನಂಬಿಸಿ ಸಹಿ ಪಡೆಯಲಾಗಿದ್ದು, ಬಳಿಕ ಪಿತ್ರಾರ್ಜಿತ ಆಸ್ತಿಯನ್ನು ಲೀಲಾವತಿ ತಮ್ಮ ಹೆಸರಿಗೆ ಮಾಡಿಕೊಂಡಿದ್ದಾರೆ ಎಂದು ಆರೋಪಿಸಿದರು.

# ಕನಕಪುರದಲ್ಲಿ ಡಿಕೆಶಿ ಮುಖ್ಯಮಂತ್ರಿ ಪದಗ್ರಹಣಕ್ಕೆ ಹಬ್ಬದ ಸಂಭ್ರಮ

ಕನಕಪುರ

ತಾಲ್ಲೂಕಿನ ಹೆಮ್ಮೆಯ ನಾಯಕ ಡಿ.ಕೆ. ಶಿವಕುಮಾರ್ ಅವರು ರಾಜ್ಯದ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದ ಹಿನ್ನೆಲೆಯಲ್ಲಿ ಕನಕಪುರ ತಾಲ್ಲೂಕಿನಾದ್ಯಂತ ಸಂಭ್ರಮದ ವಾತಾವರಣ ನಿರ್ಮಾಣವಾಗಿತ್ತು. ಕಾಂಗ್ರೆಸ್ ಕಾರ್ಯಕರ್ತರು, ಮುಖಂಡರು ಹಾಗೂ ಸಾರ್ವಜನಿಕರು ಈ ಐತಿಹಾಸಿಕ ಕ್ಷಣವನ್ನು ಹಬ್ಬದ ರೀತಿಯಲ್ಲಿ ಆಚರಿಸಿದರು.

ತಾಲ್ಲೂಕಿನ ವಿವಿಧ ಹೋಬಳಿ ಕೇಂದ್ರಗಳು, ಗ್ರಾಮ ಪಂಚಾಯಿತಿ ವ್ಯಾಪ್ತಿಯ ದೇವಾಲಯಗಳಲ್ಲಿ ವಿಶೇಷ ಪೂಜೆ ಸಲ್ಲಿಸಿ, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಆರೋಗ್ಯ, ಆಯುಷ್ಯ ಹಾಗೂ ರಾಜ್ಯದ ರೈತರು, ಬಡವರು ಮತ್ತು ಜನಸಾಮಾನ್ಯರ ಪರವಾಗಿ ಉತ್ತಮ ಆಡಳಿತ ನೀಡುವ ಶಕ್ತಿ ದೊರೆಯಲಿ ಎಂದು ಪ್ರಾರ್ಥಿಸಲಾಯಿತು.



ಕಳೆದ ಎರಡು ದಿನಗಳಿಂದ ನಗರ ಸೇರಿದಂತೆ ವಿವಿಧ ಬಡಾವಣೆಗಳಲ್ಲಿ ಡಿಕೆಶಿಗೆ ಶುಭಕೋರುವ ಬ್ಯಾನರ್‌ಗಳು ಹಾಗೂ ಫ್ಲೆಕ್ಸ್‌ಗಳು ರಾರಾಜಿಸುತ್ತಿದ್ದವು. ಮುಖ್ಯಮಂತ್ರಿ ಪದಗ್ರಹಣ ಸಮಾರಂಭದಲ್ಲಿ ಭಾಗವಹಿಸಲು ಸೀಮಿತ ಅವಕಾಶವಿದ್ದ ಕಾರಣ ಸಾರ್ವಜನಿಕರು ನೇರ ಪ್ರಸಾರ ವೀಕ್ಷಿಸಲು ನಗರದ ಚನ್ನಬಸಪ್ಪ ವೃತ್ತದಲ್ಲಿ ಬೃಹತ್ ಎಲ್‌ಇಡಿ ಪರದೆ ಅಳವಡಿಸಲಾಗಿತ್ತು.

ಮಧ್ಯಾಹ್ನ 3 ಗಂಟೆಯಿಂದಲೇ ಪ್ರಮಾಣವಚನ ಸಮಾರಂಭದ ನೇರ ಪ್ರಸಾರ ಆರಂಭವಾಗಿದ್ದು, ನೂರಾರು ಕಾರ್ಯಕರ್ತರು ಮತ್ತು ಸಾರ್ವಜನಿಕರು ಸೇರಿ ಕಾರ್ಯಕ್ರಮ ವೀಕ್ಷಿಸಿದರು. ಡಿ.ಕೆ. ಶಿವಕುಮಾರ್ ಅವರು ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದ ಕ್ಷಣದಲ್ಲಿ ಕಾರ್ಯಕರ್ತರು ಪಟಾಕಿ ಸಿಡಿಸಿ, ಜಯಘೋಷ ಮೊಳಗಿಸಿ, ಸಾರ್ವಜನಿಕರಿಗೆ ಸಿಹಿ ಹಂಚುವ ಮೂಲಕ ಸಂತಸ ವ್ಯಕ್ತಪಡಿಸಿದರು.

ತಾಲ್ಲೂಕಿನ ಸಾತನೂರು ಹೋಬಳಿ ಕೇಂದ್ರದಲ್ಲಿಯೂ ಕಾಂಗ್ರೆಸ್ ಕಾರ್ಯಕರ್ತರು ಡಿಕೆಶಿ ಅವರ ಬೃಹತ್ ಕಟೌಟ್‌ಗೆ ಪುಷ್ಪಹಾರ ಅರ್ಪಿಸಿ ಸಂಭ್ರಮಿಸಿದರು. ಪಟಾಕಿ ಸಿಡಿಸಿ, ಸಿಹಿ ಹಂಚಿ ಹಾಗೂ ಅನ್ನದಾನ ಕಾರ್ಯಕ್ರಮ ಆಯೋಜಿಸುವ ಮೂಲಕ ದಿನವಿಡೀ ವಿಜಯೋತ್ಸವ ಆಚರಿಸಲಾಯಿತು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy